ಸಂಪುಟ: 14 Volume | ಸಂಚಿಕೆ: 64 Issue | ಪುಟಗಳು 08 Pages | ಶುಕ್ರವಾರ 12 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ
ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಹಣಕ್ಕೆ ಕೈ, ಕಾಲುಗಳಿದ್ದಂತೆ ಉಪಯೋಗಿಸಿ, ಇಲ್ಲವೇ ಕಳೆದುಕೊಳ್ಳಿ.

–ಹೆನ್ರಿ ಫೋರ್ಡ್



ದೆಹಲಿಯಲ್ಲಿ ಹನ್ನೊಂದನೇ ನೀತಿ ಆಯೋಗದ ಸಭೆ ನಡೆಯಿತು.ಪ್ರಧಾನಿ ನರೇಂದ್ರ ಮೋದಿ ನೇತೃತ್ವ ವಹಿಸಿದ್ದು, ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಸೇರಿ ಅನೇಕ ಗಣ್ಯರು ಹಾಜರಿದ್ದರು.



ಸಿಎಂ ಡಿ ಕೆ ಶಿವಕುಮಾರ್ ಅವರು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ದೆಹಲಿಯ ಅವರ ಕಚೇರಿಯಲ್ಲಿ ಗುರುವಾರ ಅಹವಾಲು ಸಲ್ಲಿಸಿ, ಸಮಾಲೋಚನೆ ನಡೆಸಿದರು.

## ಹಾವು ಕಚ್ಚಿ ಮಹಿಳೆ ಸಾವು



**ಚಿಟಗುಪ್ಪ:** ತಾಲೂಕಿನ ಕರಕನಳ್ಳಿ ಗ್ರಾಮದಲ್ಲಿ ಗುರುವಾರ ಹಾವು ಕಚ್ಚಿ ಕೂಲಿ ಕಾರ್ಮಿಕ ಮಹಿಳೆ ನಾಗಮ್ಮ ಮಾಣಿಕ ಪುಲ್ಲಾ (47) ಮೃತಪಟ್ಟಿದ್ದಾರೆ. ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಕೆಲಸಕ್ಕಾಗಿ ಕರಕನಳ್ಳಿ ಗ್ರಾಮದ ಸರ್ವೇ ನಂಬರ್ 100ರಲ್ಲಿ ನಾಲ್ಲಾ ಹುಳ್ಳ ಎತ್ತುವ ಸಮಯದಲ್ಲಿ ಹಾವು ಕಚ್ಚಿದ್ದು, ಹೆಚ್ಚಿನ ಚಿಕಿತ್ಸೆಗೆ ಮನ್ನಾಖೇಳ್ಳಿ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆಗೆ ಫಲಕಾರಿಯಾಗದೆ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ. ಈ ಘಟನೆ ಕುರಿತು ಬೆಮಳಖೇಡಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ವೈಫಲ್ಯ ಮುಚ್ಚಿ ಹಾಕುವ ಸಲುವಾಗಿ ಕೇಂದ್ರದ ಕಡೆ ಕಾಂಗ್ರೆಸ್ ಬೆರಳು



**ಬೆಂಗಳೂರು:** ರಾಜ್ಯದ ಕಾಂಗ್ರೆಸ್ ಸರಕಾರವು ತನ್ನ ವೈಫಲ್ಯ ಮುಚ್ಚಿ ಹಾಕುವ ಸಲುವಾಗಿ ಕೇಂದ್ರ ಸರಕಾರ ಮಲತಾಯಿ ಧೋರಣೆ ಮಾಡುತ್ತಿದೆ; ಅನ್ಯಾಯ ಮಾಡುತ್ತ ಇದೆ ಎಂದು ಪದೇಪದೇ ಪ್ರಸ್ತಾಪಿಸುತ್ತದೆ ಎಂಬುದಾಗಿ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಆಕ್ಷೇಪಿಸಿದರು. ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ನಡೆದ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದರು. ವಾಸ್ತವಿಕ ಸತ್ಯ ಏನೆಂದರೆ, ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ನಡೆದಿಲ್ಲ; ಪರಿಶಿಷ್ಟ ಪಂಗಡಕ್ಕೆ ಮೀಸಲಿಟ್ಟ ಹಣವನ್ನೂ ತೆಲಂಗಾಣಕ್ಕೆ ತೆಗೆದುಕೊಂಡು ಹೋಗಿ ದುರ್ಬಳಕೆ ಮಾಡಿದ್ದು ರಾಜ್ಯದ ಜನರ ಮುಂದಿದೆ ಎಂದು ಗಮನ ಸೆಳೆದರು. ಅಭಿವೃದ್ಧಿ ಶೂನ್ಯ ಕಾಂಗ್ರೆಸ್ ಸರಕಾರವಿದ್ದು, ಇವರ ವೈಫಲ್ಯ ಮುಚ್ಚಿಹಾಕಲು ಕೇಂದ್ರ ಸರಕಾರ ದೂರುವ ಕೆಲಸ ಮಾಡುತ್ತಾರೆ ಎಂದು ಆರೋಪಿಸಿದರು.ಮಾಜಿ ಉಪಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ ಅವರು ಪ್ರಶ್ನೆಗೆ ಉತ್ತರಿಸಿ, ನಳ್ಳಿಗಳಲ್ಲಿ ನೀರು ಬರಿಸುವ ಜವಾಬ್ದಾರಿ ರಾಜ್ಯ ಸರಕಾರದ್ದು ಎಂದು ತಿಳಿಸಿದರು.

## ಜವಳಿ ಪಾರ್ಕ್ ಮೊದಲ ಹಂತದ ನಕ್ಷೆ ಸಿದ್ಧ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಲಬುರಗಿಯಲ್ಲಿ ಸ್ಥಾಪನೆಯಾಗಲಿರುವ ಮಹತ್ವಾಕಾಂಕ್ಷಿ 'ಪಿಎಂ–ಮಿತ್ರ ಜವಳಿ ಪಾರ್ಕ್' ಯೋಜನೆಯನ್ನು ಅತ್ಯಂತ ವ್ಯವಸ್ಥಿತವಾಗಿ ಹಾಗೂ ವೇಗವಾಗಿ ಅನುಷ್ಠಾನಗೊಳಿಸಲು ಮೊದಲ ಹಂತದ ಮೂಲಸೌಕರ್ಯ ನೀಲನಕ್ಷೆ ಮತ್ತು ಆಡಳಿತಾತ್ಮಕ ಮಾರ್ಗಸೂಚಿಯನ್ನು ಸಿದ್ಧಪಡಿಸಿದೆ ಎಂದು ಗೃಹ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಕಲಬುರಗಿ ಬಳಿ ಮೊದಲ ಹಂತದಲ್ಲಿ 1,000 ಎಕರೆ ಪ್ರದೇಶದಲ್ಲಿ ನಿರ್ಮಿಸಲಾಗುತ್ತಿರುವ ಜವಳಿ ಪಾರ್ಕ್ ಕಾಮಗಾರಿಗಳ ಕುರಿತು ಚರ್ಚಿಸಲು ಸಚಿವರು ಇಂದು ವಿಕಾಸಸೌಧದ ತಮ್ಮ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಮೊದಲ ಹಂತದಲ್ಲಿ 1,000 ಎಕರೆ ಪ್ರದೇಶದಲ್ಲಿ ಪಾರ್ಕ್ ನಿರ್ಮಾಣ ಕಾಮಗಾರಿಗಳು ಆರಂಭವಾಗಲಿದ್ದು,



ಹೂಡಿಕೆ ಮಾಡುವ ಉದ್ಯಮಗಳಿಗೆ ತಕ್ಷಣವೇ ಉತ್ಪಾದನೆ ಆರಂಭಿಸಲು ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಜಾಗತಿಕ ಮಟ್ಟದ ಮೂಲಸೌಕರ್ಯಗಳನ್ನು ಒಳಗೊಂಡ 'ಪ್ಲಗ್ ಅಂಡ್ ಪ್ಲೇ' ವ್ಯವಸ್ಥೆಯನ್ನು ಕಲ್ಪಿಸಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಸಭೆಯಲ್ಲಿ ವಾಣಿಜ್ಯ ಹಾಗೂ ಕೈಗಾರಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಸೆಲ್ವಕುಮಾರ್ ಎಸ್, ರೋಹಿಣಿ ಸಿಂಧೂರಿ, ಗೋವಿಂದರೆಡ್ಡಿ ಹಾಗೂ ವಿಸಿ ಮೂಲಕ ಕಲಬುರಗಿ ಜಿಲ್ಲಾಧಿಕಾರಿ ಮೊಹಮ್ಮದ್ ಇಕ್ರಮ್ ಷರೀಫ್ ಹಾಗೂ ಇನ್ನಿತರ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

## ರಕ್ತದಾನ ಜೀವದಾನಕ್ಕೆ ಸಮ: ಡಾ. ರಾಜಶ್ರೀ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ನಗರದ ಕೆಬಿಎನ್ ಆಸ್ಪತ್ರೆಯ ಕೆಬಿಎನ್ ರಕ್ತನಿದಿ ಕೇಂದ್ರದಲ್ಲಿ ಪ್ರಸೂತಿ ವಿಭಾಗ, ಕರ್ನಾಟಕ ರಾಜ್ಯ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರ ಸಂಘ ಹಾಗೂ ಗುಲ್ಬರ್ಗಾ ಪ್ರಸೂತಿ ಮತ್ತು ಸ್ತ್ರೀ ರೋಗ ಸಂಸ್ಥೆಯ ಸಹಯೋಗದಲ್ಲಿ ಗುರುವಾರ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

ಕರ್ನಾಟಕ ರಾಜ್ಯ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರ ಸಂಘದ ಅಧ್ಯಕ್ಷರಾದ ಡಾ ರಾಜಶ್ರೀ ಪಾಲಾದಿ ಮಾತನಾಡುತ್ತ, ರಕ್ತ ದಾನ ಜೀವ ದಾನ ನೀಡುತ್ತದೆ. ಹೆರಿಗೆ ಸಮಯದಲ್ಲಿ ಕೆಲವು ಮಹಿಳೆಯರು ರಕ್ತದ ಕೊರತೆಯಿಂದ ಬಳಲುತ್ತಾರೆ, ಆಗ ರಕ್ತದಿಂದಲೇ ಅವರಿಗೆ ಮರುಜನ್ಮ ಸಿಗುತ್ತದೆ. ಹಸುಗೂಸು, ರಸ್ತೆ ಅಪಘಾತಕ್ಕೆ ತುತ್ತದವರು, ಸರ್ಜಿಕಲ್ ಸಮಯದಲ್ಲಿ ರಕ್ತದ ಅವಶ್ಯಕತೆ ಉಂಟಾಗುತ್ತದೆ. ದೇಹದಲ್ಲಿ ಹೊಸ




ರಕ್ತ ಉಂಟಾಗುವ ಸಾಧ್ಯತೆ ಇದ್ದು, ರಕ್ತ ದಾನಕ್ಕೆ ಯುವಕರು ಮುಂದಾಗಬೇಕು ಎಂದರು.

ವಿವಿಯ ಸಂಸ್ಥಾಪಕ ಕುಲಾಧಿಪತಿ ದಿವಗಂತ ಡಾ ಸಯ್ಯದ್ ಷಾ ಖುಸ್ರೋ ಹುಸ್ಸೇನಿ ಹಾಗೂ ಈಗಿನ ಕುಲಾಧಿಪತಿ ಡಾ ಸಯ್ಯದ ಮುಹಮ್ಮದ್ ಅಲ್ ಹುಸೇನಿಯವರು ಈ ಆಸ್ಪತ್ರೆಯಲ್ಲಿ ಅನೇಕ ಸೌಲಭ್ಯಗಳನ್ನು ಒದಗಿಸಿದ್ದಾರೆ. ಕೆಬಿಎನ್ ಜನರ ಸೇವೆಗಾಗಿ ಸದಾ ಸಿದ್ಧ ಎಂದರು. ಶಿಬಿರ ಆಯೋಜನೆಗಾಗಿ ಆಯೋಜಕರಿಗೆ ಅಭಿನಂದಿಸಿದರು.

# ಹೊಸಬರಿಗೇ ಮಂತ್ರಿಗಿರಿ..?

## ಹೊಸ ಮುಖಗಳಿಗೆ ಆದ್ಯತೆ ಕೊಡಬೇಕು: ಹೈಕಮಾಂಡ್, ದಿಲ್ಲಿಯಲ್ಲಿ ಆಕಾಂಕ್ಷಿಗಳ ಲಾಬಿ ಜೋರು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯ ಸರ್ಕಾರದ ಸಂಪುಟ ವಿಸ್ತರಣೆಯ ಕಸರತ್ತು ಮುನ್ನೆಲೆಗೆ ಬಂದಿದೆ. ಸಚಿವರಾಗಲು ಸಾಕಷ್ಟು ಮಂದಿ ಆಕಾಂಕ್ಷಿಗಳು ಇದ್ದು, ಮಂತ್ರಿಗಿರಿಗೆ ಲಾಬಿ ಜಾರಾಗಿದೆ. ಆದರೆ, ಹೈಕಮಾಂಡ್ ಹೊಸ ಮುಖಗಳಿಗೆ ಆದ್ಯತೆ ಕೊಡಬೇಕು ಎಂದು ಸೂಚನೆ ನೀಡಿದೆ. ಈ ಹಿನ್ನೆಲೆಯಲ್ಲಿ ಎರಡನೇ ಹಂತದ ಸಂಪುಟ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ.

**ಈ ತಿಂಗಳ ಅಂತ್ಯಕ್ಕೆ ಅಸ್ತು?:** 13 ಸಚಿವರು ಮೊದಲ ಹಂತದಲ್ಲಿ ಪ್ರಮಾಣ ವಚನ ಸ್ವೀಕಾರ ಮಾಡಿದ್ದಾರೆ. ಇನ್ನು 20 ಸ್ಥಾನಗಳು ಖಾಲಿ ಉಳಿದಿವೆ. ಹೀಗಾಗಿ ಈ ತಿಂಗಳ ಅಂತ್ಯಕ್ಕೆ ಎರಡನೇ ಹಂತದ ಸಂಪುಟಕ್ಕೆ ಯಾರೆಲ್ಲಾ ಎಂಬುವುದು ಸ್ಪಷ್ಟಗೊಳ್ಳಲಿದೆ. ಆದರೆ ಈಗಾಗಲೇ ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಸಚಿವರಾಗಿದ್ದವರು ಆಕಾಂಕ್ಷಿಗಳಾಗಿದ್ದಾರೆ.

**ಯುವಕರಿಗೆ ಆದ್ಯತೆ:** ಡಿಕೆಶಿ ಸಂಪುಟದಲ್ಲಿ ಯುವಕರಿಗೆ ಆದ್ಯತೆ ನೀಡಬೇಕು ಎಂಬ ಆಗ್ರಹ ಇದೆ. ಆದರೆ ಯಾರಿಗೆಲ್ಲಾ ಸಚಿವ ಸ್ಥಾನ ಸಿಗಲಿದೆ ಎಂಬ ಕುತೂಹಲವೂ ಇದೆ. ಸಂಪುಟ ಸೇರ್ಪಡೆಗೊಳ್ಳಲು ಸಾಕಷ್ಟು ಮಂದಿ ಲಾಬಿ ನಡೆಸುತ್ತಿದ್ದಾರೆ. ಈ ಲಿಸ್ಟ್ ನಲ್ಲಿ ಮೊದಲ ಬಾರಿ ಶಾಸಕರಾದವರೂ ಇದ್ದಾರೆ. ಹಾಗಾಗಿ ಹೈಕಮಾಂಡ್ ನಡೆ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ.



### ಉ.ಕಕ್ಕೆ ಅನ್ಯಾಯ..!

ಮುಂಬೈ ಕರ್ನಾಟಕ ಭಾಗ–ಕ್ಕೆ ಪ್ರಾತಿನಿಧ್ಯತೆ ಇಲ್ಲ. ಅದು ಬಿಜೆಪಿ ಪ್ರಭಾವ ಇರುವ ಭಾಗ, ಹೀಗಾಗಿ ಅಲ್ಲಿಗೆ ಒಂದು ಸ್ಥಾನ ನೀಡಬೇಕು. ಉತ್ತರ ಕರ್ನಾಟಕಕ್ಕೆ ಅನ್ಯಾಯ ಆಗುತ್ತಿದೆ ಎಂದು ಪೀಠಾಧಿಪತಿಗಳು ಹೇಳುತ್ತಿದ್ದಾರೆ. ಪ್ರತಿ ಬಾರಿಯೂ ಕೂಡ ಉತ್ತರ ಕರ್ನಾಟಕಕ್ಕೆ ಅನ್ಯಾಯ ಆಗುತ್ತಿದೆ. ಅಲ್ಲಿ ಹೆಚ್ಚಿನ ಪ್ರಾತಿನಿಧ್ಯತೆ ಸಿಗುವಂತಾಗಬೇಕು ಎಂದಿದ್ದಾರೆ ಶಾಸಕ ಪ್ರಸಾದ್ ಅಬ್ಬಯ್ಯ.

### ಕ್ರೀಡೆ ಕಾತೆಗೆ ಬೆಡಿಕೆ ಆದರೆ..!

ಹೆಚ್ಚುವರಿಯಾಗಿ ಕ್ರೀಡಾ ಖಾತೆ ನೀಡಿ ಎಂದಿದ್ದೆ. ಅದನ್ನ ಬೇರೆಯವರಿಗೆ ಕೊಟ್ಟಿದ್ದಾರೆ. ಕ್ರೀಡ ಖಾತೆ ನೀಡಿದ್ದರೆ ಕ್ರಾಂತಿ ಮಾಡುತ್ತಿದ್ದೆವು. ಕ್ರೀಡೆಯಲ್ಲಿ ರಾಜ್ಯ ನಂಬರ್ ವನ್ ಮಾಡ್ತಿದ್ದೆ. ಹಿಂದೆಯೂ ಕ್ರೀಡಾ ಖಾತೆ ಕೇಳಿದ್ದೆ. ಈಗ ಪರಮೇಶ್ವರ್ ಅವರಿಗೆ ಕೊಟ್ಟಿದ್ದಾರೆ. ಅವರಿಗೂ ಕ್ರೀಡೆ ಬಗ್ಗೆ ಒಲವಿದೆ. ಅದ–ಕ್ಕೆಕೇಳಿ ಪಡೆದಿರಬಹುದು ಎಂದಿದ್ದಾರೆ ಸಚಿವ ಸತೀಶ್ ಜಾರಕಿಹೊಳಿ.

### ಡಾ.ಮಹದೇವಪ್ಪಗೆ ಸಚಿವ ಸ್ಥಾನ ಕಷ್ಟ

ಪಕ್ಷಕ್ಕಾಗಿ ಅವರು ದುಡಿದಿಲ್ಲ ಎನ್ನುವ ಅಸಮಾಧಾನ ಡಾ.ಮಹದೇವಪ್ಪನವರ ಮೇಲೆ ಹೈಕಮಾಂಡ್‌ಗೆ ಇದೆ ಎನ್ನಲಾಗುತ್ತಿದೆ. ಸಿದ್ದರಾಮಯ್ಯನವರ ಸಂಪುಟದಲ್ಲಿ ಮಹತ್ವದ ಜವಾಬ್ದಾರಿ ಅವರಿಗೆ ನೀಡಿದ್ದು, ಹೊಸಬರಿಗೆ ಮಹದೇವಪ್ಪ ಅವಕಾಶ ಬಿಟ್ಟುಕೊಡಲಿ ಎನ್ನುವ ನಿರ್ಧಾರಕ್ಕೆ ಹೈಕಮಾಂಡ್ ಬಂದಿದೆ. ಸಂಪುಟವಿಸ್ತರಣೆಯ ವೇಳೆ ಅವರಿಗೆ ಸಚಿವ ಸ್ಥಾನ ಸಿಗುವುದು ಡೌಟ್ ಎಂದಿದೆ ಮೂಲ.

### ಆಕಾಂಕ್ಷಿಗಳ ದಂಡು..!

ಕೆ.ಷಡಕ್ಷರಿ ಸೇರಿದಂತೆ ಅನೇಕರು ಸಚಿವ ಸ್ಥಾನ ಆಕಾಂಕ್ಷಿಗಳಾಗಿದ್ದಾರೆ. ಈ ಪೈಕಿ ಶಾಸಕರಾ ಪ್ರದೀಪ್ ಈಶ್ವರ್, ಎ.ಎಸ್. ಪೊನ್ನಣ್ಣ, ನಯನಾ ಮೋಟಮ್ಮ, ದರ್ಶನ್ ಧ್ರುವನಾರಾಯಣ, ಬಿ. ನಾಗೇಂದ್ರ, ಭರತ್ ರೆಡ್ಡಿ, ಎಂಎಲ್ಸಿ ಸಲೀಮ್ ಅಹ್ಮದ್, ಅಶೋಕ್ ಪಟ್ಟಣ್, ನರೇಂದ್ರಸ್ವಾಮಿ, ಎ.ಆರ್. ಕೃಷ್ಣಮೂರ್ತಿ ಸೇರಿದಂತೆ ಹಿರಿಯ ನಾಯಕರು ದೆಹಲಿಗೆ ಭೇಟಿ ನೀಡಲು ಯೋಜಿಸುತ್ತಿದ್ದಾರೆ.

## ಉಡಾನ್ ಯೋಜನೆಯಲ್ಲಿ ಬೆಂಗಳೂರು-ಶಿವಮೊಗ್ಗ ಮಾರ್ಗ ಸೇರಿಸಿ: ಕೇಂದ್ರಕ್ಕೆ ಎಂಬಿಪಿ ಪತ್ರ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನಷ್ಟದ ಕಾರಣಕ್ಕಾಗಿ ಸದ್ಯಕ್ಕೆ ಸ್ಥಗಿತಗೊಂಡಿರುವ ಬೆಂಗಳೂರು–ಶಿವಮೊಗ್ಗ ವಿಮಾನ ಸೇವೆಯನ್ನು ಸದ್ಯದಲ್ಲೇ ನಡೆಯಲಿರುವ ಉಡಾನ್ ಬಿಡ್ಡಿಂಗ್ ಪ್ರಕ್ರಿಯೆಯಲ್ಲಿ ಸೇರಿಸಬೇಕು. ವಿಮಾನಸೇವೆಯ ಪುನಾರಂಭವು ಮಲೆನಾಡು ಮತ್ತು ಮಧ್ಯ ಕರ್ನಾಟಕದ ಪ್ರಗತಿಗೆ ನಿರ್ಣಾಯಕವಾಗಿದೆ ಎಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ. ಈ ಸಂಬಂಧವಾಗಿ ಅವರು ಕೇಂದ್ರ ವಿಮಾನಯಾನ ಸಚಿವ ರಾಮಮೋಹನ್ ನಾಯ್ಡು ಅವರಿಗೆ ಪತ್ರ ಬರೆದು ಆಗ್ರಹಿಸಿದ್ದಾರೆ.

ಶಿವಮೊಗ್ಗ ವಿಮಾನ ನಿಲ್ದಾಣವು 2023ರ ಫೆಬ್ರವರಿಯಲ್ಲಿ ಕಾರ್ಯಾರಂಭ ಮಾಡಿತು. ಇದಾದ ಮೇಲೆ ಇಂಡಿಗೋ ಸಂಸ್ಥೆಯು ಶಿವಮೊಗ್ಗ–ಬೆಂಗಳೂರು ನಡುವೆ ವಿಮಾನ ಕಾರ್ಯಾಚರಣೆ ನಡೆಸುತ್ತಿತ್ತು. ಆದರೆ ಕೆಲ ತಿಂಗಳಿನಿಂದ ಇದು ಸ್ಥಗಿ–ತಗೊಂಡಿದ್ದು, ತೊಂದರೆಯಾಗಿದೆ.



ಶಿವಮೊಗ್ಗ, ಚಿಕ್ಕಮಗಳೂರು, ಉತ್ತರ ಕನ್ನಡ, ದಾವಣಗೆರೆ, ಚಿತ್ರದುರ್ಗ, ಹಾವೇರಿ ಜಿಲ್ಲೆಗಳ ಆರ್ಥಿಕ, ಕೃಷಿ, ಪ್ರವಾಸೋದ್ಯಮ ಮತ್ತು ಕೈಗಾರಿಕಾ ಬೆಳವಣಿಗೆಗೆ ಇದರಿಂದ ಹಾನಿಯಾಗಿದೆ ಎಂದು ಅವರು ಪತ್ರದಲ್ಲಿ ವಿವರಿಸಿದ್ದಾರೆ.

ಶಿವಮೊಗ್ಗದಿಂದ ಬೆಂಗಳೂರು ನಗರಕ್ಕೆ ನೇರ ವಿಮಾನ ಇಲ್ಲದೆ ಇರುವುದರಿಂದ ದೇಶದ ಬೇರೆಬೇರೆ ಭಾಗಗಳು ಮತ್ತು ವಿದೇಶಗಳಿಗೆ ಹೋಗುವವರಿಗೂ ತೊಂದರೆಯಾಗಿದೆ. ಆದ್ದರಿಂದ ವಿಜಿಟಿ ಫಂಡ್ ನೆರವಿನ ಮೂಲಕ ಉಡಾನ್ ಯೋಜನೆಯ ಉದ್ದೇಶಿತ ಬಿಡ್ ನಲ್ಲಿ ಈ ಮಾರ್ಗದ ಸೇರ್ಪಡೆ ಮಾಡಲು ತಾವು ಮಧ್ಯೆ ಪ್ರವೇಶಿಸಬೇಕು ಎಂದು ಅವರು ವಿವರಿಸಿದ್ದಾರೆ. ಶಿವಮೊಗ್ಗ ವಿಮಾನ ನಿಲ್ದಾಣದಲ್ಲಿ ನೈಟ್ ಲ್ಯಾಂಡಿಂಗ್ ಸೌಲಭ್ಯ ಒದಗಿಸುವ ಕಾಮಗಾರಿ ಭರದಿಂದ ಸಾಗಿದೆ. ಆದ್ದರಿಂದ ಈ ಮನವಿಯನ್ನು ಗಂಭೀರವಾಗಿ ಪರಿಗಣಿಸಿ, ಸಕಾರಾತ್ಮಕವಾಗಿ ಸ್ಪಂದಿಸಬೇಕು ಎಂದು ಪಾಟೀಲ ಕೋರಿದ್ದಾರೆ.

# ಪರವಾನಗಿ ಇಲ್ಲದ ಹರಿಗೋಲು, ಲಕ್ಷಾಂತರ ಪೋಲು

• ರಾಮಕೃಷ್ಣಸಿ.ಡಿ, ಗಂಗಾವತಿ

ಸಣಾಪುರ ಗ್ರಾ.ಪಂ ವ್ಯಾಪ್ತಿಯ ಹನುಮನಹಳ್ಳಿಬಳಿ ಪರವಾನಗಿ ಇಲ್ಲದ ಹರಿಗೋಲೆ ಅಪಾಯಕಾರಿಯಾಗಿದೆ ಎಂದು ಸ್ಥಳೀರು ಆರೋಪಿಸುತ್ತಾರೆ.

ತುಂಗಭದ್ರಾನದಿ ಮತ್ತು ಹಂಪಿ–ಆನೆಗೊಂದಿ ಸುತ್ತಮುತ್ತಲಿನ ನದಿಪಾತ್ರದಲ್ಲಿ ಸಣಾಪುರ ಗ್ರಾ.ಪಂ ವ್ಯಾಪ್ತಿಯ ಋಷ್ಯಮುಖ ಪರ್ವತ, ಸಾಣಾಪುರ ಕೆರೆಗಳಲ್ಲಿ, ಪ್ರವಾಸಿ ಮಂದಿರ ಹತ್ತಿರದ ವಾಟರ್‌ಫಾಲ್ಸ್‌ನಲ್ಲಿ ಯಾವುದೇ ಪರವಾನಿಗೆ ಇಲ್ಲದೇ, ಪ್ರವಾಸಿಗರಿಗೆ ಭದ್ರತೆ ಇಲ್ಲದೇ ಕಾನೂನುಬಾಹಿರವಾಗಿ ಬೋಟ್, ಹರಿಗೋಲು ಹಾಕುವ ಮೂಲಕ ಪ್ರವಾಸಿಗರಿಂದ ಲಕ್ಷಾಂತರ ರೂ. ಪಡೆಯುತ್ತಿದ್ದಾರೆ ಎಂದು ಕರ್ನಾಟಕ ದಲಿತ ಸೇನೆಯ ಕೊಪ್ಪಳ ಜಿಲ್ಲಾಧ್ಯಕ್ಷರಾದ ಉಡಚಪ್ಪ ಶ್ರೀರಾಮನಗರ ಅವರು ಖಂಡಿಸಿದ್ದಾರೆ.

**ಸ್ಥಳೀಯ ಅಧಿಕಾರಿಗಳ ಕೈ ಚಳಕ..?**





### ನೀರು ನಾಯಿ, ಜೀವಕ್ಕೇ ಹಾನಿ..!

ಈ ಕೆರೆ ಹಾಗೂ ನದಿ ಪ್ರದೇಶಗಳಲ್ಲಿ ನೀರುನಾಯಿ ಇರುವುದರಿಂದ ಪ್ರವಾಸಿಗರ ಜೀವಕ್ಕೆ ಹಾನಿಯುಂಟಾಗುವ ಸಂಭವವಿದ್ದು, ಅದಕ್ಕೆ ಅನಧಿಕೃತವಾಗಿ ಬೋಟ್ ಅಥವಾ ಹರಿಗೋಲು ಹಾಕಿದವರೇ ನೇರ ಹೊಣೆಗಾರರಾಗಲಿದ್ದಾರೆ. ಈ ಬಗ್ಗೆ ಸ್ಥಳೀಯ ಗ್ರಾ.ಪಂ ಅಧಿಕಾರಿಗಳಿಗೆ, ತಾ.ಪಂ ಅಧಿಕಾರಿಗಳಿಗೆ, ತಹಶೀಲ್ದಾರರಿಗೆ ದೂರು ನೀಡಿದರೂ ಯಾವುದೇ ಪ್ರಯೋಜನವಾಗಿರುವುದಿಲ್ಲ. ಇಷ್ಟರಲ್ಲೇ ಜಿಲ್ಲಾಧಿಕಾರಿಗಳಿಗೂ ಮನವಿ ಸಲ್ಲಿಸಿ ಪ್ರತಿಭಟನೆ ನಡೆಸಲಾಗುವುದು ಎನ್ನುವುದು ಸ್ಥಳೀಯರ ಆರೋಪ.

### ಯಾವುದೇ ಟೆಂಡರ್ ಇಲ್ಲ

ಈ ರೀತಿಯಲ್ಲಿ ಹರಿಗೋಲು ಹಾಕಲು ಟೆಂಡರ್‌ನಲ್ಲಿ ಭಾಗವಹಿಸಿ ಹಾಕಬಹುದಾಗಿದ್ದು, ಆದರೆ ಇಲ್ಲಿ ಯಾವುದೇ ಟೆಂಡರ್ ನಲ್ಲಿ ಭಾಗವಹಿಸದೇ, ಪ್ರವಾಸಿಗರಿಗೆ ಯಾವುದೇ ಲೈಫ್ ಜಾಕೇಟ್ ನಂತಹ ಭದ್ರತೆಗಳನ್ನು ನೀಡುತ್ತಿಲ್ಲ. ಸಂಬಂಧಪಟ್ಟ ಇಲಾಖೆ ಅಥವಾ ಸಕ್ಷಮ ಪ್ರಾಧಿಕಾರದ ಪರವಾನಿಗೆ ಇಲ್ಲದೇ ಕಾನೂನುಬಾಹಿರವಾಗಿ ಇಲ್ಲಿಯ ವಾಟರ್ ಫಾಲ್ಸ್, ಕೆರೆ ಹಾಗೂ ನದಿ ಪ್ರದೇಶಗಳಲ್ಲಿ ಹರಿಗೋಲು ಹಾಕಲಾಗುತ್ತಿದೆ ಎಂದು ಸ್ಥಳೀಯರು ದೂರುತ್ತಿದ್ದಾರೆ.



ತುಂಗಭದ್ರಾ ನದಿ, ಸಣಾಪುರ ಗ್ರಾ.ಪಂ ವ್ಯಾಪ್ತಿಯ ಹನುಮನಹಳ್ಳಿ ಹತ್ತಿರ ಯಾವುದೇ ಪರವಾನಿಗೆ, ಭದ್ರತೆ ಇಲ್ಲದೇ ಬೋಟ್ (ಹರಿಗೋಲು) ಹಾಕುತ್ತಿರುವುದನ್ನು ತಡೆಯಲು ಆಗ್ರಹ ನಾವು ಅನೇಕಬಾರಿ ಪ್ರಯತ್ನಿಸಿದ್ದೇವೆ. ಅಧಿಕಾರಿಗಳಿಗೂ ಹೇಳಿದ್ದೇವೆ. ಪ್ರಯೋಜನ ಶೂನ್ಯ

–ಉಡುಚಪ್ಪ ಶ್ರೀರಾಮನಗರ
ಕರ್ನಾಟಕ ದಲಿತ ಸೇನೆಯ ಕೊಪ್ಪಳ ಜಿಲ್ಲಾಧ್ಯಕ್ಷ

## ಜಿಟಿ ದೇವೇಗೌಡರು JDS ಪಕ್ಷ ಬಿಡಲ್ಲ, ಮುಂದೆ ನಮ್ಮ ಚಿಹ್ನೆಯಿಂದಲೇ ಸ್ಪರ್ಧಿಸುತ್ತಾರೆ: ಶಾಸಕ ಹೆಚ್ ಡಿ ರೇವಣ್ಣ

# ಕೆಯುಡಬ್ಲ್ಯೂಜೆ: ನೂತನ ಸಾಲಿನ ಪದಾಧಿಕಾರಿಗಳ ಪದಗ್ರಹಣ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ನೂತನ ಪದಾಧಿಕಾರಿಗಳು ಇದೊಂದು ಹುದ್ದೆ ಎಂದು ಭಾವಿಸದೆ ಜವಾಬ್ದಾರಿ, ಕರ್ತವ್ಯ ಎಂದು ಭಾವಿಸಿ ಸಂಘವನ್ನು ಮುನ್ನಡೆಸಿಕೊಂಡು ಹೋಗಬೇಕೆಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಕರೆ ನೀಡಿದರು.

2025–28ನೇ ಸಾಲಿಗಾಗಿ ನೂತನವಾಗಿ ಆಯ್ಕೆಯಾದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಹಾಗೂ ಪ್ರಥಮ ಜಿಲ್ಲಾ ಕಾರ್ಯಕಾರಿಣಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಂಘ ಎಂದರೆ ಅದೊಂದು ಕುಟುಂಬವಿದ್ದಂತೆ. ವೈಮನಸ್ಸು, ಭಿನ್ನಾಭಿಪ್ರಾಯ ಎಲ್ಲವನ್ನೂ ಬದಿಗಿಟ್ಟು, ಸಂಘಕ್ಕೆ ಕಪ್ಪುಚುಕ್ಕೆ ಬರದಂತೆ ಮುನ್ನಡೆಸಿಕೊಂಡು ಹೋಗಬೇಕು. ಸಂಘವಿದ್ದರೆ ಮಾತ್ರ ನಾವು. ನೂರು ವರ್ಷಗಳ ಹಿಂದೆ ಡಿವಿಜಿಯವರು ಕಟ್ಟಿದ ಈ ಪತ್ರಕರ್ತರ ಸಂಘವು ಹಲವು ಪತ್ರಕರ್ತರ ಪರವಾಗಿ ಕೆಲಸ ಮಾಡುತ್ತಿದೆ. ಪತ್ರಕರ್ತರು ಕೂಡಾ ಸಂಘದ ನಿಯಮಗಳಿಗೆ ಅನುಸಾರವಾಗಿ ನಡೆದುಕೊಳ್ಳುವ ಬದ್ಧತೆ ತೋರಬೇಕೆಂದು ಸಲಹೆ ನೀಡಿದರು.

ಮುಂದುವರೆದು ಮಾತನಾಡಿದ ತಗಡೂರು ಅವರು ಪತ್ರಕರ್ತರಲ್ಲಿ ಸಂವೇದನೆ ಮತ್ತು ಸೂಕ್ಷತೆ ಇರಬೇಕು. ನಕಲಿ ಪತ್ರಕರ್ತರಿಗೆ ಕಡಿವಾಣ ಹಾಕುವುದರ ಜೊತೆಗೆ



ಸಂಘದ ಗುರುತಿನ ಚೀಟಿಯನ್ನು ನಕಲು ಮಾಡಿ ಓಡಾಡುವವರ ಮೇಲೆ ಕ್ರಮ ಕೈಗೊಳ್ಳಿ. ನೂತನ ಅಧ್ಯಕ್ಷರು ಸೇರಿದಂತೆ ಪದಾಧಿಕಾರಿಗಳಿಗೆ ಸಂಘಟನೆ ಸಂದರ್ಭದಲ್ಲಿ ಅವಮಾನ, ನಿಂದನೆಗಳು ಸಹಜ. ಆದರೆ ಅವುಗಳನ್ನು ಮೆಟ್ಟಿನಿಂತು ಸಂಘಟಿಸಿದಾಗ ಬಹುಮಾನಗಳು ನಮ್ಮ ಮನೆಬಾಗಿಲಿಗೆ ಬರುತ್ತವೆ. ನೂತನ ಪದಾಧಿಕಾರಿಗಳು ಸಂಘವನ್ನು ರಾಜ್ಯದಲ್ಲಿಯೇ ಮಾದರಿಯಾಗುವ ನಿಟ್ಟಿನಲ್ಲಿ ಸಂಘಟಿಸಲಿ. ಸಂಘದ ಧ್ವಜವನ್ನು ಬಾನೆತ್ತರಕ್ಕೆ ಹಾರಿಸಲಿ ಎಂದು ಶುಭ ಹಾರೈಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಮಂಜುನಾಥ ಸುಳ್ಳೊಳ್ಳಿ ಮಾತನಾಡಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು ವಾರ್ತಾ ಇಲಾಖೆಯ ಸಹಯೋಗದೊಂದಿಗೆ ಇಡೀ ರಾಜ್ಯದಾದ್ಯಂತ ಕಾರ್ಯನಿರ್ವಹಿಸುವ ಏಕೈಕ ಸಂಘವಾಗಿದ್ದು, ಬಹುತೇಕ ಜಿಲ್ಲೆಗಳಲ್ಲಿ ಅಲ್ಲಿಯ ಪತ್ರಿಕಾ ಭವನಗಳನ್ನು ಸಂಘವೇ ಮುನ್ನಡೆಸಿಕೊಂಡು ಹೋಗುತ್ತಿದೆ. ಮುಂಬರುವ ದಿನಗಳಲ್ಲಿ ಬೀದರ ಜಿಲ್ಲೆಯಲ್ಲಿಯೂ ಸಹ ಇಂತಹದ್ದೆ ಮಾದರಿಯ ಕಾರ್ಯ ನಡೆಯಲಿ ಎಂಬುದು ಸರ್ವರ ಅಭಿಲಾಷೆಯಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಸಂಘದ ಜಿಲ್ಲಾಧ್ಯಕ್ಷ ಆನಂದ ದೇವಪ್ಪ ಮಾತನಾಡಿ ಬೀದರ ಜಿಲ್ಲೆಯಲ್ಲಿ ಜಿಲ್ಲಾ ಸಂಘವು ಆಸ್ತಿತ್ವಕ್ಕೆ ಬರಬೇಕಾದರೆ ಇಲ್ಲಿ ಸಮ್ಮೇಳನ ಮಾಡಬೇಕೆಂಬ ರಾಜ್ಯ ಸಂಘದ ನಿರ್ದೇಶನಕ್ಕೆ ನಮ್ಮೆಲ್ಲರ ಪದಾಧಿಕಾರಿಗಳು ಕೈಜೋಡಿಸಿ ಸಮ್ಮೇಳನ ಯಶಸ್ವಿಗೊಳಿಸಿದರು. ಹಾಗಾಗಿ ಸಮ್ಮೇಳನದಲ್ಲಿ ಕರ್ತವ್ಯನಿಷ್ಠೆ ಮೆರೆದ ಪತ್ರಕರ್ತರಿಗೆ ಪದಾಧಿಕಾರಿಗಳನ್ನಾಗಿ ನೇಮಿಸಲಾಗಿದೆ. ನಾವೆಲ್ಲರೂ ಹುದ್ದೆಗಾಗಿ ಹಾತೊರೆಯದೆ ಕರ್ತವ್ಯಕ್ಕಾಗಿ ಮುನ್ನಡೆಯೋಣ. ಪದಾಧಿಕಾರಿ ಹುದ್ದೆಯು ದೊಡ್ಡದು ಚಿಕ್ಕದು ಎಂದು ಭಾವಿಸದೆ ಸರ್ವರೂ ಒಂದೇ ಎನ್ನುವ



ಮನೋಭಾವದೊಂದಿಗೆ ಕರ್ತವ್ಯಪ್ರಜ್ಞೆ ಮೆರೆದು ಇಡೀ ರಾಜ್ಯಕ್ಕೆ ಮಾದರಿ ಸಂಘವನ್ನಾಗಿ ಪರಿವರ್ತಿಸೋಣ. ಇದಕ್ಕೆ ತಮ್ಮೆಲ್ಲರ ಸಹಕಾರ ಹಿರಿಯರ ಮಾರ್ಗದರ್ಶನ, ರಾಜ್ಯ ಸಂಘದ ಬಲ ಜರೂರಿಯಾಗಿದೆ ಎಂದು ನುಡಿದ ಅವರು 40ನೇ ರಾಜ್ಯ ಪತ್ರಕರ್ತರ ಸಮ್ಮೇಳನದ ಆಯವ್ಯಯ ಮಂಡಿಸಿದರು.

ಸಂಘದ ನೂತನ ಗೌರವ ಸಲಹೆಗಾರಾದ ಮಲ್ಲಿಕಾರ್ಜುನ ಬಿರಾದಾರ, ರಾಷ್ಟ್ರೀಯ ಕಾರ್ಯಕಾರಿ ಮಂಡಳಿ ಸದಸ್ಯ ಅಶೋಕಕುಮಾರ ಕರಂಜಿ, ಜಿಲ್ಲಾ ಸಂಘದ ಉಪಾಧ್ಯಕ್ಷ ಬಸವರಾಜ ಕಾಮಶೆಟ್ಟಿ, ಕಾರ್ಯದರ್ಶಿ ಶಶಿಕಾಂತ ಶೆಂಬೆಳ್ಳಿ, ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಆದೀಶ ವಾಲಿ, ಮಲ್ಲಿಕಾರ್ಜುನ ಮರಕಲೆ ಮಾತನಾಡಿದರು. ಸಂಘದ ಗೌರವ ಸಲಹೆಗಾರ ಗಂಧರ್ವಸೇನಾ, ದೀಪಕ ವಾಲಿ, ರಾಷ್ಟ್ರೀಯ ಕಾರ್ಯಕಾರಿಣಿ ಮಂಡಳಿ ಸದಸ್ಯ ಬಸವರಾಜ ಪವಾರ್ ವೇದಿಕೆ ಮೇಲಿದ್ದರು.

ಸಭೆಯಲ್ಲಿ ಕೆಲವು ನಿರ್ಣಯಗಳನ್ನು ಕೈಗೊಳ್ಳಲಾಯಿತು. ಬೀದರ ಪತ್ರಿಕಾ ಭವನವನ್ನು ಕೆಯುಡಬ್ಲೂಜೆ ಸುಪರ್ದಿಗೆ ಪಡೆದು ಅದನ್ನು ಅನುಷ್ಠಾನಗೊಳಿಸಲು ಒಕ್ಕೊರಲ ನಿರ್ಣಯ ಕೈಗೊಳ್ಳಲಾಯಿತು. 40ನೇ ರಾಜ್ಯ ಪತ್ರಕರ್ತರ ಸಮ್ಮೇಳನದ ಆಯವ್ಯಯ ಮಂಡಿಸಿದ ಜಿಲ್ಲಾಧ್ಯಕ್ಷರ ನಿರ್ಣಯಕ್ಕೆ ಸರ್ವರೂ ಒಮ್ಮತದಿಂದ ಸಮ್ಮತಿಸಿದರು. ಸಮ್ಮೇಳನಕ್ಕೆ ಸಹಕರಿಸಿದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ ಹಾಗೂ ಜನಪ್ರತಿನಿಧಿಗಳು, ರಾಜಕೀಯ ಮುತ್ಸದ್ದಿಗಳು ಎಲ್ಲಾ ಇಲಾಖೆಗಳ ಅಧಿಕಾರಿಗಳು–ಸಿಬ್ಬಂದಿಗಳು, ದಾನಿಗಳಿಗೆ ಜಿಲ್ಲಾ ಸಂಘವು ಸರ್ವಸಮ್ಮತದಿಂದ ಅಭಿನಂದಿಸುವ ಅಂಗೀಕಾರ ಕೈಗೊಂಡಿತು. ಹೀಗೆ ಹಲವಾರು ವಿಷಯಗಳನ್ನು ಚರ್ಚಿಸಿ ಸಂಘವು ಒಮ್ಮತದ ಅಭಿಪ್ರಾಯಕ್ಕೆ ಬಂದಿರುವುದು ವಿಶೇಶವಾಗಿತ್ತು.

ಇದೇ ವೇಳೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ನೂತನ ಪದಾಧಿಕಾರಿಗಳಿಗೆ ಹಾಗೂ ಜಿಲ್ಲಾ ಕಾರ್ಯಕಾರಿಣಿ ಸಮಿತಿ ಸದಸ್ಯರಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು. ನಂತರ ಎಲ್ಲಾ ನೂತನ ಪದಾಧಿಕಾರಿಗಳಿಗೆ ಗೌರವ ಸನ್ಮಾನ ನೆರವೇರಿಸಲಾಯಿತು. ಆರಂಭದಲ್ಲಿ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಸ್ವಾಗತಿಸಿದರು. ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಮಹಾರುದ್ರ ಡಾಕುಳಗೆ ನಿರೂಪಿಸಿದರು. ಉಪಾಧ್ಯಕ್ಷ ಪೃಥ್ವಿರಾಜ್ ಎಸ್. ವಂದಿಸಿದರು.

## ಡೊನೇಷನ್ ಹಾವಳಿಗೆ ಕಡಿವಾಣ ಹಾಕಬೇಕು

ಶಿಕ್ಷಣವು ಪ್ರತಿಯೊಬ್ಬ ನಾಗರಿಕನ ಮೂಲಭೂತ ಹಕ್ಕಾಗಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಕೆಲ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಡೊನೇಷನ್ ಹೆಸರಿನಲ್ಲಿ ಪೋಷಕರಿಂದ ಹೆಚ್ಚಿನ ಹಣ ವಸೂಲಿ ಮಾಡಲಾಗುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿವೆ. ಇದ–ರಿಂದ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳು ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ಶಿಕ್ಷಣ ಕ್ಷೇತ್ರವು ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸಬೇಕೇ ಹೊರತು ವ್ಯಾಪಾರೀಕರಣದ ಕೇಂದ್ರವಾಗಬಾರದು. ಡೊನೇಷನ್ ಪದ್ಧತಿಯಿಂದ ಅರ್ಹ ವಿದ್ಯಾರ್ಥಿಗಳಿಗೆ ಅನ್ಯಾಯವಾಗುವ ಜೊತೆಗೆ ಶಿಕ್ಷಣ ಕ್ಷೇತ್ರದ ಪಾವಿತ್ರ್ಯಕ್ಕೂ ಧಕ್ಕೆಯಾಗುತ್ತಿದೆ. ಸರ್ಕಾರ ಈಗಾಗಲೇ ಡೊನೇಷನ್ ವಸೂಲಿಯನ್ನು ನಿಷೇಧಿಸಿರುವುದಾದರೂ, ಕೆಲವು ಕಡೆಗಳಲ್ಲಿ ಈ ಪದ್ಧತಿ ಇನ್ನೂ ಮುಂದುವರಿದಿರುವುದು ವಿಷಾದನೀಯ.

ರಾಜ್ಯ ಸರ್ಕಾರ ಹಾಗೂ ಶಿಕ್ಷಣ ಇಲಾಖೆ ಖಾಸಗಿ ಶಾಲಾ–ಕಾಲೇಜುಗಳ ಮೇಲೆ ಕಟ್ಟುನಿಟ್ಟಿನ ನಿಗಾ ವಹಿಸಿ, ಡೊನೇಷನ್ ವಸೂಲಿ ಮಾಡುವ ಸಂಸ್ಥೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಪೋಷಕರ ದೂರುಗಳನ್ನು ಸ್ವೀಕರಿಸಲು ವಿಶೇಷ ಸಹಾಯವಾಣಿ ಮತ್ತು ದೂರು ಪರಿಹಾರ ವ್ಯವಸ್ಥೆಯನ್ನು ಬಲಪಡಿಸಬೇಕು. ಶಿಕ್ಷಣವು ಹಣವಂತರಿಗೆ ಮಾತ್ರ ಸೀಮಿತವಾಗದೆ ಎಲ್ಲರಿಗೂ ಸಮಾನವಾಗಿ ದೊರೆಯಬೇಕು. ಆದ್ದರಿಂದ ಸರ್ಕಾರ ಡೊನೇಷನ್ ಹಾವಳಿಗೆ ಪರಿಣಾಮಕಾರಿ ಕಡಿವಾಣ ಹಾಕಿ, ಪಾರದರ್ಶಕ ಹಾಗೂ ನ್ಯಾಯಸಮ್ಮತ ಶಿಕ್ಷಣ ವ್ಯವಸ್ಥೆಯನ್ನು ರೂಪಿಸಬೇಕಾಗಿದೆ. ಇದು ವಿದ್ಯಾರ್ಥಿಗಳ ಭವಿಷ್ಯ ಹಾಗೂ ಸಮಾಜದ ಅಭಿವೃದ್ಧಿಯ ದೃಷ್ಟಿಯಿಂದ ಅತ್ಯಂತ ಅಗತ್ಯವಾಗಿದೆ.

# ವೈಜ್ಞಾನಿಕ ಕುರಿ–ಮೇಕೆ ಸಾಕಾಣಿಕೆಯಿಂದ ಆರ್ಥಿಕ ಸ್ವಾವಲಂಬನೆ ಸಾಧ್ಯ: ಡಾ.ರವೀಂದ್ರ ಜಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಇಂದಿನ ದಿನಮಾನದಲ್ಲಿ ವೈಜ್ಞಾನಿಕ ಪದ್ಧತಿಯಲ್ಲಿ ಕುರಿ ಮತ್ತು ಮೇಕೆ ಸಾಕಾಣಿಕೆ ಕೈಗೊಂಡರೆ ರೈತರು ಹಾಗೂ ಯುವಕರು ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಉತ್ತಮ ಅವಕಾಶಗಳಿವೆ ಎಂದು ಪಶುಪಾಲನಾ ಇಲಾಖೆಯ ಉಪ ನಿರ್ದೇಶಕರಾದ ಡಾ. ರವೀಂದ್ರ ಜಿ ಅಭಿಪ್ರಾಯಪಟ್ಟರು.

ನಗರದ ಪಶುಪಾಲನಾ ಮತ್ತು ಪಶು ವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಜಿಲ್ಲಾ ಪಂಚಾಯತ್ ಹಾಗೂ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ಬೀದರ್ ವತಿಯಿಂದ ಆಯೋಜಿಸಲಾದ ಎರಡು ದಿನಗಳ 'ವೈಜ್ಞಾನಿಕ ಕುರಿ–ಮೇಕೆ ಸಾಕಾಣಿಕೆ'



ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಕುರಿ ಮತ್ತು ಮೇಕೆ ಸಾಕಾಣಿಕೆಯನ್ನು ವೈಜ್ಞಾನಿಕ ರೀತಿಯಲ್ಲಿ ನಿರ್ವಹಿಸುವುದರಿಂದ ಉತ್ಪಾದಕತೆ ಹೆಚ್ಚುವುದರ ಜೊತೆಗೆ ರೈತರ ಆದಾಯವೂ ವೃದ್ಧಿಯಾಗುತ್ತದೆ. ಆಧುನಿಕ ತಂತ್ರಜ್ಞಾನ, ಸಮರ್ಪಕ ಆಹಾರ ನಿರ್ವಹಣೆ, ಆರೋಗ್ಯ ರಕ್ಷಣೆ ಹಾಗೂ ರೋಗ ನಿಯಂತ್ರಣ ಕ್ರಮಗಳನ್ನು ಅಳವಡಿಸಿಕೊಳ್ಳುವ ಮೂಲಕ ಉತ್ತಮ ಲಾಭ ಗಳಿಸಬಹುದಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಪಶು ವೈದ್ಯಾಧಿಕಾರಿ ಹಾಗೂ ತರಬೇತಿ ಕೇಂದ್ರದ ಮುಖ್ಯಸ್ಥರಾದ ಡಾ. ವಿಕ್ರಂ ಚಾಕೋತೆ ಅವರು ಕುರಿ ಮತ್ತು ಮೇಕೆ ಸಾಕಾಣಿಕೆಯ ವಿವಿಧ ಆಯಾಮಗಳ ಕುರಿತು ತರಬೇತಿದಾರರಿಗೆ ಸಮಗ್ರ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಪಶು ವೈದ್ಯಕೀಯ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಡಾ. ಚಿಕ್ಕಗೌಡರ ಕೊಟ್ರೇಶ್ ಹಾಗೂ ತರಬೇತಿದಾರರು ಉಪಸ್ಥಿತರಿದ್ದರು.

# ಮಾವು ಬೆಳೆ: ಉತ್ತಮ ಗುಣಮಟ್ಟದ ಉತ್ಪಾದನೆಗೆ ತರಬೇತಿ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಮಾವು ಬೆಳೆಯಲ್ಲಿ ಆಧುನಿಕ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ಹೆಚ್ಚಿನ ಇಳುವರಿ ಹಾಗೂ ಉತ್ತಮ ಗುಣಮಟ್ಟದ ಉತ್ಪಾದನೆ ಪಡೆಯುವ ಉದ್ದೇಶದಿಂದ ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರ (KVK), ಬೀದರ ಮತ್ತು IIMR– ಅಮೃವಾಹಿನಿ FPOSE ವತಿಯಿಂದ "ಮಾವು ಬೆಳೆಯಲ್ಲಿ ಹೊಸ ತಂತ್ರಜ್ಞಾನಗಳ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ"ವನ್ನು 2026ರ ಜೂನ್ 12 ರಂದು ಬಸವ ಕಲ್ಯಾಣ ತಾಲ್ಲೂಕಿನ ಹಳ್ಳಿಗ್ರಾಮದ ರೈತ ಭವನದಲ್ಲಿ ಆಯೋಜಿಸಲಾಗಿದೆ ಎಂದು ಬೀದರ ಕೃಷಿ ವಿಜ್ಞಾನ ಕೇಂದ್ರ ಐಸಿಎಆರ್ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು ಡಾ.ರಾಜಶೇಖರ್ ಬಸನಾಯಕ ಅವರು ತಿಳಿಸಿದ್ದಾರೆ.

ಈ ತರಬೇತಿ ಕಾರ್ಯಕ್ರಮವು ಮಾವು ಬೆಳೆಗಾರ ರೈತರು, ರೈತ ಮಹಿಳೆಯರು, ಗ್ರಾಮೀಣ ಯುವಕರು, ಪ್ರಗತಿಪರ ರೈತರು, ರೈತ ಉತ್ಪಾದಕರ ಸಂಸ್ಥೆಗಳ



(FPO) ಸದಸ್ಯರು, ತೋಟಗಾರಿಕೆ ಉದ್ಯಮಿಗಳು ಹಾಗೂ ತೋಟಗಾರಿಕೆ ಆಸಕ್ತರಿಗಾಗಿ ವಿಶೇಷವಾಗಿ ರೂಪಿಸಲಾಗಿದೆ. ಕಾರ್ಯಕ್ರಮದಲ್ಲಿ ಮಾವು ಬೆಳೆಯ ವಿವಿಧ ಆಧುನಿಕ ತಂತ್ರಜ್ಞಾನಗಳ ಕುರಿತು ತಜ್ಞರಿಂದ ಸಮಗ್ರ ಮಾಹಿತಿ ನೀಡಲಾಗುವುದು. ಅಧಿಕ ಸಾಂದ್ರತೆಯ (High Density) ಮಾವು ತೋಟಗಳ ಸ್ಥಾಪನೆ, ಸುಧಾರಿತ ಹಾಗೂ ಹೆಚ್ಚಿನ ಇಳುವರಿ ನೀಡುವ ಮಾವಿನ ತಳಿಗಳ ಆಯ್ಕೆ, ಪೋಷಕಾಂಶ ಮತ್ತು ನೀರಿನ ಸಮಗ್ರ ನಿರ್ವಹಣೆ, ಕೀಟ ಹಾಗೂ ರೋಗಗಳ ಸಮಗ್ರ ನಿರ್ವಹಣೆ, ಹೂ ಬಿಡುವಿಕೆ ಮತ್ತು ಫಲಧಾರಣೆಯನ್ನು ಹೆಚ್ಚಿಸುವ ತಂತ್ರಗಳು, ಕತ್ತರಣೆ (Pruning) ಹಾಗೂ ಮೇಲ್ಛಾವಣಿ ನಿರ್ವಹಣೆ, ಕೊಯ್ಲಿನ ನಂತರದ ನಿರ್ವಹಣೆ ಮತ್ತು ಮೌಲ್ಯವರ್ಧನೆ, ಮಾರುಕಟ್ಟೆ ಅವಕಾಶಗಳು ಹಾಗೂ ಸರ್ಕಾರಿ ಯೋಜನೆಗಳ ಕುರಿತು ವಿವರವಾದ ಉಪನ್ಯಾಸಗಳನ್ನು ನೀಡಲಿದ್ದಾರೆ.

ಅಲ್ಲದೆ, ಪ್ರಾಯೋಗಿಕ ಪ್ರದರ್ಶನಗಳ ಮೂಲಕ ರೈತರಿಗೆ ನೇರತಾಂತ್ರಿಕ ಮಾರ್ಗದರ್ಶನ ನೀಡಲಾಗುವುದು. ಇದರಿಂದ ರೈತರು ತಮ್ಮ ತೋಟಗಳಲ್ಲಿ ಹೊಸ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳಲು ಅನುಕೂಲವಾಗಲಿದೆ. ಕಾರ್ಯಕ್ರಮದಲ್ಲಿ ಕಲಬುರಗಿ, ಕೆವಿಕೆ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು ಡಾ.ರಾಜು ಜಿ.ತೆಗ್ಗಳ್ಳಿ, ಕಲಬುರಗಿ ವಲಯ ಸಂಶೋಧನಾ ಕೇಂದ್ರ ಹಿರಿಯ ವಿಜ್ಞಾನಿ (ಸಸ್ಯರೋಗಶಾಸ್ತ್ರ) ಡಾ.ಮಲ್ಲಿಕಾರ್ಜುನ ಕೆಂಗನಾಳ, ಬೀದರ್ ಕೆವಿಕೆ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು ಡಾ.ರಾಜಶೇಖರ್ ಬಸನಾಯಕ್, ಕಲಬುರಗಿ ಸಹಾಯಕ ಆಯುಕ್ತರು ಡಾ.ಮಹೇಶ್ ಪಾಟೀಲ, ವಿಜ್ಞಾನಿ (ಮಣ್ಣು ವಿಜ್ಞಾನ) ಡಾ.ಚಂದ್ರಕಾಂತ, ಬೀದರ್ ಕೆವಿಕೆ ವಿಜ್ಞಾನಿ (ಸಸ್ಯರೋಗಶಾಸ್ತ್ರ) ಡಾ.ಶಿವಕುಮಾರ, ಕಲಬುರಗಿ ಕೃಷಿ ಮಹಾವಿದ್ಯಾಲಯ ವಿಜ್ಞಾನಿ (ತೋಟಗಾರಿಕೆ) ಡಾ.ಮಾಂತೇಶಜೋಗಿ ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಲಿದ್ದಾರೆ.

"ಆಧುನಿಕ ಮಾವು ಬೆಳೆ ತಂತ್ರಜ್ಞಾನ ಅಳವಡಿಸಿ–ಅಧಿಕ ಇಳುವರಿ, ಉತ್ತಮ ಗುಣಮಟ್ಟ ಹಾಗೂ ಹೆಚ್ಚಿನ ಆದಾಯ ಪಡೆಯಿರಿ" ಎಂಬ ಘೋಷವಾಕ್ಯದೊಂದಿಗೆ ಈ ತರಬೇತಿ ಕಾರ್ಯಕ್ರಮವನ್ನು ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಬೀದರ್ ಕೃಷಿ ವಿಜ್ಞಾನ ಕೇಂದ್ರ ಐಸಿಎಆರ್ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು ಮೊ.ನಂ.9480696318, 9711330755, ಕಲಬುರಗಿ ಸಹಾಯಕ ಆಯುಕ್ತರು ಡಾ.ಮಹೇಶ್‌ಪಾಟೀಲ ಮೊ.ನಂ.9008428902ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಹೀಂಖಾನ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಮನವಿ



**ಬೀದರ್:** ಕ್ಷೇತ್ರದ ಶಾಸಕ ರಹೀಂಖಾನ್ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡುವಂತೆ ಕಾಂಗ್ರೆಸ್ ನಾಯಕರಾದ ರಾಹುಲ್ ಗಾಂಧಿ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಸಾಮಾಜಿಕ ಜಾಲತಾಣ ವಿಭಾಗದ ಜಿಲ್ಲಾ ಬ್ಲಾಕ್ ಪ್ರಧಾನ ಕಾರ್ಯದರ್ಶಿ ಬಸವರಾಜ್ ಭಾವಿದೊಡ್ಡಿ ಮನವಿ ಮಾಡಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಶಾಸಕ ರಹೀಂಖಾನ್ ಅವರು ಈ ಹಿಂದೆ ಪೌರಾಡಳಿತ ಸಚಿವರಾಗಿ ಕಾರ್ಯನಿರ್ವಹಿಸುವ ಸಂದರ್ಭದಲ್ಲಿ ದಾಖಲೆಯ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದಾರೆ. ದಲಿತರು, ಬಡವರು ಹಾಗೂ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಹಲವು ಜನಪರ ಯೋಜನೆಗಳನ್ನು ಜಾರಿಗೊಳಿಸಿ ಜನಮನ್ನಣೆ ಗಳಿಸಿದ್ದಾರೆ ಎಂದು ತಿಳಿಸಿದ್ದಾರೆ. ಬೀದರ್ ನಗರಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದು, ನಗರದ ವಿವಿಧ ರಸ್ತೆಗಳನ್ನು ಡಾಂಬರೀಕರಣಗೊಳಿಸುವ ಮೂಲಕ ಮೂಲಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದ್ದಾರೆ. ರಹೀಂಖಾನ್ ಅವರು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿದ್ದು, ಇತ್ತೀಚಿನ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಯ ಗೆಲುವಿಗೆ ಶ್ರಮಿಸಿದ್ದಾರೆ. ಆದಾಗ್ಯೂ, ಅವರಿಗೆ ಸಚಿವ ಸ್ಥಾನ ದೊರೆಯದಿರುವುದು ಕ್ಷೇತ್ರದ ಮತದಾರರು, ಕಾಂಗ್ರೆಸ್ ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಬೆಂಬಲಿಗರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ತಿಳಿಸಿದ್ದಾರೆ. ಆದ್ದರಿಂದ ರಹೀಂಖಾನ್ ಅವರ ಬೆಂಬಲಿಗರ ಬೇಸರವನ್ನು ದೂರಗೊಳಿಸಲು ಹಾಗೂ ಜಿಲ್ಲೆಯ ಅಭಿವೃದ್ಧಿಗೆ ಮತ್ತಷ್ಟು ವೇಗ ನೀಡುವ ನಿಟ್ಟಿನಲ್ಲಿ ಅವರಿಗೆ ಸಚಿವ ಸಂಪುಟದಲ್ಲಿ ಸೂಕ್ತ ಸ್ಥಾನಮಾನ ನೀಡಬೇಕು ಎಂದು ಬಸವರಾಜ್ ಭಾವಿದೊಡ್ಡಿ ಆಗ್ರಹಿಸಿದ್ದಾರೆ.

# ಸಮಾಜ ಸೇವೆಯೇ ಜೀವನದ ಸಾರ್ಥಕತೆ: ಡಾ. ಗುರಮ್ಮಾ ಸಿದ್ದಾರೆಡ್ಡಿ






• ಮಲ್ಲಮ್ಮ ನುಡಿ ವಾರ್ತೆ ಬೀದರ್

ಸಮಾಜದ ದುರ್ಬಲ ವರ್ಗಗಳು, ದಲಿತರು ಹಾಗೂ ಅಸಹಾಯಕ ಮಹಿಳೆಯರ ಸಬಲೀಕರಣಕ್ಕಾಗಿ ಜೀವನವನ್ನೇ ಮುಡಿಪಾಗಿಟ್ಟಿರುವುದು ನನ್ನ ಜೀವನದ ಸಾರ್ಥಕತೆ ಎಂದು ಹಿರಿಯ ಸಮಾಜ ಸೇವಕಿ ಡಾ. ಗುರಮ್ಮಾ ಸಿದ್ದಾರೆಡ್ಡಿ ಹೇಳಿದರು.

ಬುಧವಾರ ಸಂಜೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕಲಬುರಗಿ ವಿಭಾಗದ ವತಿಯಿಂದ ಬೀದರ್‌ನ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಜೂ 10 ರಂದು ಬುಧವಾರ ಆಯೋಜಿಸಿದ್ದ ಸಾಧಕರೊಂದಿಗೆ ಸಂವಾದ–2026' ಕಾರ್ಯಕ್ರಮದಲ್ಲಿ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ, ಅವರು ತಮ್ಮ ಜೀವನ ಸಾಧನೆ ಹಾಗೂ ಸಮಾಜ ಸೇವೆಯ ಪಯಣವನ್ನು ಅವರು ಹಂಚಿಕೊಂಡರು.

ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲೂಕಿನ ವಡವಡಗಿ ಗ್ರಾಮದಲ್ಲಿ 1946ರ ಫೆಬ್ರುವರಿ 4ರಂದು ಜನಿಸಿದ ತಾವು, 1965ರಲ್ಲಿ ಡಾ.ಎಸ್. ಎಸ್. ಸಿದ್ದಾರೆಡ್ಡಿ ಅವರೊಂದಿಗೆ ವಿವಾಹವಾಗಿ ಬೀದರ್‌ಗೆ ಆಗಮಿಸಿದ ಬಳಿಕ ಸಮಾಜ ಸೇವೆಯಲ್ಲಿ ತೊಡಗಿಕೊಂಡಿರುವುದಾಗಿ ತಿಳಿಸಿದರು.

ಬಾಲ್ಯದಲ್ಲಿ ಕೆಲ ಕಾಲ ಶಿಕ್ಷಣದಿಂದ ವಂಚಿತಳಾದ ನೋವು ನನ್ನನ್ನು ಸದಾ ಕಾಡುತ್ತಿತ್ತು. ಅದೇ ಕಾರಣದಿಂದ ಶಿಕ್ಷಣದಿಂದ ವಂಚಿತರಾಗಿರುವ ಮಕ್ಕಳಿಗೆ ಸಾಧ್ಯವಾದಷ್ಟು ನೆರವು ನೀಡುತ್ತೇನೆ. ಮದುವೆಯಾಗಿ ಮಕ್ಕಳಾದ ನಂತರವೂ ಶಿಕ್ಷಣದ ಕನಸನ್ನು ಕೈಬಿಡದೆ ಅಕ್ಕಮಹಾದೇವಿ ಮಹಿಳಾ ಪಿಯು ಕಾಲೇಜಿನಲ್ಲಿ ವಿದ್ಯಾಭ್ಯಾಸ ಮುಂದುವರಿಸಿ, ಜನರ ಟೀಕೆಗಳನ್ನು ಲೆಕ್ಕಿಸದೇ ಉನ್ನತ ಶಿಕ್ಷಣ ಪಡೆದೆ. ನನ್ನ ಸಮಾಜ ಸೇವೆಯ ಹಿಂದೆ ಪತಿಯ ಸಹಕಾರವೂ ಪ್ರಮುಖವಾಗಿದೆ ಎಂದು ಅವರು ಹೇಳಿದರು. ಮಹಿಳೆಯರ ಶಿಕ್ಷಣ ವಿರಳವಾಗಿದ್ದ ಕಾಲಘಟ್ಟದಲ್ಲಿಯೇ ಗುಲ್ಬರ್ಗಾ ವಿಶ್ವವಿದ್ಯಾಲಯದಿಂದ ಇಂಗ್ಲಿಷ್ ವಿಷಯದಲ್ಲಿ ಎಂ.ಎ.ಪದವಿ ಪಡೆದಿರುವ ನಾನು 40ಕ್ಕೂ ಹೆಚ್ಚು ಸರ್ಕಾರಿ ಹಾಗೂ ಸರ್ಕಾರೇತರ ಸಂಸ್ಥೆಗಳಲ್ಲಿ ಸದಸ್ಯರಾಗಿ ಸೇವೆ ಸಲ್ಲಿಸಿರುವುದಾಗಿ ತಿಳಿಸಿದರು.

ಕಿತ್ತೂರು ರಾಣಿ ಚೆನ್ನಮ್ಮ ಮಹಿಳಾ ಮಂಡಳವನ್ನು ಸ್ಥಾಪಿಸಿ ಸಾವಿರಾರು ಮಹಿಳೆಯರಿಗೆ ಸ್ವಾವಲಂಬಿ ಬದುಕು ಕಟ್ಟಿಕೊಡುವಲ್ಲಿ ನೆರವಾದ ಅನುಭವವನ್ನು ಹಂಚಿಕೊಂಡ ಅವರು, ಕೊಳಚೆ ಪ್ರದೇಶಗಳಲ್ಲಿ ಶಿಶುಪಾಲನಾ ಕೇಂದ್ರಗಳ ಸ್ಥಾಪನೆ, ವಿಕಲಚೇತನ ಮಹಿಳೆಯರಿಗೆ ವಸತಿ ಸೌಲಭ್ಯ, ಉಚಿತ ಹೊಲಿಗೆ ಯಂತ್ರ ವಿತರಣೆ ಹಾಗೂ ಕಾನೂನು ಅರಿವು ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿರುವುದಾಗಿ ವಿವರಿಸಿದರು.

ಮಹಿಳಾ ಅಭಿವೃದ್ಧಿ ಕ್ಷೇತ್ರದಲ್ಲಿನ ಸೇವೆಯನ್ನು ಗುರುತಿಸಿ ಕರ್ನಾಟಕ ಸರ್ಕಾರವು 2000ರಲ್ಲಿ ಮಹಿಳಾ ಅಭಿವೃದ್ಧಿ ಟಾಸ್ಕ್ ಫೋರ್ಸ್ ಸಮಿತಿಯ ಅಧ್ಯಕ್ಷೆಯನ್ನಾಗಿ ನೇಮಿಸಿತ್ತು. ಈ ಸಮಿತಿಯ ಶಿಫಾರಸುಗಳ ಫಲವಾಗಿ ವಿಜಯಪುರದಲ್ಲಿ ಮಹಿಳಾ ವಿಶ್ವವಿದ್ಯಾಲಯ ಸ್ಥಾಪನೆಯಾಗಿದ್ದು, ಜಿಲ್ಲೆಗೊಂದು ಮಹಿಳಾ ಪೊಲೀಸ್ ಠಾಣೆ ಹಾಗೂ ಮಹಿಳಾ ದೂರುಗಳ ವಿಚಾರಣಾ ವ್ಯವಸ್ಥೆ ರೂಪುಗೊಂಡಿರುವುದು ಹೆಮ್ಮೆಯ ವಿಷಯ ಎಂದು ಹೇಳಿದರು.

ತಮ್ಮ ಸೇವೆಯನ್ನು ಪರಿಗಣಿಸಿ ಕರ್ನಾಟಕ ಸರ್ಕಾರವು 2005ರಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ, 2018ರಲ್ಲಿ ಅಂತರರಾಷ್ಟ್ರೀಯ ಏಷ್ಯಾ ಪೆಸಿಫಿಕ್ ಪ್ರಶಸ್ತಿ ಹಾಗೂ ಗುಲ್ಬರ್ಗಾ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ನೀಡಿ ಸನ್ಮಾನಿಸಿರುವುದನ್ನು ಅವರು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಸಾಹಿತಿಗಳಾದ ಪಾರ್ವತಿ ಸೋನಾರೆ, ಭಾರತಿ ವಸ್ತದ್ ಹಾಗೂ ಮಂಗಲಾ ಭಾಗವತ್, ವಿಜಯಕುಮಾರ್ ಸೋನಾರೆ, ಅವರು ಮಹಿಳಾ ಸಬಲೀಕರಣ, ಸಮಾಜ ಸೇವೆಯ ಸವಾಲುಗಳು ಮತ್ತು ಸಾಧನೆಯ ಹಿಂದಿನ ಪ್ರೇರಣೆ ಕುರಿತು ಪ್ರಶ್ನೆಗಳನ್ನು ಕೇಳಿದರು. ಡಾ.ಗುರಮ್ಮಾ ಸಿದ್ದಾರೆಡ್ಡಿ ಅವರು ತಮ್ಮ ಅನುಭವಗಳ ಮೂಲಕ ಉತ್ತರ ನೀಡಿ ಸಭಿಕರ ಮೆಚ್ಚುಗೆಗೆ ಪಾತ್ರರಾದರು.

ಕಾರ್ಯಕ್ರಮದ ಆರಂಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಹಾಗೂ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕ ಬಸವರಾಜ ಹೂಗಾರ ಪ್ರಸ್ತಾವಿಕವಾಗಿ ಮಾತನಾಡಿದರು. ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ ಮಾತನಾಡಿದರು. ದೇವಿದಾಸ ಜೋಶಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ಜಗನ್ನಾಥ ಹೆಬ್ಬಾಳೆ, ಶಂಭುಲಿಂಗ ವಾಲ್ದೊಡ್ಡಿ, ಬಾಬುರಾವ ದಾನಿ, ಎಸ್.ಎಂ. ಜನವಾಡಕರ್, ನವಲಿಂಗ ಪಾಟೀಲ್, ಮಾರುತಿ ಚಾಂಬೋಳ್, ಸೇರಿದಂತೆ ಜಿಲ್ಲೆಯ ಪ್ರಗತಿಪರ ಚಿಂತಕರು, ಸಾಹಿತಿಗಳು, ವಿದ್ಯಾರ್ಥಿಗಳು, ಮಹಿಳಾ ಸಂಘಟನೆಗಳ ಪ್ರತಿನಿಧಿಗಳು ಹಾಗೂ ಸಾಮಾಜಿಕ ಕಾರ್ಯಕರ್ತರು ಉಪಸ್ಥಿತರಿದ್ದರು.

ಈ ಕುರಿತು ಪ್ರಕಟಣೆ ನೀಡಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕ ಬಸವರಾಜ ಹೂಗಾರ ಹಾಗೂ ಬೀದರ್ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಅವರು ಕಾರ್ಯಕ್ರಮ ಯಶಸ್ವಿಗೊಳಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದ್ದಾರೆ.

# ಕನಕಗಿರಿಯಲ್ಲಿ ಮೃತ ಮಹಿಳೆಯ ಗುರುತು ಪತ್ತೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ



ಕಾರಟಗಿ ಮೂಲದ ಮಹಿಳೆ ರತ್ನಮ್ಮ (50) ಕೊಲೆಯಾದ ಮಹಿಳೆ ರತ್ನಮ್ಮಳನ್ನು ಕೊಲೆ ಮಾಡಿ ಸುಟ್ಟು ಹಾಕಿದ ಶಾಮೀದ್‌ಕುಷ್ಟಗಿ ತಾಲೂಕಿನ ಕಂದಕೂರು ನಿವಾಸಿ ಶಾಮೀದ್..ಸದ್ಯ ಕನಕಗಿರಿ ತಾಲೂಕಿನ ಹುಲಿಹೈದರ್ ಗ್ರಾಮದಲ್ಲಿ ವಾಸವಿದ್ದ ಶ್ಯಾಮಿದ.ರತ್ನಮ್ಮಳಿಗೆ ಹಲವು ವರ್ಷಗಳಿಂದ ಪರಿಚಯಿದ್ದ ಶ್ಯಾಮಿದ ನಿರ್ಮಾಣ ಹಂತದ ಮನೆಯ ಮೂರನೆ ಮಹಡಿಯಲ್ಲಿ ಕರೆದು–ಕೊಂಡು ಹೋಗಿ ಮದ್ಯ ಕುಡಿಸಿ ಕೊಲೆ ಮಾಡಿ ಶವಕ್ಕೆ ಬೆಂಕಿ ಹಚ್ಚಿ ಸುಟ್ಟ ಶಾಮೀದ್‌ಸಿಸಿಟಿವಿ ದಶ್ಯಾವಳಿ ಆದರಿಸಿ ಆರೋಪಿಯ ಬಂದಿಸಿದ ಕನಕಗಿರಿ ಪೊಲೀಸರು. ರತ್ನಮ್ಮ ಜೊತೆ ಶ್ಯಾಮಿದ ಮನೆ ಕಡೆ ಹೋಗೋ ದ್ರಶ್ಯ ಸಿಸಿ ಕ್ಯಾಮರಾದಲ್ಲಿ ಸೆರೆ.ಸದ್ಯ ಆರೋಪಿಯ ವಿಚಾರಣೆ ನಡೆಸಿರೋ ಪೊಲೀಸರು..ಕನಕಗಿರಿ ಪೊಲೀಸ್ ಠಾಣೆ ಮುಂದೆ ರತ್ನಮ್ಮ ಸಮುದಾಯದ ಜನರ ಆಕ್ರೋಶ...ಆತ ಒಬ್ಬನೇ ಮಾಡಿಲ್ಲ ಎಂದು ಆಕ್ರೋಶ...ಕನಕಗಿರಿ ಪೊಲೀಸ್ ಠಾಣೆಯಲ್ಲಿ ಕೊಪ್ಪಳ ಜಿಲ್ಲೆಯಪೊಲೀಸ್ ಅಧಿಕ್ಷಕರು ಎಸ್ ಪಿ ರಾಮ್ ಎಲ್‌ಅರ್ ಸಿದ್ದಿ ಅವರು ಮಾಧ್ಯಮದ ಮುಂದೆ ಸಾರಾಂಶ ತಿಳಿಸಿದರು.

# ಗೋಮರ್ಸಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಅಭಿವೃದ್ಧಿಗೆ ಮನವಿ



• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ರಾಯಚೂರು ಜಿಲ್ಲೆಯ ಸಿಂಧನೂರು ತಾಲೂಕಿನ ಮಾಡಸಿರವಾರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ,ಗೋಮರ್ಸಿಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ಅಭಿವೃದ್ಧಿ ಕಾಮಗಾರಿಗಳ ಅಗತ್ಯತೆಯನ್ನು ಮನಗಂಡು, ಗ್ರಾಮದ ಮುಖಂಡರು, ಶಾಲಾ ಶಿಕ್ಷಕರು ಹಾಗೂ ಸಾರ್ವಜನಿಕರು ಇಂದು ಮಾಡಸಿರವಾರ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳಿಗೆ (PDO) ಗೋಮರ್ಸಿಯಲ್ಲಿ ಮನವಿ ಪತ್ರ ಸಲ್ಲಿಸಿದರು.

ಶಾಲೆಯಲ್ಲಿ ಹೆಚ್ಚುವರಿ ಕೊಠಡಿಗಳ ನಿರ್ಮಾಣ, ಶೌಚಾಲಯಗಳ ದುರಸ್ತಿ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಶಾಲಾ ಆವರಣದ ಸ್ವಚ್ಛತೆ, ಆಟದ ಮೈದಾನದ ಅಭಿವೃದ್ಧಿ, ಕಾಂಪೌಂಡ್ ನಿರ್ಮಾಣ ಸೇರಿದಂತೆ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಒದಗಿಸುವಂತೆ ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ನಿರುಪಾದಿ ಕೆ ಗೋಮರ್ಸಿ, ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಜೊತೆಗೆ ಅಗತ್ಯ ಮೂಲಸೌಕರ್ಯಗಳು ಲಭ್ಯವಾಗುವುದು ಅತ್ಯಂತ ಮುಖ್ಯವಾಗಿದ್ದು, ಗೋಮರ್ಸಿ ಶಾಲೆಯ ಅಭಿವೃದ್ಧಿಗೆ ಗ್ರಾಮ ಪಂಚಾಯಿತಿ ಹಾಗೂ ಸಂಬಂಧಿಸಿದ ಇಲಾಖೆಗಳು ವಿಶೇಷ ಗಮನ ಹರಿಸಬೇಕೆಂದು ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಗ್ರಾಮ ಪಂಚಾಯಿತಿ ಅಧಿಕಾರಿಗಳು ಶಾಲೆಯ ಸಮಸ್ಯೆಗಳನ್ನು ಪರಿಶೀಲಿಸಿ, ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಕರು,ಗ್ರಾಮಸ್ಥರಾದ ಅಪ್ಪಯ್ಯ ,ಸಂಶುದ್ದೀನ್, ಉಮೇಶ್ ಉಪ್ಪಾರ, ವಿರುಪಣ್ಣ, ಅಜ್ಮೀರ್ ಸಾಬ್,ನಾಗಪ್ಪ,ವೀರೇಶ್ ಸೇರಿದಂತೆ ಅನೇಕ ಸಾರ್ವಜನಿಕರು ಉಪಸ್ಥಿತರಿದ್ದರು.

# ಇಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಜೂ.11: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾನೂನು ಸೇವಾ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ, ಮಕ್ಕಳ ರಕ್ಷಣಾ ಘಟಕ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ವಕೀಲರ ಸಂಘ, ವಿವಿಧ ಇಲಾಖೆ ಮತ್ತು ಸಂಘ ಸಂಸ್ಥೆಗಳ ಸಹಯೋಗದಲ್ಲಿ ಮಕ್ಕಳಿಗೆ ನ್ಯಾಯಯುತ ಬಾಲ್ಯ, ವಯಸ್ಕರಿಗೆ ಘನತೆಯ ಉದ್ಯೋಗ ಎಂಬ ಘೋಷವಾಕ್ಯದೊಂದಿಗೆ ಇದೇ ಜೂನ್ 12 ರಂದು ಬೆಳಗ್ಗೆ 11 ಗಂಟೆಗೆ ನಗರದ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕ ಅಧಿಕಾರಿ ನೋಂಗ್ಜಾಯ್ ಮೊಹಮ್ಮದ್ ಅಲಿ ಅಕ್ರಂ ಷಾ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜಾಹ್ನವಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ತ್ರಿವೇಣಿ ಪತ್ತರ್, ಕಾರ್ಮಿಕ ಅಧಿಕಾರಿ ಸೂರ್ಯಪ್ಪ ಐ. ಡೊಂಬರಮತ್ತೂರ, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ವೆಂಕಟೇಶ್ ರಾಮಚಂದ್ರಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಗಂಗಪ್ಪ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಸುದೀಪ್ ಕುಮಾರ್ ಉಂಕಿ, ವಕೀಲರ ಸಂಘದ ಅಧ್ಯಕ್ಷ ಗುಜ್ಜಲ ನಾಗರಾಜ್, ಕಾರ್ಯದರ್ಶಿ ಕೃಷ್ಣದೇವರಾಯಲು ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿ ಹಿರಿಯ ವಕೀಲ ಎ.ಕರುಣಾನಿಧಿ ಭಾಗವಹಿಸಲಿದ್ದಾರೆ.

ಬಾಲಕಾರ್ಮಿಕ ಪದ್ದತಿ ವಿರೋಧಿಸಿ ಜಾಗೃತಿ ಜಾಥಾ: ವೇದಿಕೆ ಕಾರ್ಯಕ್ರಮ ಆರಂಭಕ್ಕೂ ಮುನ್ನ ಬೆಳಗ್ಗೆ 9.30 ಕ್ಕೆ ನಗರದ ಅಂಬೇಡ್ಕರ್ ವೃತ್ತದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷ ಕೆ.ಎಂ.ರಾಜಶೇಖರ್, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎನ್.ಸುಬ್ರಮಣ್ಯ ಹಾಗೂ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಪ್ರಶಾಂತ್ ನಾಗಲಾಪುರ ಅವರು ಬಾಲಕಾರ್ಮಿಕ ಪದ್ದತಿ ವಿರೋಧಿಸಿ ಜಾಗೃತಿ ಜಾಥಕ್ಕೆ ಚಾಲನೆ ನೀಡಲಿದ್ದಾರೆ.

ಜಾಗೃತಿ ಜಾಥವು ಅಂಬೇಡ್ಕರ್ ವೃತ್ತದಿಂದ ಆರಂಭವಾಗಿ ಪುನೀತ್ ರಾಜ್‌ಕುಮಾರ್ ವೃತ್ತ, ಮೂರಂಗಡಿ ಸರ್ಕಲ್, ಜಿಲ್ಲಾ ಆಸ್ಪತ್ರೆ, ನಗರಸಭೆ, ಸಾವಿಗಿ ಮಾರುಕಟ್ಟೆ ಮುಖಾಂತರ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣ ತಲುಪಲಿದೆ ಎಂದು ಪ್ರಕಟಣೆ ತಿಳಿಸಿದೆ.

# ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.11:ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆಮತ್ತುಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಬೆಂಗಳೂರಿನಿಂದ ಸ್ಟಾರ್ ಏರ್ ವಿಮಾನದಮೂಲಕ ಜೂನ್ 14 ರಂದು ಭಾನುವಾರ ಬೆಳಿಗ್ಗೆ 7.40 ಗಂಟೆಗೆ ಕಲಬುರಗಿಗೆ ಆಗಮಿಸಿ, ಸ್ಥಳೀಯಕಾರ್ಯಕ್ರಮದಲ್ಲಿ ಭಾಗವಹಿಸಿ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು. ಜೂನ್ 15 ರಂದು ಸೋಮವಾರಬೆಳಿಗ್ಗೆ 8.10 ಗಂ–ಟೆಗೆ ಕಲಬುರಗಿಯಿಂದ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.


ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬೀದರ ವಿಭಾಗ ಬೀದರ

ಸಂ:ಕಕರಸಾ/ಬೀವಿ/ಸಂಚಾರ/ವಾಣಿಜ್ಯ/ 640/2026–27 ದಿನಾಂಕ: 09–06–2026

ಇ–ಟೆಂಡರ ಪ್ರಕಟಣೆ ಸಂ: 06/2026 ಇ–ಟೆಂಡರ ಪ್ರಕಟಣೆ ಸಂ: 07/2026
(ಇ–ಪ್ರೊಕ್ಯೂರಮೆಂಟ ಮುಖಾಂತರ)

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಬೀದರ ವಿಭಾಗದ ವ್ಯಾಪ್ತಿಯಲ್ಲಿ ಬರುವ ಬೀದರ ಕೇಂದ್ರ ಬಸ್ ನಿಲ್ದಾಣದಲ್ಲಿ, ಬೀದರ ನಗರ ಬಸ್ ನಿಲ್ದಾಣ ಬೀದರ ಘಟಕ–2ರ ಪಕ್ಕದ ವಾಣಿಜ್ಯ ಸಂಕೀರ್ಣದಲ್ಲಿನ/ ಮಳಿಗೆ, ಹುಮನಾಬಾದ, ಚಿಟ್ಟಗುಪ್ಪಾ, ಬಸವಕಲ್ಯಾಣ, ರಾಜೇಶ್ವರ, ಭಾಲ್ಕಿ, ಔರಾದ, ಸಂತಪೂರ ಮತ್ತು ಮುದ್ದೋಳ, ನಿಟ್ಟೂರ ಬಸ್ ನಿಲ್ದಾಣಗಳಲ್ಲಿನ ಬಸ್ ನಿಲ್ದಾಣದ ಕಟ್ಟಡದಲ್ಲಿನ/ವಾಣಿಜ್ಯ ಸಂಕೀರ್ಣದಲ್ಲಿನ/ತೆರೆದ ಸ್ಥಳದಲ್ಲಿನ ವಾಣಿಜ್ಯ ಮಳಿಗೆಗಳು, ಕಾರ ಮತ್ತು ದ್ವಿಚಕ್ರ ವಾಹನಗಳ ಸ್ಟ್ಯಾಂಡ, ಉಪಹಾರ ಗೃಹಕ್ಕೆ ಹಾಗೂ ಜಾಹೀರಾತು/ಹೋರ್ಡಿಂಗ್ಸ್‌ಗಳನ್ನು ಪ್ರದರ್ಶಿಸಲು ತೆರೆದ ಜಾಗ/ತೆರೆದ ಸ್ಥಳಗಳಲ್ಲಿ ಗುರುತಿಸಿರುವ ಸ್ಥಳಗಳಲ್ಲಿ (Hordings, Neon Sigs, Video Walls, Pillar Boards, Platform Boards, Signages, Glow Signs, Unipoles, Arch, etc.) ಜಾಹೀರಾತುಗಳಿಗೆ ಪರವಾನಗೆದಾರರನ್ನು ಆಯ್ಕೆ ಮಾಡಲು ಇ–ಪ್ರೊಕ್ಯೂರಮೆಂಟ ಮುಖಾಂತರ ಇ–ಟೆಂಡರ ಅಹ್ವಾನಿಸಲಾಗಿದೆ. ಇದಕ್ಕೆ ಸಂಬಂಧಿಸಿದ ಮಾಹಿತಿಯನ್ನು ವೆಬ್‌ಸೈಟ kppp.Karnataka.gov.in ನಿಂದ ಡೌನಲೋಡ್ ಮಾಡಿಕೊಳ್ಳಬಹುದು. ಆನಲೈನ ಟೆಂಡರ ಅರ್ಜಿ ಸಲ್ಲಿಸಲು **ದಿನಾಂಕ: 01–07–2026 ರಂದು 16:00 ಗಂಟೆಗೆ** ಕೊನೆಯ ದಿನಾಂಕವಾಗಿರುತ್ತದೆ. ಹೆಚ್ಚಿನ ವಿವರಗಳಿಗಾಗಿ ವಿಭಾಗೀಯ ಕಛೇರಿ, ಕ.ಕ.ರ.ಸಾ.ನಿಗಮ, ಬೀದರ ವಿಭಾಗ, ಬೀದರನಲ್ಲಿ ಕಛೇರಿ ವೇಳೆಯಲ್ಲಿ ಸಂಪರ್ಕಿಸಲು ಕೋರಲಾಗಿದೆ. ಸಂಪರ್ಕಿಸುವ ದೂರವಾಣಿ ಸಂಖ್ಯೆ 7760992202 ಅಥವಾ ವಿಷಯ ನಿರ್ವಾಹಕರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

ಸಹಿ/– ವಿಭಾಗೀಯ ನಿಯಂತ್ರಣಾಧಿಕಾರಿ
ಕ.ಕ.ರ.ಸಾ.ನಿಗಮ ಬೀದರ ವಿಭಾಗ ಬೀದರ

ವಾ.ಸಾ.ಸಂ.ಇ/ಬೀದರ/57/ಕೆ.ಎಸ್.ಎಂ.ಸಿ.&ಎ/2026–27


# ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಮೊಬೈಲ್ ಕ್ಯಾಂಟೀನ್ ಫಲಾನುಭವಿಗಳ ಆಯ್ಕೆ ಪಾರದರ್ಶಕವಾಗಿರಲಿ : ಜಿಲ್ಲಾಧಿಕಾರಿ ಮನ್ನಿಕೇರಿ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)



ಜೂ.11: ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ದೊರೆಯುವುದರ ಜತೆಗೆ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪಾರದರ್ಶಕವಾಗಿರಬೇಕು ಎಂದು ಜಿಲ್ಲಾಧಿಕಾರಿ ಕವಿತಾ.ಎಸ್ ಮನ್ನಿಕೇರಿ ಅವರು ಅಧಿಕಾರಿಗಳಿಗೆ ನಿರ್ದೇಶಿಸಿದರು.ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ಎಸ್.ಸಿ.ಎಸ್.ಪಿ ಹಾಗೂ ಟಿ.ಎಸ್.ಪಿ ಯೋಜನೆಗಳ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯೋಜನೆಯ ಅನುಷ್ಠಾನ ಹಾಗೂ ಫಲಾನುಭವಿಗಳ ಆಯ್ಕೆ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಯುವಕರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಪ್ರವಾಸೋದ್ಯಮ ಇಲಾಖೆಯ ಈ ಯೋಜನೆ ಅತ್ಯಂತ ಸಹಕಾರಿಯಾಗಿದೆ. ಅಧಿಕಾರಿಗಳು ಯಾವುದೇ ವಿಳಂಬ ಮಾಡದೇ ಅರ್ಹ ಫಲಾನುಭವಿಗಳಿಗೆ ಮೊಬೈಲ್ ಕ್ಯಾಂಟಿನ್ ವಾಹನಗಳ ಸೌಲಭ್ಯ ನೀಡಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಹೇಳಿದರು.ವಿಶ್ವವಿಖ್ಯಾತ ಹಂಪಿ ಸೇರಿದಂತೆ ಜಿಲ್ಲೆಯ ಪ್ರಮುಖ ಪ್ರವಾಸಿ ತಾಣಗಳ ಅಭಿವೃದ್ದಿಗೆ ಪೂರಕವಾಗಿ ಯೋಜನೆ ಅನುಷ್ಠಾನವಾಗಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಗಳ ಆರ್ಥಿಕ ಸಬಲೀಕರಣಕ್ಕಾಗಿ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಹಮ್ಮಿಕೊಂಡಿರುವ 'ಮೊಬೈಲ್ ಕ್ಯಾಂಟೀನ್' ಯಾವುದೇ ಲೋಪದೋಷಗಳಿಲ್ಲದೆ ಪಾರದರ್ಶಕವಾಗಿ ಅರ್ಹ ಫಲಾನುಭವಿಗಳಿಗೆ ಸೌಲಭ್ಯ ಒದಗಿಸಬೇಕು ಎಂದು ಹೇಳಿದರು.ಹಂಪಿ ಸೇರಿದಂತೆ ಆಯಕಟ್ಟಿನ ಪ್ರದೇಶಗಳಲ್ಲಿ ಅಥವಾ ಜಿಲ್ಲೆಗೆ ಬರುವ ದೇಶ–ವಿದೇಶಿ ಪ್ರವಾಸಿಗರ ಗಮನದಲ್ಲಿಟ್ಟುಕೊಂಡು, ವಿಶ್ವ ಪಾರಂಪರಿಕ ತಾಣ ಹಂಪಿ, ಕಮಲಾಪುರ, ಹೊಸಪೇಟೆ ನಗರದ ಪ್ರಮುಖ ವೃತ್ತಗಳು ಹಾಗೂ ಪ್ರವಾಸಿಗರು ಹೆಚ್ಚಾಗಿ ಸಂಚರಿಸುವ ಹೆದ್ದಾರಿಯ ಆಯಕಟ್ಟಿನ ಜಾಗಗಳಲ್ಲಿ ಈ ಸಂಚಾರಿ ಕ್ಯಾಂಟೀನ್ ನಡೆಸಲು ಅವಕಾಶ ಕಲ್ಪಿಸಿ ಕೊಡಬೇಕು. ಇಲಾಖೆಯಿಂದ ಸಿಗುವ ಗರಿಷ್ಠ ಸಹಾಯಧನ ಮೊತ್ತ ಹಾಗೂ ಬ್ಯಾಂಕ್‌ಗಳ ಮೂಲಕ ಒದಗಿಸಲಾಗುವ ಸಾಲ ಸೌಲಭ್ಯ ಸಕಾಲಕ್ಕೆ ಸಿಗುವಂತೆ ಲೀಡ್ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಮನ್ವಯತೆ ಸಾಧಿಸುವ ಮೂಲಕ ಕಾರ್ಯನಿರ್ವಹಿಸಬೇಕು ಎಂದರು.

ಪ್ರವಾಸಿ ತಾಣ ವ್ಯಾಪ್ತಿಯಲ್ಲಿ ಸ್ವಚ್ಛತೆ ಮತ್ತು ಪರಿಸರ ಸಂರಕ್ಷಣೆಗೆ ಆದ್ಯತೆ ನೀಡಬೇಕು. ಮೊಬೈಲ್ ಕ್ಯಾಂಟೀನ್ ವಿತರಿಸುವುದಷ್ಟೇ ಮುಖ್ಯವಲ್ಲ, ಪ್ರವಾಸಿ ತಾಣಗಳ ಸ್ವಚ್ಛತೆ ಕಾಪಾಡುವುದು ಅಷ್ಟೇ ಮುಖ್ಯ ಎಂದು ಹೇಳಿದರು.

ಕ್ಯಾಂಟೀನ್‌ಗಳಲ್ಲಿ ಸಂಪೂರ್ಣ ಪ್ಲಾಸ್ಟಿಕ್ ನಿಷೇಧ: ಕಸ ವಿಲೇವಾರಿಗೆ ಜೈವಿಕವಾಗಿ ಕೊಳೆಯುವ ವಸ್ತುಗಳ ಬಳಸಬೇಕು ಮತ್ತು ತ್ಯಾಜ್ಯ ವಿಲೇವಾರಿಗೆ ಕಸದ ಡಬ್ಬಿ ಬಳಸಿ ವೈಜ್ಞಾನಿಕವಾಗಿ ವಿಲೇವಾರಿ ಮಾಡಬೇಕು. ಹಂಪಿಯ ರಕ್ಷಿತ ಮತ್ತು ಬಫರ್ ವಲಯದ ಐತಿಹಾಸಿಕ ಸ್ಮಾರಕಗಳ ಸೌಂದರ್ಯಕ್ಕೆ ಧಕ್ಕೆ ಬಾರದಂತೆ ನಿಯಮ ಪಾಲಿನೆ ಮಾಡಬೇಕು ಎಂದು ಅವರು ಎಚ್ಚರಿಸಿದರು.

ಈ ಯೋಜನೆಯ ಮೂಲಕ ಪ್ರವಾಸಿಗರಿಗೆ ಶುಚಿ–ರುಚಿಯಾದ ಸ್ಥಳೀಯ ಮತ್ತು ಸಾಂಪ್ರದಾಯಿಕ ಆಹಾರ ಪದಾರ್ಥಗಳು ಕೈಗೆಟುಕುವ ದರದಲ್ಲಿ ಸಿಗುವಂತಾಗಬೇಕು. ಇದು ಕೇವಲ ಒಂದು ಸಮುದಾಯದ ಆರ್ಥಿಕ ಪ್ರಗತಿಯಷ್ಟೇ ಅಲ್ಲದೆ, ಜಿಲ್ಲೆಯ ಪ್ರವಾಸೋದ್ಯಮ ಮೂಲಸೌಕರ್ಯ ವೃದ್ಧಿಗೂ ಪೂರಕವಾಗಲಿದೆ ಎಂದು ಆಶಯ ವ್ಯಕ್ತಪಡಿಸಿದರು.ಈ ವೇಳೆ ಪ್ರವಾಸೋದ್ಯಮ ಇಲಾಖೆ ಉಪ ನಿರ್ದೇಶಕ ಪ್ರಭುಲಿಂಗ ತಳಕೇರಿ ಮಾತನಾಡಿ, 2024–25ನೇ ಸಾಲಿಗೆ ಈ ಯೋಜನೆಯಡಿ, ಪರಿಶಿಷ್ಟ ಜಾತಿಗೆ 6 ಮತ್ತು ಪರಿಶಿಷ್ಟ ಪಂಗಡಕ್ಕೆ 4 ಸೇರಿ ಒಟ್ಟು 10 ಜನ ಫಲಾನುಭವಿಗಳಿಗೆ ನೀಡುವ ಗುರಿ ಹೊಂದಲಾಗಿದೆ. ಈ ಪೈಕಿ 4 ಫಲಾನುಭವಿಗಳ ಅರ್ಜಿ ಅನುಮೋದನೆಗೊಂಡು ಸಹಾಯಧನ ಮಂಜೂರು ಮಾಡಲಾಗಿದೆ. ಅರ್ಹ ಫಲಾನುಭವಿಗಳಿಗೆ ಶೀಘ್ರದಲ್ಲೇ ವಾಹನ ವಿತರಣೆ ಮಾಡಲಾಗುವುದು. ಉಳಿದ 6 ಫಲಾನುಭವಿಗಳ ಆಯ್ಕೆಗಾಗಿ ಮುಂದಿನ ದಿನಗಳಲ್ಲಿ ಅರ್ಜಿ ಆಹ್ವಾನಿಸಲಾಗುವುದು.2025–26ನೇ ಸಾಲಿಗಾಗಿ ಪರಿಶಿಷ್ಟ ಜಾತಿಗೆ 6 ಮತ್ತು ಪರಿಶಿಷ್ಟ ಪಂಗಡಗಕ್ಕೆ 4 ಸೇರಿ ಒಟ್ಟು 10 ಜನ ಫಲಾನುಭವಿಗಳನ್ನು ಆಯ್ಕೆ ಮಾಡಲು ಗುರಿ ನಿಗದಿಪಡಿಸಲಾಗಿದೆ. ಅದಕ್ಕಾಗಿ ಪರಿಶಿಷ್ಟ ಜಾತಿ ಸಮುದಾಯದಿಂದ 25 ಹಾಗೂ ಪರಿಶಿಷ್ಟ ಪಂಗಡ ಫಲಾನುಭವಿಗಳಿಂದ 4 ಸೇರಿ ಒಟ್ಟು 29 ಅಭ್ಯರ್ಥಿಗಳಿಂದ ಅರ್ಜಿ ಸ್ವೀಕೃತವಾಗಿದೆ. ಫಲಾನುಭವಿಗಳ ಆಯ್ಕೆಯಲ್ಲಿ ಶೇ.33 ರಷ್ಟು ಮಹಿಳೆಯರಿಗೆ ಮೀಸಲಾತಿ ಹಾಗೂ ಫಲಾನುಭವಿಗಳ ವಯಸ್ಸು ಮತ್ತು ಎಸ್ ಎಸ್ ಎಲ್ ಸಿ ಯಲ್ಲಿ ಪಡೆದ ಅಂಕ ಮತ್ತು ವಯೋಮಿತಿ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು ಎಂದು ಮಾಹಿತಿ ನೀಡಿದರು.ಸಭೆಯಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ರವಿಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಮೇ ಮತ್ತು ಜೂನ್ ತಿಂಗಳ ಪಡಿತರ ಅಕ್ಕಿ ವಿತರಣೆ



ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)ಜೂ.11:ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಅನ್ನಭಾಗ್ಯ ಅಕ್ಕಿಯನ್ನು ಪಡಿತರ ಚೀಟಿ–ದಾರರಿಗೆ ಮೇ ಹಾಗೂ ಜೂನ್ ಮಾಹೆಯ ಎರಡು ತಿಂಗಳ ಅಕ್ಕಿಯನ್ನು ಒಂದೇ ಬಾರಿಗೆ ಹಂಚಿಕೆ ಮಾಡಲಾಗುವುದು. ಅಂತ್ಯೋದಯ ಕಾರ್ಡು ಹೊಂದಿದ 4 ಸದಸ್ಯರಿರುವ ಪಡಿತರ ಪಡಿತರ ಚೀಟಿಗೆ ಮೇ ಮಾಹೆಯಲ್ಲಿ 5 ಕೆಜಿ ಮತ್ತು ಜೂನ್ ತಿಂಗಳಲ್ಲಿ 5 ಕೆಜಿ ಸೇರಿ ಒಟ್ಟು 10 ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು.5 ಸದಸ್ಯರಿರುವ ಅಂತ್ಯೋದಯ ಪಡಿತರದಾರರಿಗೆ 30 ಕೆ.ಜಿ,6 ಸದಸ್ಯರಿರುವ ಚೀಟಿಗೆ 50 ಕೆ.ಜಿ, 7 ಸದಸ್ಯರಿದ್ದಲ್ಲಿ 70 ಕೆ.ಜಿ,8 ಸದಸ್ಯರರುವ ಪಡಿತರದಾರರಿಗೆ 90 ಕೆ.ಜಿ, 9 ಸದಸ್ಯರಿರುವ ಚೀಟಿಗೆ 110 ಕೆ.ಜಿ ಹಾಗೂ 10 ಸದಸ್ಯರಿರುವ ಚೀಟಿಗೆ ಒಟ್ಟು 130 ಕೆ.ಜಿ ಹಾಗೂ ಬಿ.ಪಿ.ಎಲ್ ಕಾರ್ಡು ಹೊಂದಿದ ಪ್ರತಿ ಸದಸ್ಯರಿಗೆ 5 ಕೆ.ಜಿ ಯಂತೆ ಮೇ ಮತ್ತು ಜೂನ್ ಎರಡು ತಿಂಗಳಿಗೆ ಒಟ್ಟು 10 ಕೆ.ಜಿ ಅಕ್ಕಿ ವಿತರಣೆ ಮಾಡಲಾಗುವುದು. ಮೇ ಹಾಗೂ ಜೂನ್ ತಿಂಗಳ ಪಡಿತರವನ್ನು ಒಟ್ಟಿಗೆ ಪಡೆಯುವ ಸಂದರ್ಭದಲ್ಲಿ, ಕಾರ್ಡುದಾರರು ತಾಂತ್ರಿಕ ದಾಖಲೀಕರಣಕ್ಕಾಗಿ ಎರಡು ಬಾರಿ ಹೆಬ್ಬೆಟ್ಟಿನ ಗುರುತು ನೀಡುವುದು ಕಡ್ಡಾಯವಾಗಿದೆ. ಆದ್ದರಿಂದ ಪಡಿತರ ಚೀಟಿದಾರರು ಯಾವುದೇ ಗೊಂದಲಕ್ಕೆ ಒಳಗಾಗದೆ ಸಹಕರಿಸಬೇಕು.ಎರಡು ಬಾರಿ ಬೆರಳು ಮುದ್ರೆ ನೀಡಿದ ನಂತರವಷ್ಟೇ ಪೂರ್ಣ ಪ್ರಮಾಣದ ಧಾನ್ಯ ಲಭ್ಯವಾಗಲಿದೆ. ಪಡಿತರದಾರರು ಮೇ ಮತ್ತು ಜೂನ್ ಎರಡು ತಿಂಗಳ ಅಕ್ಕಿಯನ್ನು ಪಡೆದುಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ತಿಳಿಸಿದ್ದಾರೆ.

# ಮೊಹರಂ : ನೆಲ ಬಾಡಿಗೆ-ಜೋಕಾಲಿ ಹರಾಜು ಪ್ರಕ್ರಿಯೆ

• ಮಲ್ಲಮ್ಮ ನುಡಿ ವಾರ್ತೆಮುದಗಲ್




ಇಲ್ಲಿನ ಪುರಸಭೆ ಕಾರ್ಯಾಲಯದ ಸಭಾಂಗಣದಲ್ಲಿ ಮೊಹರಂ ನೆಲ ಬಾಡಿಗೆ ಹಾಗೂ ಜೋಕಾಲಿ ಹರಾಜು ಪ್ರಕ್ರಿಯೆ ಗುರುವಾರ ಜರುಗಿತು.

2026–27ನೇ ಸಾಲಿನ ಮುಂದೂಡಿದ ಮರು ಹರಾಜು ಪ್ರಕ್ರಿಯೆ ಪ್ರಾರಂಭಗೊಂಡ ಮೊದಲ ಹಂತದಲ್ಲಿ ಮುಖ್ಯಾಧಿಕಾರಿ ಪ್ರವೀಣ್ ಕುಮಾರ ಬೋಗಾರ್ ಆದೇಶದಂತೆ ಸರ್ಕಾರಿ ಹವಾಲು ರೂ. 4ಲಕ್ಷ 26ಸಾವಿರ ನಿಗದಿಪಡಿಸಲಾಗಿತ್ತು.ಹರಾಜು ಪ್ರಕ್ರಿಯೆಯಲ್ಲಿ 9 ಜನ ಬಿಡ್ಡದಾರರು ಭಾಗವಹಿಸಿದ್ದರು. ಶುರುವಾದ ಹರಾಜು ಇಸ್ಮೈಲ್ ಎಂಬುವರಿಗೆ ರೂ.1ಲಕ್ಷ 96ಸಾವಿರಕ್ಕೆ ನೆಲ ಮಾಳಿಗೆ ಹರಾಜು ಮಾಡಲಾಯಿತು.

ಜೋಕಾಲಿಯ ಸರ್ಕಾರಿ ಹರಾಜು 6ಲಕ್ಷ 30ಸಾವಿರಕ್ಕೆನಿಗದಿ ಪಡಿಸಲಾಗಿತ್ತು. ಜೋಕಾಲಿ ಹರಾಜಿನಲ್ಲಿ ಇಬ್ಬರು ಭಾಗವಹಿಸಿದ್ದರು. ಶುರುವಾದ ಹರಾಜು ದಸ್ತಗೀರ್ ಪಾಷಾ ಎಂಬುವರಿಗೆ ರೂ.7ಲಕ್ಷಕ್ಕೆ ಜೋಕಾಲಿ ಹರಾಜು ಮಾಡಲಾಯಿತು.

ನಮ್ಮ ನಿಯಮಾನಸಾರವಾಗಿ ಹರಾಜು ಪ್ರಕ್ರಿಯೆಯಾಗಿಲ್ಲ, ಸರಕಾರ ನಿಗದಿಪಡಿಸಿದ ನೆಲಮಳಿಗೆ ಹಾಗೂ ಜೋಕಾಲಿ ಹರಾಜು ಪ್ರಕ್ರಿಯೆ ಸಹಾಯಕ ಆಯುಕ್ತರು ಅಂಗೀಕರಿಸಿದರೆ ಮಾತ್ರ ಬಿಡ್ಡಾರರ ಕೈ ಸೇರುತ್ತವೆ ಎಂದು ಬಿಡ್ಡದಾರರಿಗೆ ಪುರಸಭೆ ಮುಖ್ಯಾಧಿಕಾರಿ ತಿಳಿಸಿದರು.

ಪುರಸಭೆ ಸಿಬ್ಬಂದಿ ಎಸ್ ಡಿ ಎ ನಿಸ್ಸಾರ್ ಅಹಮದ್ ಅವರು ಮುಂದೂಡಿದ ಸಾರ್ವಜನಿಕ ಬಹಿರಂಗ ಮನೋಹರಾಜು ಪ್ರಕಟಣೆ ಸಭೆಯಲ್ಲಿ ಓದಿ ತಿಳಿಸಿದರು.

ಈ ವೇಳೆ ನೂತನ ಪುರಸಭೆ ವ್ಯವಸ್ಥಾಪಕ ಜಗದೀಶ ಎ. ಬಿರಾದಾರ, ಕಂದಾಯ ನಿರೀಕ್ಷಕ ಅಂತೋನಿರಾಜ, ಸಂಪತ್ ಕುಮಾರ ವಿಶ್ವಕರ್ಮ ಸೇರಿದಂತೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಬೇಳೂರು ಗೋಪಾಲಕೃಷ್ಣ ಅವರಿಗೆ ಸಚಿವ ಸ್ಥಾನ ನೀಡಲು ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆಗೋಕರ್ಣ



ಮುಂದಿನ ಸಚಿವ ಸಂಪುಟದಲ್ಲಿಈಡಿಗ ಸಮಾಜದ ಸಾಗರ ಕ್ಷೇತ್ರದ ಶಾಸಕ ಬೇಳೂರು ಗೋಪಾಲಕೃಷ್ಣಅವರಿಗೆ ಸಚಿವ ಸ್ಥಾನ ನೀಡುವಂತೆ ಗುರುವಾರ ಗೋಕರ್ಣದಲ್ಲಿ ನಡೆದ ರಾಷ್ಟ್ರೀಯ ಈಡಿಗ ಮಹಾಮಂಡಳಿಯ ರಾಜ್ಯಮಟ್ಟದ ವಿಚಾರ ಸಂಕಿರಣ ಸಭೆಯಲ್ಲಿ ಒಮ್ಮತದ ನಿರ್ಣಯ ಕೈಗೊಂಡು ಅವರ ಭಾವಚಿತ್ರವನ್ನು ಬಿಡುಗಡೆಗೊಳಿಸಿದರು. ಹೊಸಬರಿಗೆ ಅವಕಾಶ: ರಾಷ್ಟ್ರೀಯ ಈಡಿಗ ಮಹಾಮಂಡಳಿಯ ಶ್ರೀ ಪ್ರಣವಾನಂದ ಸ್ವಾಮೀಜಿ ಅವರ ನೇತೃತ್ವದಲ್ಲಿ ಈ ವಿಶೇಷ ಸಭೆ ನಡೆಯಿತು. ಸದನದಲ್ಲಿ ಸಮಾಜದ ಪರವಾಗಿ ಸದಾ ಧ್ವನಿ ಎತ್ತುವ ಹಾಗೂ ಜನಪರ ಕಾಳಜಿ ಹೊಂದಿರುವ ಶಾಸಕರಿಗೆ ಈ ಬಾರಿ ಪ್ರಾತಿನಿಧ್ಯ ಸಿಗಬೇಕು ಎಂಬುದು ಸಭೆಯ ಪ್ರಮುಖ ಬೇಡಿಕೆಯಾಗಿದೆ. ಸತತ ಮೂರು ಬಾರಿ ಗೆಲುವು ಸಾಧಿಸಿರುವ ಅನುಭವಿ ರಾಜಕಾರಣಿ ಬೇಳೂರು ಗೋಪಾಲಕೃಷ್ಣ ಅವರಿಗೆ ಈ ಬಾರಿ ಸಂಪುಟದಲ್ಲಿ ಸ್ಥಾನ ಒಲಿಯಲೇಬೇಕು ಎಂದು ಸದಸ್ಯರು ಪಟ್ಟು ಹಿಡಿದರು. ಇದೇ ಮಹತ್ವದ ಸಭೆಯಲ್ಲಿ ಪಾಲ್ಗೊಂಡಿದ್ದ ಎಲ್ಲಾ ಸದಸ್ಯರು, ಮುಖ್ಯಮಂತ್ರಿಯಾದ ಡಿ.ಕೆ. ಶಿವಕುಮಾರ್ ಅವರಿಗೆ ಹರ್ಷದಿಂದ ಶುಭಕೋರುವ ಮೂಲಕ ಸರ್ಕಾರದ ಮಟ್ಟದಲ್ಲಿ ತಮ್ಮ ಬೇಡಿಕೆಗೆ ಮನ್ನಣೆ ಸಿಗುವ ವಿಶ್ವಾಸ ವ್ಯಕ್ತಪಡಿಸಿದರು.ಸದನದಲ್ಲಿ ಸಮಾಜದ ಪರವಾಗಿ ಸದಾ ದನಿ ಎತ್ತುವ ಹಾಗೂ ಜನಪರ ಕಾಳಜಿ ಹೊಂದಿರುವ ಶಾಸಕರಿಗೆ ಈ ಬಾರಿ ಪ್ರಾತಿನಿಧ್ಯ ಸಿಗಬೇಕು ಎಂಬುದು ಸಭೆಯ ಪ್ರಮುಖ ಬೇಡಿಕೆ–ಯಾಗಿತ್ತು. ಸತತ ಮೂರು ಬಾರಿ ಗೆಲುವು ಸಾಧಿಸಿರುವ ಅನುಭವಿ ರಾಜಕಾರಣಿ ಬೇಳೂರು ಗೋಪಾಲಕೃಷ್ಣ ಅವರಿಗೆ ಈ ಬಾರಿ ಸಂಪುಟದಲ್ಲಿ ಸ್ಥಾನ ಒಲಿಯಲೇಬೇಕು ಎಂದು ಸದಸ್ಯರು ಪಟ್ಟು ಹಿಡಿದರು. ಇದೇ ಮಹತ್ವದ ಸಭೆಯಲ್ಲಿ ಪಾಲ್ಗೊಂಡಿದ್ದ ಎಲ್ಲಾ ಸದಸ್ಯರು, ಮುಖ್ಯಮಂತ್ರಿಯಾದ ಡಿ.ಕೆ. ಶಿವಕುಮಾರ್ ಅವರಿಗೆ ಹರ್ಷದಿಂದ ಶುಭಕೋರುವ ಮೂಲಕ ಸರ್ಕಾರದ ಮಟ್ಟದಲ್ಲಿ ತಮ್ಮ ಬೇಡಿಕೆಗೆ ಮನ್ನಣೆಸಿಗುವ ವಿಶ್ವಾಸ ವ್ಯಕ್ತಪಡಿಸಿದರು.ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಈಡಿಗ ಮಹಾಮಂಡಳಿ ರಾಜ್ಯಾಧ್ಯಕ್ಷ ತಿಪ್ಪೇಶ್, ಪ್ರಮುಖರಾದ ಡಾ. ಸದಾನಂದ ಪೆರಳೆ, ಯಶೋಧಮ್ಮ ದಾವಣಗೆರೆ, ಮಂಚೇಗೌಡ, ಸಂತೋಷ ತವನಂಬಿ, ಡಾ. ಲಕ್ಷ್ಮಿ ನರಸಯ್ಯ, ವೆಂಕಟೇಶ ಕಡಚೂರು, ವಿಕ್ರಂ ನಾಯ್ಕ, ವಸಂತ ನಾಯ್ಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬೀಜಗಳ ಮಾರಾಟಕ್ಕಾಗಿ ಬೀಜ ಪರವಾನಿಗೆ ಪಡೆಯುವುದು ಕಡ್ಡಾಯ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.11–ಕಲಬುರಗಿ ಜಿಲ್ಲೆಯ ವ್ಯಾಪ್ತಿಯಲ್ಲಿನಎಲ್ಲಾತರಕಾರಿ ಬೀಜ ಮಾರಾಟಗಾರರು/ ವ್ಯಾಪಾರಸ್ಥರು ಬೀಜಗಳ ಮಾರಾಟಕ್ಕಾಗಿ ಬೀಜ ನಿಯಂತ್ರಣ ಆದೇಶ(Seeds (Control)Order)1983ರನ್ವಯ ಬೀಜಪರವಾನಗಿ(Seed License) ಹೊಂದಿರುವುದು ಕಡ್ಡಾಯವಾಗಿದೆ ಎಂದು ಕಲಬುರಗಿ (ಜಿ.ಪಂ.) ತೋಟಗಾರಿಕೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ. ಆದ್ದರಿಂದ ಇನ್ನು ಬೀಜ ಪರವಾನಗಿ ಪಡೆಯದೇ ತರಕಾರಿ ಬೀಜಮಾರಾಟಗಾರರು/ವ್ಯಾಪಾರಸ್ಥರು ಮಾರುವಂತಿಲ್ಲತರಕಾರಿ ಬೀಜಮಾರಾಟಗಾರರುವ್ಯಾಪಾರಸ್ಥರು ಸಕಾಲ (Sakala) ಪೋರ್ಟಲ್ ಮೂಲಕ ಬೀಜ ಪರವಾನಗಿ ಪಡೆಯಲು ಅರ್ಜಿ ಸಲ್ಲಿಸಬೇಕು.


# ಕರವೇ ರಾಜ್ಯಾಧ್ಯಕ್ಷ ನಾರಾಯಣಗೌಡರ ಹುಟ್ಟು ಹಬ್ಬ ಆಚರಣೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಕಳೆದ ಹಲವು ದಶಕಗಳಿಂದ ಕನ್ನಡಿಗರಿಗಾಗಿ ಹೋರಾಟ, ಚಳವಳಿ ನಡೆಸುತ್ತಾ, ಕಾವೇರಿ ನದಿ ನೀರಿನ ವಿವಾದ, ಬೆಳಗಾವಿ ಗಡಿ ವಿವಾದ, ಮತ್ತು ಕನ್ನಡ ನಾಮಫಲಕಗಳ ಕಡ್ಡಾಯ ಅಳವಡಿಕೆ ಸೇರಿದಂತೆ ಕನ್ನಡವೇ ಜಾತಿ, ಕನ್ನಡವೇ ಧರ್ಮ, ಕನ್ನಡವೇ ದೇವರು ಎಂಬ ಧ್ಯೇಯವಾಕ್ಯದೊಂದಿಗೆ ಕರ್ನಾಟಕ ರಕ್ಷಣಾ ವೇದಿಕೆ ಮುನ್ನಡೆಸಿ, ಅನೇಕ ಮಹತ್ವದ ಹೋರಾಟಗಳಲ್ಲಿ ಕರವೇ ರಾಜ್ಯಾಧ್ಯಕ್ಷರಾದ ನಾರಾಯಣಗೌಡರು ಗೆಲುವು ತಂದುಕೊಟ್ಟಿದ್ದಾರೆ ಎಂದು ಕರವೇ ಯಾದಗಿರಿ ತಾಲೂಕು ಅಧ್ಯಕ್ಷ ಮಲ್ಲು ಮಾಳಿಕೇರಿ ಹೇಳಿದರು. ಬೆಂಗಳೂರಿನ ಕರವೇ ನಾರಾಯಣಗೌಡರ ಹುಟ್ಟು ಹಬ್ಬದ ಪ್ರಯುಕ್ತ ನಾರಾಯಣಗೌಡರ ಗೃಹ ಕಚೇರಿಯಲ್ಲಿ ಶುಭ ಕೋರಿ ಮಾತನಾಡಿದರು. ಕನ್ನಡ ನಾಡಿನ ಏಕತೆ ಮತ್ತು ಭಾಷಾಭಿಮಾನದ ಹೋರಾಟ ಪ್ರತಿ ಕನ್ನಡಿಗರ ಅಸ್ಮಿತೆಯಾಗಿದೆ, ಕನ್ನಡ ನಾಡು, ನುಡಿ, ನೆಲ ಮತ್ತು ಜಲದ ರಕ್ಷಣೆಗಾಗಿ ನಿರಂತರವಾಗಿ ಹೋರಾಟ ನಡೆಸಿಕೊಂಡು ಬರುತ್ತಿರುವ ಕರವೇ ರಾಜ್ಯಾಧ್ಯಕ್ಷರಾದ ನಾರಾಯಣಗೌಡರು ಕನ್ನಡಿಗರ ಹಕ್ಕುಗಳ ಧ್ವನಿಯಾಗಿ ರಾಜ್ಯದಲ್ಲಿ ಕನ್ನಡಪರ ಸಂಘಟಕರಾಗಿದ್ದಾರೆ ಎಂದು ಹೇಳಿದರು. ಕರವೇ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದು ನಾಯಕ ಹತ್ತಿಕುಣಿ ಮಾತನಾಡಿ, ಕೇಂದ್ರ ಸರ್ಕಾರದ ಉದ್ಯೋಗ ಕ್ಷೇತ್ರದಲ್ಲಿ ಕನ್ನಡಿಗರಿಗೆ ಉದ್ಯೋಗ, ಹಿಂದಿ ಹೇರಿಕೆ, ನೆರೆ-ಹೊರಭಾಷಿಗರಿಂದ ಕನ್ನಡ ಭಾಷೆಗೆ ಧಕ್ಕೆಯಾಗುವುದನ್ನು ತಡೆದಿದ್ದಾರೆ, ಅನೇಕ ಹೋರಾಟ ಚಳವಳಿಯಿಂದ ಜೈಲು ಸೇರಿದ್ದರೂ ಕನ್ನಡಪರ ಹೋರಾಟ ಮಾಡುವ ಇಂತಹ ದೀಮಂತ ಕನ್ನಡ ಹೋರಾಟಗಾರರಿಗೆ ಶಕ್ತಿ ತುಂಬೋಣ ಎಂದರು. ಈ ಸಂದರ್ಭದಲ್ಲಿ., ವಿಶ್ವನಾಥ ಬೆಂಗಳೂರು, ಯಾದಗಿರಿಯ ಸಿದ್ದಪ್ಪ ಕೂಯಿಲೂರ್, ಭೀಮರಾಯ ರಾಮಸಮುದ್ರ, ರವಿಕುಮಾರ್ ಜಮ್ಮಾರ್, ಮಲ್ಲು ಬಾಡಿಯಾಳ, ಸಿದ್ದಪ್ಪ ಕ್ಯಾಸಪ್ಪನಹಳ್ಳಿ, ನಮ್ಮ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ರೈತರು ಆರ್ಥಿಕವಾಗಿ ಸದೃಢರಾಗಲು ಕಂದಕೂರ ಸಲಹೆ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಸಕಾಲಕ್ಕೆ ಮಳೆ, ಬೆಳೆ ಇಲ್ಲದೆ ಮೊದಲೆ ಸಂಕಷ್ಟದಲ್ಲಿದ್ದಿರಿ, ಸರಕಾರ ನೀಡುವ ಈ ಪರಿಹಾರದ ಹಣವನ್ನು ವ್ಯರ್ಥವಾಗಿ ಹಾಳು ಮಾಡಬೇಡಿ, ಅಗತ್ಯಕ್ಕನುಗುಣವಾಗಿ ಬಳಸಿಕೊಳ್ಳಿ. ಸರಕಾರದ ಸೌವಲತ್ತುಗಳನ್ನು ಸದಪಯೋಗ ಪಡೆಸಿಕೊಂಡು ಆರ್ಥಿಕವಾಗಿ ಸದೃಢರಾಗಬೇಕು ಎಂದು ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಸಲಹೆ ನೀಡಿದರು. ನಗರದ ಶಾಸಕರ ಕಚೇರಿಯಲ್ಲಿ ಪ್ರಕೃತಿ ವಿಕೋಪದಡಿ ಎತ್ತು, ಎಮ್ಮೆ, ಆಕಳು ಮೃತಪಟ್ಟ ಮತಕ್ಷೇತ್ರದ ನಾನಾ ಗ್ರಾಮಗಳ ಸಂತ್ರಸ್ತ ರೈತರಿಗೆ ಪ್ರಕೃತಿ ವಿಕೋಪ ನಿಧಿಯಡಿಯಲ್ಲಿ ಮಂಜೂರಾಗಿರುವ ಪರಿಹಾರ ಚೆಕ್‌ನ್ನು ವಿತರಿಸಿ ಅವರು ಮಾತನಾಡಿದರು.

ಪರಿಹಾರ ಧನವನ್ನು ಸರಿಯಾಗಿ ಬಳಸಿಕೊಂಡು ಮಕ್ಕಳ ವಿದ್ಯಾಭ್ಯಾಸ, ಜೊತೆಗೆ ಕುಟುಂಬದ ಆರ್ಥಿಕ ಸಂಕಷ್ಟವನ್ನೂ ದೂರ ಮಾಡಿಕೊಳ್ಳಬೇಕು, ನಿಮ್ಮ ಜೊತೆ ನಾನಿದ್ದೇನೆ ಯಾವುದಕ್ಕೂ ಎದೆಗುಂದದೆ ಜೀವನ ನಡೆಸಿ, ಕಷ್ಟವಾದರೆ ನನ್ನ ಹತ್ತಿರ ಬನ್ನಿ ಎಂದ ಸಾಂತ್ವಾನ ಹೇಳಿದರು. ಪ್ರಕೃತಿ ವಿಕೋಪದಿಂದ ಜಾನುವಾರಗಳು ಸತ್ತರೆ ಅವುಗಳ ಸಾಕಣೆದಾರರಿಗೆ ಸರ್ಕಾರ ಪರಿಹಾರ ವಿತರಿಸುವ ಕೆಲಸ ಮಾಡುತ್ತಿದೆ, ಇದರಿಂದ ಬಡವರು ಜೀವನ ನಡೆಸಲು ಸರಳ ದಾರಿ ಮಾಡಿಕೊಟ್ಟಿದೆ ಎಂದರು.

## ಫಲಾನುಭವಿಗಳು

ಪ್ರಕೃತಿ ವಿಕೋಪ ಪರಿಹಾರದಡಿ ಯರಗೋಳದಲ್ಲಿ ಮೃತಪಟ್ಟ ದಿ. ಸೋಮರಾಯ ರಾಮಲಿಂಗಪ್ಪ ಕುಟುಂಬಕ್ಕೆ 5 ಲಕ್ಷ, ಅಲ್ಲಿಪೂರದಲ್ಲಿ ಮೃತಪಟ್ಟ ದಿ. ಸುನೀಲ್ ಆನಂದ ರಾಮಣ್ಣೋರ್ ಕುಟುಂಬಕ್ಕೆ 5ಲಕ್ಷ, ಗೊಂದೆಡಗಿಯ ರೈತ ಸಿದ್ದಪ್ಪ ಶಂಕ್ರಪ್ಪ ಹೂಗಾರ ರವರಿಗೆ 3 ಆಕಳು ಮೃಪಟ್ಟಿದ್ದರಿಂದ 75 ಸಾವಿರ, ಗೂಡೂರಿನ ರೈತ ಶೇಖಪ್ಪ ರಾಮಣ್ಣನವರಿಗೆ 1 ಎತ್ತು ಮೃತಪಟ್ಟಿದ್ದರಿಂದ 50 ಸಾವಿರ, ಹತ್ತಿಕುಣಿಯ ರೈತ ಮಲ್ಲಪ್ಪ ಸಲೇರಿಯವರಿಗೆ 1 ಆಡು ಮೃತಪಟ್ಟಿದ್ದರಿಂದ 20 ಸಾವಿರ ಪರಿಹಾರ ಧನ ಚೆಕ್‌ನ್ನು ಶಾಸಕ ಶರಣಗೌಡ ಕಂದಕೂರ ವಿತರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಸುಭಾಶ್ಚಂದ್ರ ಕಟಕಟಿ, ಈಶ್ವರಸಿಂಗ್ ನಾಯಕ್, ವಿರುಪಾಕ್ಷಪ್ಪ ಸಾಹುಕಾರ, ಶರಣರಡ್ಡಿ, ಹಂಪಯ್ಯ, ಸೋಮಯ್ಯ, ಭಾಸ್ಕರ್, ಭಾಗಣ್ಣಗೌಡ ಅಲ್ಲಿಪೂರ, ಯಲ್ಲಾಲಿಂಗ ಗೂಡೂರು, ಶಿವಯೋಗಿ, ಮರೆಪ್ಪ ಚಡಬಾ, ನರಸಿಂಹರಡ್ಡಿ ಚಿಂತಗುಂಟಾ, ಶಿವಶರಣಪ್ಪ, ಭೀಮರಾಯ ಇಿಲ್ಲಿ ಯರಗೋಳ, ನಾಗರಡ್ಡಿ, ಹರ್ಷವರ್ಧನರಡ್ಡಿ, ಶಿವಶರಣಪ್ಪ ಪರಡಿ ಇತರರಿದ್ದರು.

# ಶರಣಬಸಪ್ಪ ದರ್ಶನಾಪೂರಗೆ ಸಚಿವ ಸ್ಥಾನ ನೀಡಬೇಕೆಂದು ಸಿಎಂಗೆ ಮನವಿ


• ಮಲ್ಲಮ್ಮ ನುಡಿ ವಾರ್ತೆ ಶಹಾಪುರ



ಶಹಾಪೂರ ಮತ ಕ್ಷೇತ್ರದ ಶಾಸಕರಾದ ಮತ್ತು ಮಾಜಿ ಸಚಿವರಾದ ಶರಣಬಸಪ್ಪ ಗೌಡ ದರ್ಶನಪೂರ ರವರ 5 ಬಾರಿ ಶಾಸಕರಾಗಿ ಮತ್ತು 3 ಬಾರಿ ಸಚಿವರಾಗಿ ಈ ನಾಡಿನ ಜನರ ಸೇವೆ ಸಲ್ಲಿಸಿದ್ದು ಅವರಿಗೆ ಈ ಸಚಿವ ಸಂಪುಟದಲ್ಲಿ ಉನ್ನತವಾದ ಸ್ಥಾನಮಾನ ನೀಡಬೇಕು ಎಂದು ಕರ್ನಾಟಕ ಚಾಲಕರ ಒಕ್ಕೂಟದ ಜಿಲ್ಲಾ ಅಧ್ಯಕ್ಷ ಬಸವರಾಜ ಎಮ್ ಚಟ್ನಳ್ಳಿ ಮನವಿ ಸಲ್ಲಿಸಿದರು. ಪಟ್ಟಣದ ಬಸವೇಶ್ವರ ವೃತ್ತದಲ್ಲಿ ನಲ್ಲಿ ನಡೆದ ಕರ್ನಾಟಕ ಚಾಲಕರ ಒಕ್ಕೂಟ ಶಹಾಪುರ ದಿಂದ ನಡೆದ ಬ್ರಹತ್ ಪ್ರತಿಭಟನೆಯಲ್ಲಿ ಕರ್ನಾಟಕ ಸರ್ಕಾರದ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ರವರಿಗೆ ಶಹಾಪೂರದ ತಾಸಿಲ್ದಾರ್ ಮೂಲಕ ಮನವಿಯನ್ನು ಸಲ್ಲಿಸಿ ಮಾತನಾಡಿದರು. ಕರ್ನಾಟಕ ಚಾಲಕರ ಒಕ್ಕೂಟ ಶಹಾಪುರ ತಾಲೂಕ ಅಧ್ಯಕ್ಷ ಹೊನ್ನಪ್ಪ ಜಂಗಳಿ ಮಾತನಾಡಿ ನಮ್ಮ ಕಲ್ಯಾಣ ಕರ್ನಾಟಕ ಭಾಗಕ್ಕೆ ಇವರ ಅಪಾರ ಕೊಡದೆ ಇದ್ದು ಇಂದಿನ ಅವಧಿಯಲ್ಲಿ ಸಚಿವರಾದಗ ಜಿಲ್ಲೆಯ ಅಭಿವೃದ್ಧಿ ಸಲ್ಲಿಸಿದ್ದು ಆದರೆ ದುರದೈವ ತಮ್ಮ ಸಂಪುಟದಲ್ಲಿ ಸಚಿವರಾಗಬೇಕಿತ್ತು ಆಗದಾ ಕಾರಣ ತಮ್ಮ ಸಚಿವ ಸಂಪುಟದಲ್ಲಿ ಶರಣಬಸಪ್ಪ ಗೌಡ ದರ್ಶನಪೂರ ರವರನ್ನು ಸಚಿವರನ್ನಾಗಿ ಮಾಡಿ ಎಂದರು. ಆಟೋ ಚಾಲಕರ ಒಕ್ಕೂಟ ಜಿಲ್ಲಾ ಅಧ್ಯಕ್ಷ ಮಲ್ಲಿಕಾರ್ಜುನ್ ಸಾಂಗ್ಲಿಯಾನ ಮಾತನಾಡಿ ನಮ್ಮ ಆಟೋ ಚಾಲಕರಿಗೆ ಕಷ್ಟದ ಸಮಯದಲ್ಲಿ ಸಹಾಯ ಮಾಡಿದ ಮಹಾ ನಾಯಕರು ಹಾಗೂ ಈ ಭಾಗದ ಅಭಿವೃದ್ಧಿ ಮತ್ತು ತುರ್ತು ಸೇವೆ ಮೊದಲ ಆದ್ಯತೆ ನೀಡುವ ಜನಪ್ರಿಯ ಶಾಸಕರಾಗಿದ್ದಾರೆ ಇಂಥವರಿಗೆ ಮೊದಲ ಆದ್ಯತೆ ನೀಡಬೇಕಾಗಿತ್ತು ಸರ್ಕಾರ ಆದರೆ ಈ ನೂತನ ಸಚಿವ ಸಂಪುಟದಲ್ಲಿ ಶರಣಬಸಪ್ಪಗೌಡ ದರ್ಶನಾಪುರ ರವರಿಗೆ ತುರ್ತಾಗಿ ಸಚಿವ ಸಂಪುಟ ನೀಡಬೇಕು ಎಂದು ಹೇಳಿದರು.

ಈ ಸಂಧರ್ಭದಲ್ಲಿ ಗೂಡ್ಸ್ ಚಾಲಕರ ಒಕ್ಕೂಟ ಜಿಲ್ಲಾ ಅಧ್ಯಕ್ಷರ ಮಹಿಫಲಾರೆಡ್ಡಿ, ಜಿಲ್ಲಾ ಉಪಾಧ್ಯಕ್ಷ ಚಿಕ್ಕಣ್ಣ ಕಂಬಾರ, ತಾಲೂಕ ಕರ್ನಾಟಕ ಚಾಲಕರ ಒಕ್ಕೂಟ ಶಹಾಪೂರ ಉಪಾಧ್ಯಕ್ಷ ಹಣಮಂತ ಕೋರ್ನೆ, ಮಹ್ಮದ್ ಇಸ್ಮಾಯಿಲ್, ಪ್ರಭು ಕೊರವರ್, ಸಂತೋಷ ಮದ್ರಿಕಿ, ಲಾಲು ದೋರನಹಳ್ಳಿ, ಶಿವು ಕಾಡಂಗೇರಾ, ಮಲ್ಲು ಬಾಂತಹಾಳ, ಬಸವರಾಜ ಹೀರೆಗೌಡ್ರು, ಅಂದು ಕನ್ಯಕೋಳೂರು, ಮಾಹಾದೇವಪ್ಪ ಹೊಸ್ಮನಿ, ಧರ್ಮಸಿಂಗ್, ಮಂಜುನಾಥ ಬಿ.ಗುಡಿ, ಸುರಪುರ ತಾಲೂಕ ಅಧ್ಯಕ್ಷ ದೇವ ನಾಯಕ, ಅಭಿವೃದ್ಧಿ ಜಾದವ, ಸಿದ್ದಣ್ಣ ಆಲ್ದಾಳ, ಎಚ್ ಎಮ್ ಪಾಟೀಲ್, ರವಿ ಕಾಂಗ್ರೆಸ್, ಅಂಬಣ್ಣ ಮುಂತಾದ ಚಾಲಕರು ಇದ್ದರು.

# ಕೆಂಚರಾಯ ಮುತ್ಯಾರಿಂದ ಸಚಿವ ಯತೀಂದ್ರಗೆ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ರಾಜ್ಯದ ನೂತನ ನಗರಾಭಿವೃದ್ಧಿ ಸಚಿವರಾಗಿ ನೇಮಕವಾದ ಡಾ.ಯತೀಂದ್ರ ಸಿದ್ದರಾಮಯ್ಯರವರನ್ನು ಜಿಲ್ಲೆಯ ಕೆಂಭಾವಿ ಸಮಿಪ ಇರುವ ಸುಕ್ಷೇತ್ರ ಮಾಲಹಳ್ಳಿ ಗ್ರಾಮದ ಶ್ರೀ ಮಾಳಿಂಗರಾಯ ದೇವಸ್ಥಾನದ ಪರಮ ಪೂಜ್ಯ ಶ್ರೀ ಕೆಂಚರಾಯ ಮುತ್ಯಾ ರವರು ಬೆಂಗಳೂರಿನ ಅವರ ನಿವಾಸದಲ್ಲಿ ಶುಭ ಕೋರಿ ಸನ್ಮಾನಿಸಿ ಆಶೀರ್ವದಿಸಿ ಮಾತನಾಡಿದರು.

ಎರಡನೇ ಅವಧಿಯ ಸಂಪುಟ ಪುನರಚೇನೆಯಲ್ಲಿ ಹೈಕಮಾಂಡ್-ತಮ್ಮ ಸೇವೆಯನ್ನು ಪರಿಗಣಿಸಿ ತಮಗೆ ಸಚಿವ ಸ್ಥಾನ ನೀಡಿದ್ದು ಅತ್ಯಂತ ಸಂತಸದ ವಿಷಯ ಮುಂದಿನ ದಿನಗಳಲ್ಲಿ ತಮಗೆ ರಾಜಕೀಯದಲ್ಲಿ ಉಜ್ವಲ ಭವಿಷ್ಯವಿದೆ ತಮ್ಮ ತಂದೆಯವರಂತೆ ತಾವು ಕೂಡಾ ಜನಪರ ಸಮಾಜಮುಖಿ ಕೆಲಸ ಮಾಡುವ ಮೂಲಕ ಅವರ ಕೀರ್ತಿಯನ್ನು ಹೆಚ್ಚಿಸಬೇಕಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಕುರುಬ ಸಂಘದ ಸುರಪುರ ತಾಲೂಕ ಅಧ್ಯಕ್ಷ ಕಾಳಪ್ಪ ಕವತಿ, ಶಶಿಕುಮಾರ್, ಬೆಂಗಳೂರು, ಬಸನಗೌಡ ಬಪ್ಪರಗಿ, ಮಾಳಿಂಗರಾಯ ಕಂದಳ್ಳಿ, ಬೀರಪ್ಪ ಮಾಲಹಳ್ಳಿ, ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಹೈಕೋರ್ಟ್ ಆದೇಶದ ಮೇರೆಗೆ ಅಕ್ರಮ ಇಸ್ಪೀಟ್ ದಂಧೆ ನಿಲ್ಲಿಸಿ: ತೇಜರಾಜ್ ರಾಠೋಡ ಮನವಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ವಡಗೇರಾ ರಸ್ತೆಯ ಹುಲಕಲ್ (ಜೆ) ಗ್ರಾಮದ ಸರ್ವೆ ನಂ. 94/1ರಲ್ಲಿರುವ ಯಾದಗಿರಿ ಹೆಲ್ತ್ ಅಂಡ್ ರಿಕ್ರಿಯೇಷನ್ ಕ್ಲಬ್ ಅನ್ನು ಈ ಹಿಂದೆ 2015 ರಲ್ಲಿ ಸಾರ್ವಜನಿಕರ ದೂರಿನ ಮೇರೆಗೆ ಸಂಪೂರ್ಣವಾಗಿ ಬಂದ್ ಮಾಡಿಸಲಾಗಿತ್ತು. ಅಂದಿನಿಂದ ಇಷ್ಟು ವರ್ಷಗಳ ಕಾಲ ಈ ಕ್ಲಬ್ ಸಂಪೂರ್ಣವಾಗಿ ಮುಚ್ಚಲ್ಪಟ್ಟಿತ್ತು. ಆದರೆ ಈಗ, ಕ್ಲಬ್‌ನ ಸಂಘಟಕರು ಹೈಕೋರ್ಟ್ ಆದೇಶದ (ಡಬ್ಲ್ಯೂ. ಪಿ :201878/2022) ನೆಪವನ್ನೊಡ್ಡಿ, ಇಷ್ಟು ದಿನ ಬಂದ್ ಆಗಿದ್ದ ಕ್ಲಬ್ ಅನ್ನು ಮತ್ತೆ ಪ್ರಾರಂಭಿಸಿದ್ದಾರೆ. ಇವರು ಜನರಿಂದ ಹಣ ವಸೂಲಿ ಮಾಡುತ್ತಾರೆ ಮತ್ತು ಸರ್ಕಾರಕ್ಕೆ ಯಾವುದೇ ತೆರಿಗೆ ಪಾವತಿ ಮಾಡದೇ ಮೋಸ ಮಾಡುತ್ತಾರೆ. ಈ ಕ್ಲಬ್ ನಲ್ಲಿ ಅಕ್ರಮ ಹಣ ತಾಂಡವವಾಡುತ್ತಿದೆ. ಈ ಕ್ಲಬ್‌ನಲ್ಲಿ ಪತಿ 1,000 ರೂ. ಆಟಕ್ಕೆ 100 ರೂ. ಕಮಿಷನ್ ಪಡೆದು ಬೃಹತ್ ಮಟ್ಟದ ಅಕ್ರಮ ಇಸ್ಪೀಟ್ ಜೂಜಾಟವನ್ನು ನಡೆಸಲಾಗುತ್ತಿದೆ. ಇದರಿಂದಾಗಿ ಸ್ಥಳೀಯ ಯುವಕರು ಮತ್ತು ಬಡ ಕುಟುಂಬಗಳು ಬೀದಿಗೆ ಬರುತ್ತಿದ್ದಾರೆ,

ಆದ್ದರಿಂದ ತಕ್ಷಣವೇ ಈ ಕ್ಲಬ್ ಮೇಲೆ ದಾಳಿ ನಡೆಸಿ, ಅಲ್ಲಿನ ಸಿಸಿ ಟಿವಿ ದೃಶ್ಯಾವಳಿಗಳನ್ನು ವಶಕ್ಕೆ ಪಡೆದು ಪರಿಶೀಲಿಸಬೇಕು ಹಾಗೂ ಅಕ್ರಮ ಜೂಜಾಟ ನಡೆಸುತ್ತಿರುವವರ ಮೇಲೆ ಎಫ್ ಐ ಆರ್ ದಾಖಲಿಸಿ, ಈ ಕ್ಲಬ್ ಅನ್ನು ತಕ್ಷಣವೇ ಶಾಶ್ವತವಾಗಿ ಬಂದ್ ಮಾಡಬೇಕು ಎಂದು ಜಯ ಕರ್ನಾಟಕ ಜನಪರ ವೇದಿಕೆ ಜಿಲ್ಲಾಧ್ಯಕ್ಷ ತೇಜರಾಜ್ ರಾಠೋಡ ರವರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಸಂಚಾಲಕ ನಾಗರಾಜ ಪೂಜಾರಿ, ಶಹಾಪುರ ತಾಲೂಕು ಅಧ್ಯಕ್ಷ ಸೋಪಣ್ಣ ಹಳಿಸಗರ, ಶಹಾಪುರ ತಾಲೂಕು ಮಹಿಳಾ ಘಟಕ ಅಧ್ಯಕ್ಷ ರೇಣುಕಾ. ಎಚ್. ತಳವಾರ, ಶಹಾಪುರ ತಾಲೂಕು ಕಾಯ9ದಶಿ9 ಯಲ್ಲಾಲಿಂಗ ನಾಯಕ, ಜಗದೇವಿ ಹಳ್ಳಿಸಗರ, ಜ್ಯೋತಿ ಶಹಾಪುರ, ಬಾಬು ಅಲ್ಲಿಪುರ್, ಮಿಥುನ್ ರಾಥೋಡ, ಶಶಿಕುಮಾರ, ಮೌನೇಶ ರಾಥೋಡ, ಗೋವಿಂದ್ ರಾಥೋಡ, ರೋಹಿತ್ ಚೌಹಾನ, ವೆಂಕಟೇಶರೆಡ್ಡಿ ಮುಂತಾದವರು ಇದ್ದರು.

# ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರಗೆ ಸಚಿವ ಸ್ಥಾನ ನೀಡುವಂತೆ ಭಾಗಣ್ಣ ತಡಿಬಿಡಿ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ರಾಜ್ಯದಲ್ಲಿ ಮುಂದೆ ರಚನೆಯಾಗಲಿರುವ ಹೊಸ ಸಚಿವ ಸಂಪುಟದಲ್ಲಿ ಯಾದಗಿರಿ ಜಿಲ್ಲೆಯ ಜನಪ್ರಿಯ ಶಾಸಕರಾದ ಚನ್ನಾರಡ್ಡಿ ಪಾಟೀಲ್ ತುನ್ನೂರು ರವರಿಗೆ ಸಚಿವ ಸ್ಥಾನವನ್ನು ನೀಡಬೇಕೆಂದು ಕಾಂಗ್ರೆಸ್ ಯುವ ಮುಖಂಡ ಭಾಗಣ್ಣ ತಡಿಬಿಡಿ ರವರು ಒತ್ತಾಯಿಸಿದರು.

ಈ ಕುರಿತು ಹೇಳಿಕೆ ನೀಡಿದ ಅವರು, ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಅವರು ತಮ್ಮ ಕ್ಷೇತ್ರದಲ್ಲಿ ಜನಪರ ಕೆಲಸಗಳು, ಅಭಿವೃದ್ಧಿ ಕಾರ್ಯಕ್ರಮಗಳು ಹಾಗೂ ಜನರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ಮೂಲಕ ಜನಮನ ಗೆದ್ದಿರುವ ನಾಯಕರಾಗಿದ್ದಾರೆ ಎಂದು ಹೇಳಿದರು.

ಶಾಸಕರಿಗೆ ರಾಜಕೀಯ ಅನುಭವ, ಆಡಳಿತ ಸಾಮರ್ಥ್ಯ ಮತ್ತು ಸಮಾಜ ಸೇವೆಯ ಬದ್ಧತೆಯನ್ನು ಗಮನದಲ್ಲಿಟ್ಟುಕೊಂಡು ಸಚಿವ ಸಂಪುಟದಲ್ಲಿ ಅವರಿಗೆ ಅವಕಾಶ ನೀಡುವುದು ನ್ಯಾಯಸಮ್ಮತವಾಗಿದೆ ಎಂದು ಅಭಿಪ್ರಾಯಪಟ್ಟರು. ಯಾದಗಿರಿ ಜಿಲ್ಲೆ ಸ್ಥಾಪನೆಯಾಗಿ ಸುಮಾರು 15 ವರ್ಷಗಳಾದರೂ, ಜಿಲ್ಲೆಯ ಅಭಿವೃದ್ಧಿ ನಿರೀಕ್ಷಿತ ಮಟ್ಟದಲ್ಲಿ ನಡೆಯದಿರುವುದು ವಿಷಾದನೀಯವಾಗಿದೆ.

ಈ ಹಿನ್ನೆಲೆಯಲ್ಲಿ, ಜಿಲ್ಲೆಯ ಸಮಗ್ರ ಅಭಿವೃದ್ಧಿಗಾಗಿ ಸ್ಥಳೀಯ ನಾಯಕರಿಗೆ ಸಚಿವ ಸ್ಥಾನ ನೀಡುವುದು ಅತ್ಯಾವಶ್ಯಕವಾಗಿದೆ ಎಂದು ಅವರು ಹೇಳಿದರು.

ರಾಜ್ಯ ಸರ್ಕಾರ ಹಾಗೂ ಪಕ್ಷದ ಹೈಕಮಾಂಡ್ ಈ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸಿ ಚನ್ನಾರಡ್ಡಿ ಪಾಟೀಲ್ ತುನ್ನೂರು ರವರಿಗೆ ಸಚಿವ ಸ್ಥಾನ ನೀಡಿ ಜಿಲ್ಲೆಯ ಜನರ ಆಶಯವನ್ನು ಈಡೇರಿಸಬೇಕೆಂದು ಭಾಗಣ್ಣ ತಡಿಬಿಡಿ ಅವರು ಒತ್ತಾಯಿಸಿದರು.

# ಕೌಶಲ್ಯ, ಉದ್ಯಮಶೀಲತೆ ತರಬೇತಿಗೆ ಯುವನಿಧಿ ಫಲಾನುಭವಿಗಳು ನೋಂದಾಯಿಸಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕೊಪ್ಪಳ ಜಿಲ್ಲೆಯಲ್ಲಿ ಯುವನಿಧಿಯೋಜನೆಯ ಫಲಾನುಭವಿಗಳು ಕಡ್ಡಾಯವಾಗಿ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತೆ ತರಬೇತಿಯನ್ನು ಪಡೆಯಲು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಯುವನಿಧಿ ಯೋಜನೆಯಡಿ ನೋಂದಾಯಿಸಿಕೊಂಡು ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಯುವಕ, ಯುವತಿಯರಿಗೆ ಯುವನಿಧಿ ಪ್ಲಸ್ ಕಾರ್ಯಕ್ರಮದಡಿ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತೆ ತರಬೇತಿಯನ್ನು ಜಿಲ್ಲೆಯ ಜಿಟಿಟಿಸಿ, ಸಿಡಾಕ್, ಸರ್ಕಾರಿ ಐಟಿಐಗಳಲ್ಲಿ ಯುವನಿಧಿ ಪ್ಲಸ್ ಅಡಿಯಲ್ಲಿ ತರಬೇತಿಯನ್ನು ನೀಡಲಾಗುತ್ತಿದೆ. ಆದರೂ ಸಹ ನಿರೀಕ್ಷಿತ ಸಂಖ್ಯೆಯ ಯುವನಿಧಿ ಫಲಾನುಭವಿಗಳು ಯುವನಿಧಿ ಪ್ಲಸ ಅಡಿಯಲ್ಲಿ ತರಬೇತಿಯನ್ನು ಪಡೆಯುತ್ತಿರುವುದಿಲ್ಲ. ಹಾಗಾಗಿ ಜಿಲ್ಲೆಯ ಎಲ್ಲಾ ಯುವನಿಧಿ ಫಲಾನುಭವಿಗಳು https://skillmission.karnataka.gov.in/app/registration_verify ಈ ಲಿಂಕ್‌ನ್ನು ಉಪಯೋಗಿಸಿ ತುರ್ತಾಗಾಗಿ ನೋಂದಾಯಿಸಿಕೊಂಡು ಯುವನಿಧಿ ಪ್ಲಸ್ ಅಡಿಯಲ್ಲಿ ತರಬೇತಿಯನ್ನು ಪಡೆದುಕೊಳ್ಳಲು ಈ ಸುವರ್ಣಾಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕು. ವಿಶೇಷ ಸೂಚನೆ: ಪ್ರಸ್ತುತ ಯುವನಿಧಿ ಫಲಾನುಭವಿಗಳು ಯುವನಿಧಿ-ಪ್ಲಸ್ ಕಾರ್ಯಕ್ರಮದಡಿ ತರಬೇತಿಯನ್ನು ಪಡೆದರೂ ಸರ್ಕಾರವು ನಿಗದಿಪಡಿಸಿರುವ ಅವಧಿಯವರೆಗೆ ನಿರುದ್ಯೋಗ ಭತ್ಯೆಯನ್ನು ಪಡೆಯಲು ಯಾವುದೇ ಅಡಚಣೆಗಳು ಇರುವುದಿಲ್ಲ. ಪೋರ್ಟಲ್‌ನಲ್ಲಿನ ಕೌಶಲ್ಯ ತರಬೇತಿ ನೋಂದಣಿ ಸಂಬಂಧ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ಕೆ.ಜಿ.ಐ.ಡಿ ಕಚೇರಿ ಎದುರುಗಡೆ, ಜಿಲ್ಲಾಡಳಿತ ಭವನ ಕೊಪ್ಪಳ ರವರನ್ನು ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಕೊಪ್ಪಳ ಜಿಲ್ಲಾ ಕೌಶಲ್ಯ ಮಿಷನ್ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷಿ ಆಗ್ರೋ ಕೇಂದ್ರಗಳಿಗೆ ಸುನೀಲ ಕುಮಾರ ಯರಗೋಳ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಶಹಾಪುರ

ತಾಲೂಕಿನ ಎಲ್ಲಾ ಕೃಷಿ ಆಗ್ರೋ ಕೇಂದ್ರಗಳಿಗೆ ಕೃಷಿ ತಾಲೂಕು ಅಧಿಕಾರಿ ಸುನೀಲ ಕುಮಾರ ಯರಗೋಳ ಭೇಟಿ ಮಾಡಿದರು. ತಾಲೂಕಿನ ಎಲ್ಲಾ ಕೃಷಿ ಮಾರಾಟ ಮಳಿಗೆ ಭೇಟಿ ನೀಡಿ ಎಫ್ ಐ ಡಿ ಮತ್ತು ಇನ್ನಿತರ ದಾಖಲೆಗಳ ಪರಿಶೀಲಿಸಿ ರೈತರಿಗೆ ಯಾವುದೇ ತರ ಸಮಸ್ಯೆ ಆಗದಂತೆ ಕೃಷಿ ಅಧಿಕಾರಿ ರೈತ ಸಂಘದ ಪದಾಧಿಕಾರಿಗಳಿಗೆ ಮತ್ತು ರೈತರಿಗೆ ಭರವಸೆ ನೀಡಿದರು ಇದೇ ತರ ಮುಂದಿನ ದಿನಗಳಲ್ಲಿ ಯಾವುದೇ ಅಕ್ರಮ ನಡೆಯದಂತೆ ಕಟ್ಟುನಿಟಿನ ಕ್ರಮ ತೆಗೆದುಕೊಳ್ಳುತ್ತೇನೆ ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆ ಉತ್ತರ ಕರ್ನಾಟಕ ಕಾರ್ಯಾಧ್ಯಕ್ಷ ಚಂದನ ಗೌಡ ಮಾಲಿ ಪಾಟೀಲ್, ಹಬ್ಬಳ್ಳಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜುನಾಥ್ ರೆಡ್ಡಿ ಚೆನ್ನೂರ್ ಇದ್ದರು.



# ವಿಶ್ವ ಬಾಲಕಾರ್ಮಿಕರ ಪದ್ಧತಿ ವಿರೋಧಿ ದಿನ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.11-ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಮಕ್ಕಳ ಸಹಾಯವಾಣಿ-1098/112, ಜಿಲ್ಲಾ ಸ್ವಯಂ ಸೇವಾ ಸಂಸ್ಥೆಗಳ ಒಕ್ಕೂಟ ಇವುಗಳ ಸಂಯುಕ್ತಾಶ್ರಯದಲ್ಲಿ "ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ" ಕಾರ್ಯಕ್ರಮವನ್ನು ಜೂನ್ 12 ರಂದು ಶುಕ್ರವಾರ ಬೆಳಿಗ್ಗೆ 10.30 ಗಂಟೆಗೆ ಕಲಬುರಗಿ ನಗರದ ಎಸ್.ಬಿ. ದೇವಸ್ಥಾನ ರಸ್ತೆಯಲ್ಲಿರುವ ಸೇಂಟ್ ಮೇರಿ ಪದವಿ ಪೂರ್ವ ವಿದ್ಯಾಲಯದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಕಲಬುರಗಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರಾದ ಇಕ್ರಮ ಶರೀಫ್ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು. ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಎಸ್. ಸಂಕನೂರ್, ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ವಿಶ್ವರಾಧ್ಯ ಇಜೇರಿ, ದೈವಾನುಗ್ರಹ ಮಾತೆಯ ಪ್ರಧಾನಾಲಯದ ಮುಖ್ಯ ಗುರುಗಳು ಹಾಗೂ ಸೇಂಟ್ ಮೇರಿ ಪದವಿ ಪೂರ್ವ ಕಾಲೇಜಿನ ಪ್ರಂಶುಪಾಲರಾದ ಫಾದರ್ ಜೋಸೆಫ್ ಪ್ರವೀಣ ಅವರುಉಪಸ್ಥಿತರಿರುವರು. ಕಲಬುರಗಿ ಪ್ರಾದೇಶಿಕ ಉಪ ಕಾರ್ಮಿಕ ಆಯುಕ್ತ ಡಾ. ವೆಂಕಟೇಶ ಎ. ಶಿಂಧಿಹಟ್ಟಿ, ಕಲಬುರಗಿ ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತ ಮಹಮ್ಮದ್ ಬಷೀರ್ ಅನ್ಸಾರಿ, ಜಿಲ್ಲಾ ಕಾರ್ಮಿಕ ಅಧಿಕಾರಿ ಶರಣಪ್ಪ ಆರ್. ಹಳಿಮನಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕಿ ಶಂಕ್ರೇಮ್ಮಾ ಢವಳಗಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುಳಾ ವಿ. ಪಾಟೀಲ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘದ ಕಾರ್ಯಕಾರಿ ಸಮಿತಿಯ ಸದಸ್ಯ ಶಿವಕುಮಾರ ರೇಷ್ಮೆ, ಜಿಲ್ಲಾ ಸ್ವಯಂ ಸೇವಾ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷ ಮಸ್ತಾನ್ ಬಿರಾದಾರ್ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕಲಬುರಗಿ ಮಾರ್ಗದರ್ಶಿ ಸಂಸ್ಥೆಯ ನಿರ್ದೇಶಕರಾದ ಆನಂದರಾಜ್ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಳ್ಳುವರು.

# ದೈಹಿಕ ಶಿಕ್ಷಣ ಹುದ್ದೆಗಳಿಗೆ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಲು ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜೂ11:2026-27ನೇ ಶೈಕ್ಷಣಿಕ ಸಾಲಿನ ಬೀದರ ಜಿಲ್ಲೆಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾಧ ಮಾದರಿ ಶಾಲೆಗಳಲ್ಲಿನ ಖಾಲಿ ಇರುವ ದೈಹಿಕ ಶಿಕ್ಷಣ ಹುದ್ದೆಗಳಿಗೆ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಅವರು ತಿಳಿಸಿದ್ದಾರೆ. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ ಮಾದರಿ ಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳಿಗೆ ಶೈಕ್ಷಣಿಕ ಸಾಲಿನ ಒಂದು ವರ್ಷಕ್ಕೆ ತಾತ್ಕಾಲಿಕವಾಗಿ ಅನ್ವಯಿಸುವಂತೆ ಪದವಿ ಮತ್ತು ಬಿ.ಪಿ ಇಡಿ ವಿಷಯದಲ್ಲಿ ಉತ್ತೀರ್ಣ ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ಈ ಕೆಳಕಂಡ ಪಟ್ಟಿಯಂತೆ ಮೆರಿಟ್ ಹಾಗೂ ಸಂದರ್ಶನದ ಮೂಲಕ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಿದೆ. ಬೀದರ ತಾಲ್ಲೂಕು ಒಟ್ಟು ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ 8 ಖಾಲಿ ಇದ್ದು, ಬಸವಕಲ್ಯಾಣ ತಾಲ್ಲೂಕು ಒಟ್ಟು ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ 2 ಖಾಲಿ ಇದ್ದು, ಹುಮನಾಬಾದ ತಾಲ್ಲೂಕು ಒಟ್ಟು ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ 2 ಖಾಲಿ ಇದ್ದು, ಈ ಹುದ್ದೆಗಳು ತಾತ್ಕಾಲಿಕವಾಗಿದ್ದು, ಒಂದು ವರ್ಷದ ಅವಧಿಗೆ ಮಾತ್ರ ಅಥವಾ ಈ ಅವಧಿಯಲ್ಲಿ ಖಾಯಂ ಶಿಕ್ಷಕರು ನೇಮಕವಾಗುವವರೆಗೆ(ಇದರಲ್ಲಿ ಯಾವುದು ಮೊದಲೋ ಅದನ್ನು ಪರಿಗಣಿಸಲಾಗುವುದು), ಆಸಕ್ತರು ಅರ್ಜಿಯನ್ನು ಜಿಲ್ಲಾ ಕಚೇರಿಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆದಿಂದ ಪಡೆದು ಎಲ್ಲಾ ದೃಢೀಕೃತ ದಾಖಲೆಗಳೊಂದಿಗೆ 2026ರ ಜೂನ್ 22ರ ಒಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಛೇರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ದೂ.ಸಂ.9845652533ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೀವನದಲ್ಲಿ ಯಶಸ್ವಿಯಾಗಲು ವಿದ್ಯಾರ್ಥಿಗಳು ತಮ್ಮಲ್ಲಿರುವ ಉದ್ಯಮಶೀಲತಾ ಕೌಶಲ ಜಾಗೃತಗೊಳಿಸಬೇಕು:ಶಿಕರ್ ಮುಫಾ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ವಿಶ್ವವಿದ್ಯಾಲಯಗಳು ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಿಂದ ಹೊರಬರುತ್ತಿರುವ ಯುವ ಪ್ರತಿಭೆಗಳು ತಮ್ಮೊಳಗೆ ಅಡಗಿರುವ ಉದ್ಯಮಶೀಲತಾ ಕೌಶಲ್ಯಗಳನ್ನು ಜಾಗೃತಗೊಳಿಸಿಕೊಂಡು ಜೀವನದಲ್ಲಿ ಯಶಸ್ಸು ಸಾಧಿಸಬೇಕು ಎಂದು ತಮ್ಮ ಮೊದಲ ನೇಮಕಾತಿಯಲ್ಲೇ ಕಲಬುರಗಿ ಸಹಾಯಕ ಆಯುಕ್ತರಾಗಿ ಕಾರ್ಯನಿರ್ವಹಿಸುತ್ತಿರುವ ಯುವ ಐಎಎಸ್ ಅಧಿಕಾರಿ ಶಿಕರ್ ಮುಫಾ ಹೇಳಿದರು. ಯುವ ವಿದ್ಯಾರ್ಥಿಗಳು ಸಮಾಜದ ಉತ್ಪಾದಕ ಪಾಲುದಾರರಾಗುವುದರ ಜೊತೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನಿಗದಿಪಡಿಸಿರುವ ಅಭಿವೃದ್ಧಿ ಗುರಿಗಳನ್ನು ಸಾಧಿಸುವಲ್ಲಿ ಭಾಗಿಯಾಗಬೇಕು ಎಂದು ತಿಳಿಸಿದರು. ಗುರುವಾರ ಶರಣಬಸವ ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿರುವ ದೊಡ್ಡಪ್ಪ ಅಪ್ಪಾ ಸಭಾ ಮಂಟಪದಲ್ಲಿ ಇಸಿಇ ವಿಭಾಗದ ತರಬೇತಿ ಮತ್ತು ಉದ್ಯೋಗ ನೇಮಕಾತಿ ಘಟಕವು ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ ಸಹಯೋಗದಲ್ಲಿ ಆಯೋಜಿಸಿದ್ದ ಪ್ಲೇಸ್‌ಮೆಂಟ್ ಡ್ರೈವ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ತಮ್ಮ ವೈಯಕ್ತಿಕ ಅನುಭವವನ್ನು ಹಂಚಿಕೊಂಡರು.

ಇಂಜಿನಿಯರಿಂಗ್ ಶಿಕ್ಷಣ ಪೂರ್ಣಗೊಳಿಸಿದ ನಂತರ ಇಂಟರ್ನ್‌ಶಿಪ್ ಅವಧಿಯಲ್ಲಿ ಅಪಾರ ಜ್ಞಾನವನ್ನು ಸಂಪಾದಿಸಿದ್ದೇನೆ. ಆ ಅನುಭವವೇ ನನ್ನನ್ನು ಯಾವುದೇ ಕಂಪನಿಯಲ್ಲಿ ಉದ್ಯೋಗಿಯಾಗುವುದಕ್ಕಿಂತ ನಾಗರಿಕ ಸೇವೆಗಳ ಪರೀಕ್ಷೆಗೆ ಸಿದ್ಧಗೊಳ್ಳುವಂತೆ ಪ್ರೇರೇಪಿಸಿತು ಎಂದು ಹೇಳಿದರು.

ತಮ್ಮ ಕೆಲವು ಸ್ನೇಹಿತರು ಯಶಸ್ವಿ ಉದ್ಯಮಿಗಳಾಗಿ ಬೆಳೆದು, ಸಾವಿರಾರು ಕೌಶಲ್ಯಯುತ ಯುವಕರಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸಿದ್ದಾರೆ ಎಂದು ತಿಳಿಸಿದ ಅವರು, ವಿದ್ಯಾರ್ಥಿಗಳು ತಮ್ಮೊಳಗಿನ ಉದ್ಯಮಿಯಾಗುವ ಆಸೆಯನ್ನು ಬೆಳೆಸಿಕೊಂಡು ದೇಶದ ಅಭಿವೃದ್ಧಿ ಹಾಗೂ ಆರ್ಥಿಕ ಗುರಿಗಳನ್ನು ಸಾಧಿಸುವಲ್ಲಿ ಪಾಲುದಾರರಾಗಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕಲ್ಯಾಣ ಕರ್ನಾಟಕ ಪ್ರದೇಶವನ್ನು ರಾಜ್ಯದ ಇತರ ಭಾಗಗಳಿಗೆ ಸಮನಾಗಿ ಅಭಿವೃದ್ಧಿಪಡಿಸುವ ಅಗತ್ಯವಿದ್ದು, ಈ ಭಾಗದ ವಿದ್ಯಾವಂತ ಯುವಕರಿಗೆ ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸಬೇಕಾಗಿದೆ. ಈ ಉದ್ದೇಶಕ್ಕಾಗಿ ಸರಕಾರ ಹಲವಾರು ಕ್ರಮಗಳನ್ನು ಕೈಗೊಂಡಿದೆ ಎಂದು ಶಿಕರ್ ಮುಫಾ ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಕಲಬುರಗಿ ಜಿಲ್ಲೆಯ ಹೀರೋ ಮೋಟಾರ್ಸ್ ಸಂಸ್ಥೆಯ ಪ್ರಧಾನ ವಿತರಕ ಕೃಷ್ಣಾಜಿ ಕುಲಕರ್ಣಿ, ತಮ್ಮ ಯಶೋಗಾಥೆಯನ್ನು ವಿವರಿಸಿದರು. ಇಂಜಿನಿಯರಿಂಗ್ ಪದವಿ ಹಾಗೂ ನಿರ್ವಹಣಾ ಸ್ನಾತಕೋತ್ತರ ಪದವಿ ಪಡೆದ ನಂತರ ಉತ್ತಮ ಉದ್ಯೋಗ ಪಡೆಯಲು ಮಾಡಿದ ಪ್ರಯತ್ನಗಳು ವಿಫಲವಾದ ಹಿನ್ನೆಲೆಯಲ್ಲಿ, ಕೇವಲ 10,000 ಆರಂಭಿಕ ಬಂಡವಾಳದೊಂದಿಗೆ ಆಗಿನ 'ಅಟ್ಲಾಸ್ ಮೊಪೆಡ್ಸ್' ಫ್ರಾಂಚೈಸಿ ಪಡೆದು ಸ್ವಂತ ಉದ್ಯಮ ಆರಂಭಿಸಿದೆ. ಅದೇ ನನ್ನ ಉದ್ಯಮಶೀಲತಾ ಪಯಣದ ಆರಂಭವಾಗಿದ್ದು, ಇಂದು ನನ್ನ ಸಂಸ್ಥೆಯಲ್ಲಿ ಸುಮಾರು 500ಕ್ಕೂ ಹೆಚ್ಚು ಜನರಿಗೆ ಉದ್ಯೋಗ ನೀಡಿದ್ದೇನೆ ಎಂದು ಹೇಳಿದರು.

ಯುವಕರಲ್ಲಿ ಉದ್ಯಮಶೀಲತೆಯ ಮನೋಭಾವದ ಕೊರತೆ ಇರುವುದರ ಬಗ್ಗೆ ವಿಷಾದ ವ್ಯಕ್ತಪಡಿಸಿದ ಅವರು, ಯುವಕರು ತಮ್ಮ ಉದ್ಯಮಶೀಲ ಕೌಶಲ್ಯಗಳನ್ನು ಪರೀಕ್ಷಿಸುವುದರ ಜೊತೆಗೆ ಕೆಲಸದ ಸ್ಥಳದಲ್ಲಿ ಜವಾಬ್ದಾರಿಗಳನ್ನು ಹೊತ್ತುಕೊಳ್ಳುವ ಮನೋಭಾವವನ್ನೂ ಬೆಳೆಸಿಕೊಳ್ಳಬೇಕು. ತಮ್ಮ ಸಂಸ್ಥೆಯಲ್ಲಿ ಹಲವಾರು ಕಾರ್ಯನಿರ್ವಾಹಕ ಹುದ್ದೆಗಳು ಖಾಲಿ ಇದ್ದು, ಜವಾಬ್ದಾರಿ ವಹಿಸಿಕೊಳ್ಳಲು ಸಿದ್ಧರಾಗಿರುವ ಯುವಕರಿಗೆ ಅವಕಾಶಗಳು ಮುಕ್ತವಾಗಿವೆ ಎಂದು ತಿಳಿಸಿದರು.

ರೆನಾಲ್ಟ್ ಹಾಗೂ ಐಷರ್ ಹೆವಿ ವೆಹಿಕಲ್ಸ್ ಸಂಸ್ಥೆಗಳ ಪ್ರಧಾನ ವಿತರಕ ದೊಡ್ಡಪ್ಪ ನಿಷ್ಠಿ ಮಾತನಾಡಿ, ಕೃಷ್ಣಾಜಿ ಕುಲಕರ್ಣಿ ಹಾಗೂ ಶಿಕರ್ ಮುಫಾ ಅವರ ಅಭಿಪ್ರಾಯಗಳನ್ನು ಬೆಂಬಲಿಸಿದರು. ಕಠಿಣ ಪರಿಶ್ರಮ ಮತ್ತು ಉದ್ಯಮಶೀಲತಾ ಕೌಶಲ್ಯಗಳು ಮಾತ್ರ ಯುವಕರ ವೃತ್ತಿಜೀವನಕ್ಕೆ ಬಲವಾದ ಅಡಿಪಾಯವನ್ನು ಒದಗಿಸಬಲ್ಲವು ಎಂದು ಅವರು ಹೇಳಿದರು.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿಗಳಾದ ಶ್ರೀ ಬಸವರಾಜ ದೇಶಮುಖ ಮಾತನಾಡಿ, ಶರಣಬಸವ ವಿಶ್ವವಿದ್ಯಾಲಯ ಆಯೋಜಿಸಿರುವ ಈ ಪ್ಲೇಸ್‌ಮೆಂಟ್ ಡ್ರೈವ್ ವಿದ್ಯಾರ್ಥಿಗಳಿಗೆ ಹೊಸ ಉದ್ಯೋಗಾವಕಾಶಗಳ ದಾರಿಯನ್ನು ತೆರೆಯಲಿದೆ. ಯಶಸ್ವಿ ಉದ್ಯಮಿಗಳಾಗಲು ವಿದ್ಯಾರ್ಥಿಗಳು ಮೊದಲು ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ ವಹಿಸಿದ್ದರು. ಕುಲಸಚಿವರಾದ ಡಾ. ಲಕ್ಷ್ಮಿ ಪಾಟೀಲ್ ಮಾಕಾ, ಡೀನ್ ಡಾ. ಶಿವಕುಮಾರ ಜವಳಿಗಿ, ಕರ್ನಾಟಕ ಡಿಜಿಟಲ್ ಎಕಾನಮಿ ಮಿಷನ್ (ಐಟಿ-ಬಿಟಿ ಇಲಾಖೆ) ಕಲಬುರಗಿಯ ಕ್ಲಸ್ಟರ್ ಮುಖ್ಯಸ್ಥ ಸುಜಯ್ ಮುದ್ಗಲ್, ವಿವಿಯ ನಿರ್ದೇಶಕ ಪ್ರೊ. ವಿ. ಡಿ. ಮೈತ್ರಿ ಹಾಗೂ ಸುಭಾ ಮಹತಾ ಸೇರಿದಂತೆ ಇತರ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಪ್ಲೇಸ್‌ಮೆಂಟ್ ಡ್ರೈವ್‌ನಲ್ಲಿ ಸಾಫ್ಟ್‌ವೇರ್, ಹಾರ್ಡ್‌ವೇರ್, ಆಟೋಮೊಬೈಲ್ ಹಾಗೂ ಇತರೆ ಕ್ಷೇತ್ರಗಳ ಅನೇಕ ಕಂಪನಿಗಳು ಮತ್ತು ಪ್ರತಿನಿಧಿಗಳು ಭಾಗವಹಿಸಿದ್ದರು.

# ವಿದ್ಯಾರ್ಥಿಗಳು, ರೋಗಿಗಳು, ಕೂಲಿ ಕಾರ್ಮಿಕರಿಗೆ ಮಲ-ಮೂತ್ರ ವಿಸರ್ಜನೆಗೆ ಪರದಾಟ ಮೂತ್ರಾಲಯಕ್ಕಾಗಿ 10-15 ನಿಮಿಷಗಳ ಕಾಲ ಸರದಿಯಲ್ಲಿ ಕಾಯುವ ಸ್ಥಿತಿ

ಸುರೇಶ ಕೆ. ವಿ

• ಮಲ್ಲಮ್ಮ ನುಡಿ ವಾರ್ತೆಮುದಗಲ್




ಪ್ರತಿಯೊಂದು ಹಳ್ಳಿ, ಪಟ್ಟಣದಲ್ಲಿ ಶೌಚಾಲಯ ನಿರ್ಮಿಸಲು ಸರಕಾರ ಲಕ್ಷಾಂತರ ರೂಪಾಯಿ ಹಣ ಖರ್ಚು ಮಾಡುತ್ತಿದೆ. ಆದರೆ ಸುಮಾರು 40 ಸಾವಿರ ಜನಸಂಖ್ಯೆ ಹೊಂದಿರುವ ಇಡೀ ಮುದಗಲ್ಲ ಪಟ್ಟಣದಲ್ಲಿ ಎರಡೇ ಸಾರ್ವಜನಿಕ ಶೌಚಾಲಯಗಳಿದ್ದು, ಪರದಾಡುವಂತಾಗಿದೆ. ಒಂದು ಬಸ್ ನಿಲ್ದಾಣ, ಮತ್ತೊಂದು ನಾಡ ಕಾರ್ಯಾಲಯದ ಮುಂಭಾಗ ಹೀಗೆ ಎರಡು ಸಾರ್ವಜನಿಕ ಶೌಚಾಲಯಗಳು ಕಾರ್ಯ ನಿರ್ವಹಿಸುತ್ತಿವೆ. ನಾಡ ಕಾರ್ಯಾಲಯ ಮುಂಭಾಗ ನಿರ್ಮಿಸಿದ ಸಾರ್ವಜನಿಕ ಶೌಚಾಲಯವೇ ಇಡೀ ಪಟ್ಟಣ ಮತ್ತು ಪಟ್ಟಣಕ್ಕೆ ನಿತ್ಯ ಬರುವ ಗ್ರಾಮೀಣ ಭಾಗದ ಜನರಿಗೆ ಆಸರೆಯಾಗಿದೆ. ವಿದ್ಯಾರ್ಥಿಗಳು, ರೋಗಿಗಳು, ಕೂಲಿ ಕಾರ್ಮಿಕರಿಗೆ ಮಲ-ಮೂತ್ರ ವಿಸರ್ಜನೆಗೆ ಎರಡೇ ಶೌಚಾಲಯಗಳಿವೆ. ಮುದಗಲ್ಲ ಪಟ್ಟಣದಲ್ಲಿ 23 ವಾರ್ಡ್ ಗಳಾಗಿ ವಿಂಗಡಣೆ ಮಾಡಲಾಗಿದ್ದು ಸಾರ್ವಜನಿಕ ಶೌಚಾಲಯ ಸೇರಿ 9 ಸಮುದಾಯ ಶೌಚಾಲಯಗಳ ಪೈಕಿ ವಾರ್ಡ್ 1 ಹಳೆಪೇಟೆ, ವಾರ್ಡ್ ನಂ. 2 ಹಳೆಪೇಟೆ ಹಾಗೂ ಕಿಲ್ಲಾ ಮತ್ತು ವೆಂಕಟರಾಯನಪೇಟೆ ಸೇರಿದಂತೆ 4 ಮಾತ್ರ ಚಾಲನೆಯಲ್ಲಿವೆ. ಇನ್ನುಳಿದ ಶೌಚಾಲಯಗಳು ನಿರ್ವಹಣೆ ಕೊರತೆಯಿಂದ ಸ್ಥಗಿತಗೊಂಡಿವೆ. ಇನ್ನು ಎರಡು ಶೌಚಾಲಯಗಳ ಕಾಮಗಾರಿ ಪ್ರಗತಿಯಲ್ಲಿದೆ. ಪಟ್ಟಣದ ಹೃದಯ ಭಾಗದಲ್ಲಿ ಅನೇಕ ವ್ಯಾಪಾರಸ್ಥರು, ರೈತರು, ಆಸ್ಪತ್ರೆಗಳ ಹೊರ ರೋಗಿಗಳು, ಕೂಲಿ ಕಾರ್ಮಿಕರು, ಗ್ರಾಮೀಣ ಭಾಗದ ಜನರು ಬರುತ್ತಾರೆ. ಪಟ್ಟಣ ವ್ಯಾಪ್ತಿಯ ಪ್ರತಿ ಹಳ್ಳಿಯ ಸಾರ್ವಜನಿಕರು ನಾನಾ ಸಮಸ್ಯೆಗಳಿಗಾಗಿ ಮುದಗಲ್ಲ ಹೋಬಳಿಗೆ ಬರುತ್ತಾರೆ. ಸರಕಾರಿ ಆಸ್ಪತ್ರೆ, ಪೊಲೀಸ್ ಠಾಣೆ, ಖಾಸಗಿ ಆಸ್ಪತ್ರೆ, ರಾಷ್ಟ್ರೀಕೃತ ಬ್ಯಾಂಕ್, ಜೋಶಿ ಆಸ್ಪತ್ರೆ, ಬಸ್ ನಿಲ್ದಾಣ, ಕರ್ನಾಟಕ ಗ್ರಾಮೀಣ ಬ್ಯಾಂಕ್, ಪುರಸಭೆ, ಶಾಲಾ-ಕಾಲೇಜುಗಳಿಗೆ ಹೋಗುವ ಬರುವ ಇರುವುದರಿಂದ ನಿತ್ಯ ಇಲ್ಲಿಂದಲೇ ಸಾಕಷ್ಟು ಜನರು ಈ ರಸ್ತೆ ಮೂಲಕ ಓಡಾಡುತ್ತಾರೆ. ಸದಾ ಜನಜಂಗುಳಿಯಿಂದ ಕೂಡಿರುವ ಏಕೈಕ ಸಾರ್ವಜನಿಕ ಶೌಚಾಲಯವಿದೆ. ಮೂತ್ರಾಲಯಕ್ಕಾಗಿ 10-15 ನಿಮಿಷಗಳ ಕಾಲ ಸರದಿಯಲ್ಲಿ ಜನ ಕಾಯುವಂತಾಗಿದೆ.

ಸರಿಯಾದ ನಿರ್ವಹಣೆ ಇಲ್ಲದೇ ಜನರಿಗೆ ಸಮಸ್ಯೆ ಉಂಟಾಗಿದೆ. ಮೂತ್ರಾಲಯದ ಸೇಫ್ಟಿಕ್ ಟ್ಯಾಂಕ್ ಇಲ್ಲದೆ ರಾತ್ರಿ ವೇಳೆ ಪಕ್ಕದ ಚರಂಡಿಯಲ್ಲಿ ಮೂತ್ರ ಬಿಡುವುದರಿಂದ ಪುರಸಭೆಯಿಂದ ಹಿಡಿದು ಸರಕಾರಿ ಸಮುದಾಯ ಆರೋಗ್ಯ ಕೇಂದ್ರದವರೆಗಿನ ರಸ್ತೆಯುದ್ಧಕ್ಕೂ ದುರ್ನಾತ ಹಬ್ಬಿದೆ. ಇಲ್ಲಿ ಓಡಾಡುವ ಜನರು ಮೂಗು ಮುಚ್ಚಿಕೊಂಡೇ ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಹಲವು ವರ್ಷಗಳಿಂದ ಈ ದುರ್ವಾಸನೆಯಿಂದ ಜನರಿಗೆ ಸಾಕಷ್ಟು ತೊಂದರೆಗಳಾಗಿ ಪುರಸಭೆಗೆ ಹಿಡಿಶಾಪ ಹಾಕುತ್ತಿದ್ದರೂ ಸಮಸ್ಯೆ ಮಾತ್ರ ಬಗೆಹರಿಯುತ್ತಿಲ್ಲ.

ಮುದಗಲ್ ಪಟ್ಟಣಕ್ಕೆ ಎರಡೇ ಸಾರ್ವಜನಿಕ ಶೌಚಾಲಯಗಳು ಇದ್ದು, ಸಂಬಂಧಿಸಿದ ಅಧಿಕಾರಿಗಳು ಕೂಡಲೇ ಸಮಸ್ಯೆ ಬಗೆಹರಿಸಬೇಕು. ಇಲ್ಲವಾದಲ್ಲಿ ಪುರಸಭೆಗೆ ಬೀಗ ಜಡಿದು ಪ್ರತಿಭಟಿಸುತ್ತೇವೆ.
ನಯಿಮ್, ಕರವೇ ಅಧ್ಯಕ್ಷ.

ಸಾರ್ವಜನಿಕ ಶೌಚಾಲಯ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಸಾರ್ವಜನಿಕ ಶೌಚಾಲಯ ಮೂತ್ರ ಚರಂಡಿಗೆ ಬಿಡುತ್ತಿರುವ ಬಗ್ಗೆ ಪರಿಶೀಲಿಸುತ್ತೇನೆ.
-ಪ್ರವೀಣಕುಮಾರ ಬೋಗಾರ, ಪುರಸಭೆ ಮುಖ್ಯಾಧಿಕಾರಿ, ಮುದಗಲ್

# ಕಾಳಿಕಾದೇವಿ ದೇವಸ್ಥಾನದಲ್ಲಿ ಸತ್ಸಂಗ ಭಜನಾ ಶಿಬಿರ

• ಮಲ್ಲಮ್ಮ ನುಡಿ ವಾರ್ತೆಮುದಗಲ್



ಐತಿಹಾಸಿಕ ಶ್ರೀ ಕಾಳಿಕಾದೇವಿ ದೇವಸ್ಥಾನದಲ್ಲಿ ರಾಜ್ಯ ಸತ್ಸಂಗಿ ಹಾಗೂ ವಿವಿಧ ಪುರಸ್ಕಾರ ಪಡೆದ ಹನುಮಸಾಗರ ಶರಣಪ್ಪ ಕಮ್ಮಾರ್ ಅವರ ನೇತೃತ್ವದಲ್ಲಿ ಅಧಿಕ ಮಾಸ ಪ್ರಯುಕ್ತ ಸತ್ಸಂಗ ಭಜನಾ ಶಿಬಿರ ಜರುಗಿತು. ಬೆಳಿಗ್ಗೆ ಬ್ರಾಹ್ಮಿ ಮುಹೂರ್ತದಲ್ಲಿ ಶ್ರೀ ಕಾಳಿಕಾದೇವಿಗೆ ಕುಂಕುಮಾರ್ಚನೆ, ಮಹಾಮಂಗಳಾರತಿ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ವಿಧಿ ವಿಧಾನಗಳು ಜರುಗಿದವು. ಅಧಿಕಮಾಸದ ಪ್ರಯುಕ್ತ ಒಂದು ವಾರದ ಕಾಲ 33 ದೇವರ ಗಳ ಭಕ್ತಿ ಗೀತೆಗಳು ಹಾಗೂ ದೇವರ ನಾಮಸ್ಮರಣೆಯ ಭಜನಾ ಕಾರ್ಯಕ್ರಮ, ದೇವರ ಕೀರ್ತನೆ ಸೇರಿದಂತೆ ವಿವಿಧ ಧಾರ್ಮಿಕ ಆಚರಣೆ ಪದ್ಧತಿಗಳನ್ನು ಶರಣಪ್ಪ ಕುಮ್ಮಾರ ಅವರು ಸಮುದಾಯದ ಮಹಿಳೆಯರಿಗೆ ಮಾಹಿತಿ ತಿಳಿಸಿದರು. ಕಾಳಿಕಾದೇವಿ ದೇವಸ್ಥಾನ ಅರ್ಚಕರು, ವಿಶ್ವಕರ್ಮ ಸಮುದಾಯದ ಮಹಿಳೆಯರು ಸೇರಿದಂತೆ ಇತರರಿದ್ದರು.

# ಅರಣ್ಯ ಇಲಾಖೆ ಅಧಿಕಾರಿಗಳಿಂದ ಹುಲಿ ಸೆರೆ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ತಾಲ್ಲೂಕಿನ ಹನಗೋಡು ಹೋಬಳಿ ತಟ್ಟೆ-ಕೆರೆ ಸುತ್ತಮುತ್ತ ಕಳೆದ ಕೆಲ ದಿನಗಳಿಂದ ಹುಲಿ ಓಡಾಡುತ್ತಿರುವ ಬಗ್ಗೆ ಮಾಹಿತಿ ಹರಿದಾಡುತ್ತಿತ್ತು. ಅಂತಿಮವಾಗಿ ಮಾಜಿ ಶಾಸಕ ಎಚ್.ಪಿ. ಮಂಜುನಾಥ್ ಅವರ ತೋಟದಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಹುಲಿಯನ್ನು ಪಂಜರದ ಮೂಲಕ ಸೆರೆಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ. ತಟ್ಟೆಕೆರೆ ಬಳಿಯ ಮಾಜಿಶಾಸಕ ಎಚ್.ಪಿ. ಮಂಜುನಾಥ್ ಅವರ ತೋಟದ ಅಂಚಿನಲ್ಲಿ ಹುಲಿಯ ಹೆಜ್ಜೆ ಗುರುತು, ಜಾನುವಾರುಗಳ ಮೇಲೆ ದಾಳಿಯ ಪ್ರಕರಣಗಳು ವರದಿಯಾಗಿದ್ದವು. ರೈತರು, ಕೂಲಿ ಕಾರ್ಮಿಕರು ಜಮೀನಿಗೆ ಹೋಗಲು ಭಯಪಡುವಂತಹ ವಾತಾವರಣ ನಿರ್ಮಾಣವಾಗಿತ್ತು. ಸ್ಥಳೀಯರ ದೂರು ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ದೌಡಾಯಿಸಿ, ಮಾಜಿ ಶಾಸಕ ಎಚ್.ಪಿ. ಮಂಜುನಾಥ್ ಅವರ ತೋಟದಲ್ಲಿ ಬೋನ್ /ಬೋನ್ ಹಾಕಿ ಕಣ್ಗಾವಲು ಇಡಲಾಗಿತ್ತು. ಸೋಮವಾರ ತಡರಾತ್ರಿ ಹುಲಿ ಪಂಜರಕ್ಕೆ ಬಿದ್ದು, ಇಲಾಖೆ ಸಿಬ್ಬಂದಿ ಸುರಕ್ಷಿತವಾಗಿ ಸೆರೆಹಿಡಿದಿದ್ದಾರೆ. ಜನರಿಗೆ ಸಮಾಧಾನ: ಹುಲಿ ಸೆರೆಹಿಡಿದ ಸುದ್ದಿ ತಿಳಿದ ತಕ್ಷಣ ತಟ್ಟೆಕೆರೆ, ಸುತ್ತಮುತ್ತಲಿನ ಗ್ರಾಮಗಳ ರೈತರು, ಕೂಲಿ ಕಾರ್ಮಿಕರು ಸಮಾಧಾನ ವ್ಯಕ್ತಪಡಿಸಿದ್ದಾರೆ. "ಕಳೆದ 8-10 ದಿನಗಳಿಂದ ಜಮೀನಿಗೆ ಹೋಗಲು ಭಯವಾಗಿತ್ತು. ಈಗ ಅರಣ್ಯ ಇಲಾಖೆ ಹುಲಿಯನ್ನು ಹಿಡಿದಿದ್ದಕ್ಕೆ ಧನ್ಯವಾದ" ಎಂದು ಸ್ಥಳೀಯ ರೈತರೊಬ್ಬರು ತಿಳಿಸಿದರು. ಅರಣ್ಯ ಇಲಾಖೆ ಕ್ರಮ: ಸೆರೆಹಿಡಿದ ಹುಲಿಯನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿ, ಸೂಕ್ತ ಅರಣ್ಯ ಪ್ರದೇಶಕ್ಕೆ ಬಿಡುವ ಪ್ರಕ್ರಿಯೆ ಕೈಗೊಳ್ಳಲಾಗುವುದು ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಸಾರ್ವಜನಿಕರು ಆತಂಕಪಡದೆ ಅರಣ್ಯ ಪ್ರದೇಶದತ್ತ ಒಬ್ಬರೇ ಹೋಗಬಾರದು, ಜಾನುವಾರುಗಳನ್ನು ಸುರಕ್ಷಿತವಾಗಿ ಕಟ್ಟಿಹಾಕಬೇಕು ಎಂದು ಮನವಿ ಮಾಡಿದ್ದಾರೆ

# ದತ್ತಾತ್ರೇಯ ಪಾಟೀಲ ರೇವೂರ ವಿರುದ್ಧದ ಸುಳ್ಳು ಎಫ್ಐಆರ್ ಖಂಡಿಸಿ ಬಿಜೆಪಿ ಬೃಹತ್ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಕಲಬುರಗಿ ದಕ್ಷಿಣ ಮಂಡಲ ಬಿಜೆಪಿ ಹಾಗೂ ವಿವಿಧ ವಾರ್ಡ್‌ಗಳ ನಾಗರಿಕರ ವತಿಯಿಂದ ರಾಜ್ಯ ಸರ್ಕಾರ, ಶಾಸಕ ಅಲ್ಲಮಪ್ರಭು ಪಾಟೀಲ ಹಾಗೂ ಕ್ಷೇತ್ರದ ನಿಕಟಪೂರ್ವ ಶಾಸಕ ದತ್ತಾತ್ರೇಯ ಸಿ. ಪಾಟೀಲ ರೇವೂರ ಅವರ ವಿರುದ್ಧ ದಾಖಲಾಗಿರುವ ಎಫ್ಐಆರ್‌ನ್ನು ಖಂಡಿಸಿ ರಾಮ ಮಂದಿರದ ಎದುರು ಸಾವಿರಾರು ಜನರ ಸಮ್ಮುಖದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು. ಪ್ರತಿಭಟನಾಕಾರರು ದತ್ತಾತ್ರೇಯ ಪಾಟೀಲ ರೇವೂರ ಅವರ ಮೇಲೆ ರಾಜಕೀಯ ದುರುದ್ದೇಶದಿಂದ ಸುಳ್ಳು ಎಫ್ಐಆರ್ ದಾಖಲಿಸಲಾಗಿದೆ ಎಂದು ಆರೋಪಿಸಿದರು. ಅಲ್ಲದೇ, ಅವರ ವಿರುದ್ಧ ವೈಯಕ್ತಿಕನಿಂದನೆ ಮಾಡಿದ ಕಿಡಿಗೇಡಿಗಳ ವಿರುದ್ಧ ಕೂಡಲೇ ಎಫ್ಐಆರ್ ದಾಖಲಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಮಾತನಾಡಿದ ಮುಖಂಡರು, ಪ್ರಜಾಪ್ರಭುತ್ವದಲ್ಲಿ ರಾಜಕೀಯ ಭಿನ್ನಾಭಿಪ್ರಾಯಗಳ ಹೆಸರಿನಲ್ಲಿ ವಿರೋಧ ಪಕ್ಷದ ನಾಯಕರನ್ನು ಗುರಿಯಾಗಿಸಿ ಸುಳ್ಳು ಪ್ರಕರಣಗಳನ್ನು ದಾಖಲಿಸುವುದು ಖಂಡನೀಯ. ಸರ್ಕಾರವು ದ್ವೇಷ ರಾಜಕಾರಣವನ್ನು ಬಿಟ್ಟು ನ್ಯಾಯಯುತ ಆಡಳಿತ ನಡೆಸಬೇಕು ಎಂದು ಆಗ್ರಹಿಸಿದರು.

# ಇಂದು ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 11 : ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಪೋಲಿಸ್ ಇಲಾಖೆ, ಮಹಾನಗರ ಪಾಲಿಕೆ, ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ ಘಟಕ, ಸ್ವಯಂ ಸೇವಾ ಸಂಸ್ಥೆಗಳು ಮತ್ತು ಜಿಲ್ಲಾ ಬಾಲಕಾರ್ಮಿಕ ಯೊಜನೆ ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ-2026ರ ಕಾರ್ಯಕ್ರಮವನ್ನು ಜೂನ್ 12ರ ಬೆಳಿಗ್ಗೆ 9ಗಂಟೆಗೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ. ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಸಿದ್ಧರಾಮಪ್ಪ ಕಲ್ಯಾಣರಾವ್ ಅವರು ಉದ್ಘಾಟನೆ ನೆರವೇರಿಸುವರು. ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಅಧ್ಯಕ್ಷರಾದ ಪೂವಿತಾ ಎಸ್. ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಪ್ರಭಾರ ಅಪರ ಜಿಲ್ಲಾಧಿಕಾರಿ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಸುದರ್ಶನ, ಜಿಲ್ಲಾ ಕಾರ್ಮಿಕ ಅಧಿಕಾರಿ ಆರತಿ, ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ. ಇದಕ್ಕೂ ಮುಂಚೆ ನಗರದ ತಹಶಿಲ್ದಾರರು ಕಾರ್ಯಾಲಯದಿಂದ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದವರೆಗೆ ಜಾಗೃತಿ ಜಾಥಾ ಕಾರ್ಯಕ್ರಮ ನಡೆಯಲಿದೆ ಎಂದು ಕಾರ್ಮಿಕ ಇಲಾಖೆಯ ಕಚೇರಿಯ ಪ್ರಕಟಣೆ ತಿಳಿಸಿದೆ.

# ಅಫಜಲಪುರ: ಕಸವನ್ನು ಕಡ್ಡಾಯವಾಗಿ ನಾಲ್ಕು ವಿಭಾಗಗಳಾಗಿ ವಿಂಗಡಿಸಿ ಕಸ ಸಂಗ್ರಹಣಾ ವಾಹನಗಳಿಗೆ ನೀಡಲು ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.11-ಭಾರತ ಸರ್ಕಾರ ಜಾರಿಗೊಳಿಸಿರುವ ಘನತ್ಯಾಜ್ಯ ನಿರ್ವಹಣಾ ನಿಯಮಗಳು-2026ರ ಅನ್ವಯ ಹಾಗೂ ನಗರ ವ್ಯಾಪ್ತಿಯಲ್ಲಿ ವೈಜ್ಞಾನಿಕವಾಗಿ ಘನತ್ಯಾಜ್ಯ ನಿರ್ವಹಣೆಯನ್ನು ಬಲಪಡಿಸುವ ಉದ್ದೇಶದಿಂದ ಅಫಜಲಪೂರ ಪುರಸಭೆ ವ್ಯಾಪ್ತಿಯಲ್ಲಿ ಮೂಲದಲ್ಲಿಯೇ ನಾಲ್ಕು ವಿಭಾಗಗಳಾಗಿ ಕಸದ ವಿಂಗಡಣೆಯನ್ನು ಈಗಾಗಲೇ (ದಿನಾಂಕ: 01-04-2026 ರಿಂದ) ತಕ್ಷಣದಿಂದ ಕಡ್ಡಾಯವಾಗಿ ಜಾರಿಗೊಳಿಸಲಾಗಿದೆ ಎಂದು ಅಫಜಲಪುರ ಪುರಸಭೆಯ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ಎಲ್ಲಾ ಮನೆಗಳು, ವಾಣಿಜ್ಯ ಮಳಿಗೆಗಳು, ಸಂಸ್ಥೆಗಳು, ಮಾರುಕಟ್ಟೆಗಳು, ಬೃಹತ್ ತ್ಯಾಜ್ಯ ಉತ್ಪಾದಕರು, ಕಚೇರಿಗಳು, ಹೋಟೆಲ್‌ಗಳು, ಅಂಗಡಿಗಳು, ಬೀದಿ ವ್ಯಾಪಾರಿಗಳು, ಅಪಾರ್ಟ್‌ಮೆಂಟ್‌ಗಳು ಹಾಗೂ ಇತರೆ ತ್ಯಾಜ್ಯ ಉತ್ಪಾದಕರು ಕೆಳಕಂಡ ನಾಲ್ಕು ವಿಭಾಗಗಳಲ್ಲಿ ಕಸವನ್ನು ಕಡ್ಡಾಯವಾಗಿ ವಿಂಗಡಿಸಿ ಅಫಜಲಪೂರ ಪುರಸಭೆಯ ಕಸ ಸಂಗ್ರಹಣಾ ವಾಹನಗಳಿಗೆ ನೀಡಬೇಕು. ಎಲ್ಲಾ ತ್ಯಾಜ್ಯ ಉತ್ಪಾದಕರು ತಮ್ಮ ತ್ಯಾಜ್ಯವನ್ನು ಕೆಳಕಂಡಂತೆ ನಾಲ್ಕು ವಿಭಿನ್ನ ವರ್ಗಗಳಾಗಿ ವಿಂಗಡಿಸಬೇಕು.

ಹಸಿ ತ್ಯಾಜ್ಯ (ಹಸಿರು ಬುಟ್ಟಿ): ಆಹಾರ ಅವಶೇಷಗಳು, ತರಕಾರಿ, ಸಿಪ್ಪೆಗಳು, ಹಣ್ಣಿನ ತುಣುಕುಗಳು, ಹೂವುಗಳು, ತೋಟಗಾರಿಕೆ/ಜೈವಿಕ ತ್ಯಾಜ್ಯ. ಒಣ ತ್ಯಾಜ್ಯ (ನೀಲಿ ಬುಟ್ಟಿ): ಪ್ಲಾಸ್ಟಿಕ್, ಕಾಗದ, ಲೋಹ, ಗಾಜು, ರಬ್ಬರ್, ಮರುಬಳಕೆಯ ಯೋಗ್ಯ ತ್ಯಾಜ್ಯ. ಸ್ಯಾನಿಟೇರಿ ತ್ಯಾಜ್ಯ (ಕೆಂಪು ಡಬ್ಬಿ): ಬಳಸಿದ ಡೈಪರ್‌ಗಳು, ಸ್ಯಾನಿಟರಿ ಪ್ಯಾಡ್‌ಗಳು, ಬ್ಯಾಂಡೇಜ್ ಹಾಗೂ ಇನ್ನಿತರೆ ಸ್ಯಾನಿಟರಿ ತ್ಯಾಜ್ಯ ವಿಶೇಷ ತ್ಯಾಜ್ಯ ಗೃಹ ಅಪಾಯಕಾರಿ (ಕಪ್ಪು ಡಬ್ಬಿ): ಬಣ್ಣದ ಡಬ್ಬಿಗಳು, ಬಿಟುಗಿಲು, ಪಾದರಸದ ಥರ್ಮಾಮೀಟರ್‌ಗಳು, ಅವಧಿ ಮುಗಿದ ಔಷಧಿಗಳು, ಇ-ತ್ಯಾಜ್ಯ ಮತ್ತು ಇತರೆ ಅಪಾಯಕಾರಿ ಗೃಹೋಪಯೋಗಿ ವಸ್ತುಗಳು.

ಬೃಹತ್ ತ್ಯಾಜ್ಯ ಉತ್ಪಾದಕರಿಗೆ (BWG) ಸ್ವಂತ ಜವಾಬ್ದಾರಿಗಳು: ಬೃಹತ್ ತ್ಯಾಜ್ಯ ಉತ್ಪಾದಕ ಎಂದರೆ 20,000 ಚದರ ಮೀಟರ್ ಅಥವಾ ಅದಕ್ಕಿಂತ ಹೆಚ್ಚಿನ ನೆಲದ ವಿಸ್ತೀರ್ಣ/ದಿನಕ್ಕೆ 40,000 ಲೀಟರ್ ನೀರಿನ ಬಳಕೆ ಅಥವಾ ದಿನಕ್ಕೆ 100 ಕೆಜಿ ತ್ಯಾಜ್ಯ ಉತ್ಪಾದನೆಯನ್ನು ಹೊಂದಿರುವ ಸರ್ಕಾರಿ ಇಲಾಖೆಗಳು, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ವಲಯದ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು, ವಾಣಿಜ್ಯ ಸಂಸ್ಥೆಗಳು, ವಸತಿ ಸಂಘಗಳು, ಹೋಟೆಲ್‌ಗಳು, ಆಸ್ಪತ್ರೆಗಳು, ಮಾರುಕಟ್ಟೆಗಳು ಮತ್ತು ಇತರೆ ಸಂಸ್ಥೆಗಳನ್ನು ಒಳಗೊಂಡಿದೆ.

ವಿಸ್ತೃತ ಬೃಹತ್ ಉತ್ಪಾದಕರ ಜವಾಬ್ದಾರಿ (EB-WGR): ಈ ಚೌಕಟ್ಟಿನಲ್ಲಿ ಬೃಹತ್ ತ್ಯಾಜ್ಯ ಉತ್ಪಾದಕರು ತಾವು ಉತ್ಪಾದಿಸುವ ತ್ಯಾಜ್ಯಕ್ಕೆ ತಾವೇ ಜವಾಬ್ದಾರರಾಗಿರುತ್ತಾರೆ. ಸಾಧ್ಯವಾದಲ್ಲೆಲ್ಲಾ ಹಸಿ ತ್ಯಾಜ್ಯವನ್ನು ಸ್ಥಳದಲ್ಲೇ ಸಂಸ್ಕರಿಸಬೇಕು. ಇಲ್ಲದಿದ್ದರೆ ಇ.ಬಿ.ಡಬ್ಲ್ಯೂ.ಜಿ.ಆರ್. (EBWGR) ಪ್ರಮಾಣಪತ್ರವನ್ನು ಪಡೆಯಕೊಳ್ಳಬೇಕು. ಪರಿಸರ ಸ್ನೇಹಿ ಸಂಗ್ರಹಣೆ, ಸಾಗಣೆ ಮತ್ತು ಸಂಸ್ಕರಣೆಯನ್ನು ಖಚಿತಪಡಿಕೊಳ್ಳಬೇಕು. ಇದು ಸ್ಥಳೀಯ ಸಂಸ್ಥೆಗಳ ಮೇಲಿನ ಹೊರೆಯನ್ನು ಗಣನೀಯವಾಗಿ ಕಡಿಮೆ ಮಾಡಲಿದೆ.

ಎಲ್ಲಾ ತ್ಯಾಜ್ಯ ಉತ್ಪಾದಕರು ವಿಂಗಡಿಸಿದ ತ್ಯಾಜ್ಯವನ್ನು ಮಾತ್ರ ಪುರಸಭೆಯ ಮನೆ ಮನೆ ಸಂಗ್ರಹಣೆ ವಾಹನಕ್ಕೆ ನೀಡಬೇಕು. ವಿಂಗಡಿಸಿದ ಮಿಶ್ರಿತ ತ್ಯಾಜ್ಯವನ್ನು ಮಿಶ್ರಣ ಮಾಡುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಬೃಹತ್ ತ್ಯಾಜ್ಯ ಉತ್ಪಾದಕರು ಎಸ್.ಡಬ್ಲ್ಯೂ.ಎಂ. ನಿಯಮಗಳು-2026ರ ಅನ್ವಯ ಸ್ಥಳದಲ್ಲಿಯೇ ತ್ಯಾಜ್ಯ ಸಂಸ್ಕರಣೆ ವ್ಯವಸ್ಥೆ ಕೈಗೊಳ್ಳಬೇಕು. ಎಲ್ಲಾ ವಾಣಿಜ್ಯ ಸಂಸ್ಥೆಗಳು ಹಾಗೂ ಕಛೇರಿಗಳು ನಾಲ್ಕು ವಿಭಾಗಗಳ ಪ್ರತ್ಯೇಕ ಡಬ್ಬಿಗಳನ್ನು ಕಡ್ಡಾಯವಾಗಿ ವ್ಯವಸ್ಥೆ ಮಾಡಬೇಕು. ಸ್ವಚ್ಛತಾ ಸಿಬ್ಬಂದಿ ಹಾಗೂ ವಾಹನ ಚಾಲಕರು ವಿಂಗಡಿತ ತ್ಯಾಜ್ಯವನ್ನು ಪ್ರತ್ಯೇಕವಾಗಿ ಸಂಗ್ರಹಿಸಿ ಸಾಗಿಸಬೇಕು.

ಈ ಅಧಿಸೂಚನೆಯ ನಿಯಮಗಳನ್ನು ಉಲ್ಲಂಘಿಸಿದ ಯಾವುದೇ ವ್ಯಕ್ತಿ, ಮನೆ, ಸಂಸ್ಥೆ, ಅಥವಾ ವಾಣಿಜ್ಯ ಘಟಕಗಳ ವಿರುದ್ಧ ಎಸ್.ಡಬ್ಲ್ಯೂ.ಎಂ. ನಿಯಮಗಳು 2026, ಪುರಸಭೆ ಉಪನಿಯಮಗಳು ಹಾಗೂ ಸರ್ಕಾರದ ಆದೇಶದಅನ್ವಯ ದಂಡ/ ಸ್ಪಾಟ್ ಫೈನ್/ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

# ಯಶಸ್ವಿಯಾಗಿ ಜರುಗಿದ ಪೂರ್ವಭಾವಿ ಸಭೆ




• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಕಮಲಾಪುರ್ ತಾಲೂಕಿನ ಸುಕ್ಷೇತ್ರ ಮುಲ್ಲಾಮಾರಿ ತೀರಕ್ಷೇತ್ರದ ಸೊಂತ ಗ್ರಾಮದ ಹೊರವಲಯದಲ್ಲಿರುವ ಶ್ರೀ ಮಾಣಿಕಕೇಶ್ವರ ದೇವಸ್ಥಾನದ ಶ್ರೀ ಶಂಕರಲಿಂಗ ಮಹಾರಾಜರ ಆಶ್ರಮದಲ್ಲಿ ಬುಧವಾರ ಶ್ರೀಶ್ರೀಶ್ರೀ ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾರಾಜರ ಪಾವನ ಸಾನಿಧ್ಯದಲ್ಲಿ ಜರುಗಿದ ಶ್ರೀಶ್ರೀಶ್ರೀ ದತ್ತ ದಿಗಂಬರ ಮಾಣಿಕೇಶ್ವರ ಮಹಾರಾಜರ ಭವ್ಯ ರಥೋತ್ಸವ ಹಾಗೂ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆ ಉದ್ದೇಶಿಸಿ ಕಲಬುರ್ಗಿ ಗ್ರಾಮೀಣ ಕ್ಷೇತ್ರದ ಶಾಸಕ ಬಸವರಾಜ ಮತ್ತಿಮೂಡ್ ಹಾಗೂ ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಮಾತನಾಡಿ, ಪ್ರತಿ ವರ್ಷ ರಾಮನವಮಿದಂದು ಕಲ್ಮುಡ ಮತ್ತು ಸೊಂತ ಗ್ರಾಮದಲ್ಲಿ ದತ್ತ ದಿಗಂಬರ ಮಾಣಿಕೇಶ್ವರ ಜಾತ್ರ ಮಹೋತ್ಸವ ಮಾಡಲಾಗುತ್ತಿತ್ತು ಈಗ ಸೊಂತ ಗ್ರಾಮದಲ್ಲಿ ಪ್ರತಿ ವರ್ಷದ ಮಾಘ ಮಾಸ ಶುಕ್ಲ ಪಂಚಮಿದಂದು ಜಾತ್ರೋತ್ಸವ ಹಾಗೂ ರಥೋತ್ಸವ ನಡೆಸಲು ಎಲ್ಲರೂ ಒಪ್ಪಿಗೆ ನೀಡಿದರು. ಮೊದಲಿನಂತೆ ಕಲ್ಮುಡನಲ್ಲಿ ರಾಮನವಮಿದಂದು ಉತ್ಸವ ಜರುಗಲಿದೆ. ಫೆಬ್ರವರಿ 11 2027ರಂದು ಸೊಂತದಲ್ಲಿ ಜಾತ್ರಾ ಮಹೋತ್ಸವ ಹಾಗೂ ಪ್ರಥಮ ನೂತನ ರಥೋತ್ಸವ ಜರುಗಲಿದೆ ಎಂದರು. ಜಾತ್ರಾ ಮಹೋತ್ಸವ ಹಾಗೂ ರಥೋತ್ಸವಕ್ಕೆ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಅವರನ್ನು ಕರೆ ತರಲು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯಂದ್ರ ಅವರ ಗಮನಕ್ಕೆ ತಂದು ಜಾತ್ರಾ ಮಹೋತ್ಸವಕ್ಕೆ ಕರೆದುಕೊಂಡು ಬರಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ತಿಳಿಸಿದರು. ಬಾಲಯೋಗಿ ಅಭಿನವ ಶ್ರೀ ಶರಣ ಶಂಕರಲಿಂಗ ಮಹಾರಾಜರು ಸಭೆಯ ಪಾವನ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಸ್ವಂತ ಗ್ರಾಮದಲ್ಲಿ ಪ್ರತಿ ವರ್ಷವೂ ರಾಮನವಮಿ ದಿನದಂದು ಜಾತ್ರಾ ಮಹೋತ್ಸವ ಆಚರಿಸಲಾಗುತ್ತಿತ್ತು. ಇವಾಗ ಮಾಗ ಶುಕ್ಲ ಪಂಚಮಿ ತಂದು ದತ್ತದಿಗಂಬರ ಶ್ರೀ ಮಾಣಿಕೇಶ್ವರ ಜಾತ್ರಾ ಮಹೋತ್ಸವ ನಡೆಸಲು ನಿರ್ಧರಿಸಲಾಗಿದೆ.

ಪ್ರಥಮ ವರ್ಷದ ಜಾತ್ರೆಯಲ್ಲಿ ರಾಷ್ಟ್ರಮಟ್ಟದ ಸಂತರು ತಾಯಿಯಾಗಲಿದ್ದಾರೆ ರೈತರ ಮತ್ತು ವೈದ್ಯರ ಸಮ್ಮೇಳನ ಜರುಗಲಿದೆ ಎಂದರು. ಈ ಸಂದರ್ಭದಲ್ಲಿ ಯಾದಗಿರಿಯ ಶ್ರೀ ಸುರೇಂದ್ರ ಸ್ವಾಮೀಜಿ, ಶಾಪುರದ ಶ್ರೀ ಅಜಯೇಂದ್ರ ಸ್ವಾಮೀಜಿ, ಪ್ರಮುಖರಾದ ಮಲ್ಲಿನಾಥ್ ಪಾಟೀಲ್, ರಂಗನಗೌಡ ಪಾಟೀಲ್, ರಾಜಕುಮಾರ್ ಕೋಟಿ, ಶಿವನಾಂದ್ ಮುಚಳಂಬಿ ಪ್ರಕಾಶ್ ರೆಡ್ಡಿ ಲ್, ಪ್ರವೀಣ್ ಮುಚ್ಚಟ್ಟಿ, ವೀರೇಶ್ ಕೋಟಿ, ವಿಶ್ವನಾಥ್ ಪಾಟೀಲ, ಸುಧಾಕರ ಬಗ್ದಲ, ಚಂದು ಬೆಳಕೇರಾ ಸೇರಿದಂತೆ ಅಪಾರ ಭಕ್ತಾಧಿಗಳು ಉಪಸ್ಥಿತರಿದ್ದರು.

# ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರ: ಮತಗಟ್ಟೆ ಅಧಿಕಾರಿಗಳಿಗೆ ತರಬೇತಿ ಕಾರ್ಯಾಗಾರ
## ಮತದಾರರ ಪಾರದರ್ಶಕ ಪಟ್ಟಿ ಸಿದ್ಧತೆಗೆ ಜಿಲ್ಲಾ ಚುನಾವಣಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಮೂಲಕ ಅರ್ಹ ಮತದಾರರನ್ನು ಪಟ್ಟಿಗೆ ಸೇರ್ಪಡೆಗೊಳಿಸುವುದು, ತಪ್ಪುಗಳನ್ನು ತಿದ್ದುಪಡಿ ಮಾಡುವುದು ಹಾಗೂ ಪಾರದರ್ಶಕ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು ಜಿಲ್ಲಾಡಳಿತದ ಮುಖ್ಯ ಉದ್ದೇಶವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ, ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಕುರಿತು ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಮತಗಟ್ಟೆ ಅಧಿಕಾರಿಗಳು, ಮೇಲ್ವಿಚಾರಕರಿಗೆ ನಗರದ ಸರಳಾದೇವಿ ಕಾಲೇಜಿನಲ್ಲಿ ಬುಧವಾರ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮತದಾರರ ಪಟ್ಟಿಯಲ್ಲಿರುವ ಹೆಸರು, ವಿಳಾಸ, ವಯಸ್ಸು ಮತ್ತು ಭಾವಚಿತ್ರಗಳಲ್ಲಿನ ದೋಷಗಳನ್ನು ಸರಿಪಡಿಸುವುದು. 18 ವರ್ಷ ತುಂಬಿದ ಯುವ ಮತದಾರರನ್ನು ಗುರುತಿಸಿ ಕಡ್ಡಾಯವಾಗಿ ಮತದಾರರ ಪಟ್ಟಿಗೆ ಸೇರ್ಪಡೆ ಮಾಡುವುದು. ಮರಣ ಹೊಂದಿದ, ಕಾಯಂ ಆಗಿ ಬೇರೆಡೆಗೆ ವಲಸೆ ಹೋದ ಮತ್ತು ದ್ವಿಪ್ರತಿ ಹೊಂದಿರುವ ಮತದಾರರ ಹೆಸರುಗಳನ್ನು ನಿಯಮಾನುಸಾರ ಪಟ್ಟಿಯಿಂದ ತೆಗೆದುಹಾಕುವುದು ಎಸ್‌ಐಆರ್ ಪ್ರಕ್ರಿಯೆಯಾಗಿದೆ ಎಂದು ತಿಳಿಸಿದರು.

ಅರ್ಹ ಮತದಾರರು ಚುನಾವಣಾ ಪ್ರಕ್ರಿಯೆಯಿಂದ ವಂಚಿತರಾಗಬಾರದು ಮತ್ತು ಮುಂಬರುವ ಚುನಾವಣೆಗಳನ್ನು ದೋಷಮುಕ್ತ ಮತದಾರರ ಪಟ್ಟಿಯೊಂದಿಗೆ ಎದುರಿಸಬೇಕು ಎಂಬ ಉದ್ದೇಶದಿಂದ ಈ ತರಬೇತಿ ಹಾಗೂ ಕಾರ್ಯಾಗಾರ ಆಯೋಜಿಸಲಾಗುತ್ತಿದೆ ಎಂದರು.


ಬಿ.ಎಲ್.ಓ.ಗಳು ಪ್ರತಿಯೊಂದು ಮನೆಗೆ ಖುದ್ದಾಗಿ ಭೇಟಿನೀಡಿ ಮಾಹಿತಿ ಪರಿಶೀಲಿಸಬೇಕು.

ಯಾವುದೇ ಅರ್ಹ ಮತದಾರರ ಹೆಸರು ಕೈಬಿಟ್ಟು ಹೋಗದಂತೆ ಎಚ್ಚರಿಕೆ ವಹಿಸಬೇಕು. ವೋಟರ್ ಹೆಲ್ಪ್‌ಲೈನ್ ಆಪ್ ಮತ್ತು ಬಿ.ಎಲ್.ಓ ಆಪ್‌ಗಳನ್ನು ಸಮರ್ಪಕವಾಗಿ ಬಳಸಿಕೊಂಡು ಪ್ರಕ್ರಿಯೆಯನ್ನು ವೇಗಗೊಳಿಸಬೇಕು ಎಂದರು.

ವಿಶೇಷ ಪರಿಷ್ಕರಣೆ ಅವಧಿಯಲ್ಲಿ ಫಾರಂ 6–ಹೊಸ ಮತದಾರರ ನೋಂದಣಿಗಾಗಿ, ಫಾರಂ 7–ಮತದಾರರ ಪಟ್ಟಿಯಿಂದ ಹೆಸರು ತೆಗೆದುಹಾಕಲು/ಆಕ್ಷೇಪಣೆ ಸಲ್ಲಿಸಲು, ಫಾರಂ 8–ವಿಳಾಸ ಬದಲಾವಣೆ, ತಿದ್ದುಪಡಿ ಹಾಗೂ ಹೊಸ ಪಿವಿಸಿ ಕಾರ್ಡ್‌ಗಾಗಿ ಇರುವ ನಮೂನೆ ಅರ್ಜಿಗಳನ್ನು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಯಾವುದೇ ಲೋಪದೋಷಗಳಿಲ್ಲದೆ, ಅತ್ಯಂತ ಯಶಸ್ವಿಯಾಗಿ ಪೂರ್ಣಗೊಳಿಸಬೇಕು. ಅಗತ್ಯವಿರುವ ಪ್ರಮುಖ ಸೂಚನೆಗಳು ಮತ್ತು ತಾಂತ್ರಿಕ ವಿವರಗಳನ್ನು ತರಬೇತಿಯಲ್ಲಿ ಭಾಗವಹಿಸಿದ್ದ ಅಧಿಕಾರಿಗಳು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಅತ್ಯಂತ ಯಶಸ್ವಿಯಾಗಿ ಮತ್ತು ವ್ಯವಸ್ಥಿತವಾಗಿ ಕೈಗೊಳ್ಳಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ. ಈ ನಿಟ್ಟಿನಲ್ಲಿ, ಅಗತ್ಯ ಮಾಹಿತಿ ಹೊಂದಬೇಕು ಎಂದರು.

ಈ ಸಂದರ್ಭದಲ್ಲಿ ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಆಗಿರುವ ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಸಹಾಯಕ ಮತದಾರರ ನೋಂದಣಾಧಿಕಾರಿ ಆದ ತಹಶೀಲ್ದಾರರಾದ ಟಿ.ರೇಖಾ, ತಾಲೂಕು ಕಚೇರಿಯ ಎಲ್ಲಾ ಶಿರಸ್ತೇದಾರರು ಹಾಗೂ ಉಪ ತಹಶೀಲ್ದಾರರು, ಚುನಾವಣಾ ಕಾರ್ಯಕ್ಕೆ ನಿಯೋಜನೆಗೊಂಡಿರುವ ಎಲ್ಲಾ ನೋಡಲ್ ಅಧಿಕಾರಿಗಳು ಉಪಸ್ಥಿತರಿದ್ದರು.

# ಪರೀಕ್ಷೆ ಫಲಿತಾಂಶ ಹಗರಣ ಕ್ರಮ ಕೈಗೊಳ್ಳಲು ಎಬಿವಿಪಿ ಆಗ್ರಹ




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯವು ಭ್ರಷ್ಟಾಚಾರಿಗಳ ತವರು ಮನೆಯಾಗಿದೆ. ಪರೀಕ್ಷಾ ಫಲಿತಾಂಶವನ್ನು ಪ್ರಕಟಿಸಿದ ನಂತರವೂ ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಂದ ಹಣ ಪಡೆದು, ಅವರನ್ನು ಉತ್ತೀರ್ಣಗೊಳಿಸುತ್ತಿರುವುದು ಕಂಡುಬಂದಿರುತ್ತದೆ ಎಂದು ಎಬಿವಿಪಿ ಆರೋಪಿಸಿದೆ.

ಈ ಹಗರಣದಲ್ಲಿ ರಿಯಾಜ್, ವೆಂಕಟೇಶ್ ವನದುರ್ಗ, ಯಲ್ಲಾಲಿಂಗ, ಚಂದ್ರಮೋಹನ್, ಉಮೇಶ್ ಹಾಗೂ ಇತರರು ಒಳಗೊಂಡಂತೆ ಪರೀಕ್ಷೆ ಫಲಿತಾಂಶ ಬಿಡುಗಡೆ ಮಾಡುವ ಸಮಯದಲ್ಲಿ ಪಿ.ಜಿ. ಅಥವಾ ಡಿಗ್ರಿ ವಿದ್ಯಾರ್ಥಿಗಳ ಕೋಡಿಂಗ್–ಡಿಕೋಡಿಂಗ್ ಅಂಕಗಳನ್ನು ಅಂಕಗಳನ್ನು ನಮೂದಿಸುವುದು ಇವರೇ ನೋಡಿಕೊಳ್ಳುತ್ತಾರೆ. ಈ ಅವ್ಯವಹಾರವು ತುಂಬಾ ದಿನಗಳಿಂದ ನಡೆಯುತ್ತಿದ್ದು, ಈಗ ಸಾಕ್ಷ್ಯಾಧಾರಗಳ ಸಮೇತ ಬೆಳಕಿಗೆ ಬಂದಿದೆ. ವೆಂಕಟೇಶ ವನದುರ್ಗ, ರಿಯಾಜ್ ಇವರನ್ನೊಳಗೊಂಡಂತೆ ಅನುತ್ತೀರ್ಣರಾದ ವಿದ್ಯಾರ್ಥಿಗಳಿಂದ ಹಣ ಪಡೆದು ಉತ್ತೀರ್ಣಗೊಳಿಸಿದ್ದಾರೆ. ಆದರೆ ಇವರು ಮಾಡುತ್ತಿರುವ ಈ ಅವ್ಯವಹಾರದಿಂದ ಬುದ್ಧಿವಂತ ಬಡ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದೆ. ಹೀಗೆ ಹಣದಿಂದ ಪದವಿಯನ್ನು ಪಡೆದುಕೊಳ್ಳುವುದಾದರೆ ದಿನವಿಡೀ ಕಾಲೇಜುಗಳಿಗೆ ಬಂದು ಪಾಠ ಕೇಳಿ ಪರೀಕ್ಷೆ ಬರೆದ ವಿದ್ಯಾರ್ಥಿಗಳ ಗತಿ ಏನು?

ಮುಂದುವರೆದು, ವಿಶ್ವವಿದ್ಯಾಲಯದ ಪರೀಕ್ಷಾಂಗ ವಿಭಾಗದ ಅಧಿಕಾರಿಗಳು ಈವರೆಗೂ ಪರೀಕ್ಷಾ ಕಾರ್ಯಗಳಿಗೆ ಇವರುಗಳನ್ನೇ ನೇಮಿಸಿರುತ್ತಾರೆ. ಹಾಗಾಗಿ ಈ ವ್ಯವಹಾರದಲ್ಲಿ ಭಾಗಿಗಳಾದ ಎಲ್ಲಾ ಭ್ರಷ್ಟಾಚಾರಿಗಳನ್ನು ಕೂಡಲೇ ಅಮಾನತ್ತುಗೊಳಿಸಿ, ಸೂಕ್ತ ಕಾನೂನು ಕ್ರಮ ಜರುಗಿಸಬೇಕೆಂದು ಮಾನ್ಯ ಕುಲಪತಿಗಳು, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ ಇವರಿಗೆ ಮನವಿ ಸಲಿಸಿ ಅಭಾವಿಪ ಬಳ್ಳಾರಿ ಆಗ್ರಹಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಟಿ.ಭರತ್, ಬಳ್ಳಾರಿ ಜಿಲ್ಲಾ ಸಂಚಾಲಕರು ಕೆ.ದಿಲೀಪ್, ವಿಜಯನಗರ ಜಿಲ್ಲಾ ಸಂಚಾಲಕರು ಧನುಷ್ ಕುಮಾರ್, ಕೊಪ್ಪಳ ಜಿಲ್ಲಾ ಸಂಚಾಲಕರು ಹಮ್ಮಿಗೇಶ ಹಾಗೂ ದರ್ಶನ್, ಮಾರುತಿ, ಶ್ರೀಕಾಂತ್, ಕೃಷ್ಣ, ಶರತ್, ಇ.ಟಿ.ವಿನಾಯಕ್, ಕಿರಣ್ ಮುಂಡರಗಿ, ಅನುಶ್ರೀ, ಮಹೇಶ, ಸುರೇಶ, ರಘು ಸಂತೋಷ, ಸಪ್ತಗಿರಿ, ಕಾರ್ತಿಕ ಹಾಗೂ ಮುಂತಾದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸಿಂಧನೂರು ನಗರದ ವಿವಿಧ ಕಚೇರಿಗಳಿಗೆ ಜಿಲ್ಲಾಧಿಕಾರಿ ಪೂವಿತಾ ದಿಢೀರ್ ಭೇಟಿ, ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 11 : ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಬುಧವಾರ ಬೆಳಿಗ್ಗೆ ಜಿಲ್ಲೆಯ ಸಿಂಧನೂರು ನಗರದ ವಿವಿಧ ಕಚೇರಿಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ಮಾಡಿದರು.

ಮೊದಲು ಸಿಂಧನೂರಿನ ನಗರಸಭೆಗೆ ಆಗಮಿಸಿ, ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು ನಗರಸಭೆಯ ವ್ಯಾಪ್ತಿಯಲ್ಲಿ ಸರಿಯಾಗಿ ಕಾಲಕಾಲಕ್ಕೆ ತೆರಿಗೆ ಸಂಗ್ರಹಿಸಬೇಕು. ನಗರದ ಜನರಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಜಿಲ್ಲೆಯಲ್ಲಿ ಮುಂದಿನ ದಿನಗಳಲ್ಲಿ ಮುಂಗಾರು ಮಳೆ ಹೆಚ್ಚಿನ ಪ್ರಮಾಣದಲ್ಲಿ ಬರುವ ಸಾಧ್ಯತೆ ಇದೆ. ಆದ್ದರಿಂದ ಕುಡಿಯುವ ನೀರನ್ನು ಆಗಾಗ ಪರೀಕ್ಷೆ ಮಾಡಿ, ಶುದ್ಧ ಕುಡಿಯುವ ನೀರು ಪೂರೈಕೆಗೆ ಗಮನ ಹರಿಸಬೇಕು ಎಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗ ಹರಡದಂತೆ ಮುಂಜಾಗ್ರತೆವಹಿಸಬೇಕು. ಮಳೆ ನೀರು ಸರಾಗವಾಗಿ ಹರಿಯುವಂತಾಗಲು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕಾಲುವೆ, ಚರಂಡಿಗಳನ್ನು ಸ್ವಚ್ಛಗೊಳಿಸುವ ಕಾರ್ಯ ಆಗಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ನಂತರ ಸಿಂಧನೂರು ನಗರದ ವಿವಿಧ ರಸಗೊಬ್ಬರ ಹಾಗೂ ಕೀಟನಾಶಕ ಅಂಗಡಿಗಳಿಗೆ ಭೇಟಿ ನೀಡಿ, ದಾಸ್ತಾನು ಪುಸಕ್ತ, ರಶೀದಿ ಪುಸ್ತಕಗಳನ್ನು ಪರಿಶೀಲಿಸಿದರು. ಅಲ್ಲದೇ ಗ್ರಾಹಕರಿಗೆ ಯಾವ ದರದಲ್ಲಿ ಇವುಗಳನ್ನು ಮಾರಾಟ ಮಡಲಾಗುತ್ತಿದೆ. ದರ ಪಟ್ಟಿಯನ್ನು ಹಾಕಲಾಗಿದೆಯೇ ಎಂಬ ಬಗ್ಗೆ ಮಾಹಿತಿ ಪಡೆದರು. ರೈತರಿಗೆ ಅನುಕೂಲವಾಗುಂತೆ ರಸ ಗೊಬ್ಬರ ದಾಸ್ತಾನು ಮಾಡಬೇಕೆಂದು ಅಂಗಡಿಯ ಮಾಲೀಕರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ನಂತರ ಬಸ್ ನಿಲ್ದಾಣದ ಹತ್ತಿರವಿರುವ ಇಂದಿರಾ ಕ್ಯಾಂಟೀನ್ ಗೆ ಭೇಟಿ ನೀಡಿ, ಸಾರ್ವಜನಿಕರಿಗೆ ಕಡಿಮೆ ದರದಲ್ಲಿ ಊಟ, ತಿಂಡಿ ಪೂರೈಸುವ ಉದ್ದೇಶದಿಂದ ಸರ್ಕಾರ ಇಂದಿರಾ ಕ್ಯಾಂಟೀನ್‌ಗಳನ್ನು ಆರಂಭಿಸಿದೆ.



ಕಡಿಮೆ ವೆಚ್ಚದ ಆಹಾರಗಳನ್ನು ಪೂರೈಕೆ ಮಾಡುವ ಜೊತೆಗೆ ಕ್ಯಾಟೀನ್‌ನಲ್ಲಿ ಸ್ವಚ್ಛತೆ ಮತ್ತು ಗ್ರಾಹಕರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ನಂತರ ಸಿಂಧನೂರಿನ ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ದಿಢೀರ್ ಭೇಟಿ ನೀಡಿ, ಆಸ್ಪತ್ರೆಯ ಮೂಲಸೌಕರ್ಯ ಹಾಗೂ ಕುಂದು ಕೊರತೆಗಳ ಬಗ್ಗೆ ಪರಿಶೀಲಿಸಿದರು.

ಸಿಬ್ಬಂದಿಯ ಹಾಜರಾತಿ ಪುಸ್ತಕ, ಕಚೇರಿ ಖರ್ಚು ವೆಚ್ಚದ ಕಡತಗಳನ್ನು ಪರಿಶೀಲಿಸಿ, ಸಮಯಕ್ಕೆ ಸರಿಯಾಗಿ ಕೆಲಸಕ್ಕೆ ಹಾಜರಿರಬೇಕು ಎಂದು ಆಸ್ಪತ್ರೆಯ ವೈದ್ಯರು ಮತ್ತು ಸಿಬ್ಬಂದಿಗಳಿಗೆ ಸೂಚನೆ ನೀಡಿದರು. ನಂತರ ವಾರ್ಡ್‌ಗಳಿಗೆ ತೆರಳಿ ರೋಗಿಗಳ ಆರೋಗ್ಯ ವಿಚಾರಿಸಿದರು.

ಔಷಧ ಉಗ್ರಾಣ ಪರಿಶೀಲಿಸಿ, ಔಷಧಗಳನ್ನು ರೋಗಿಗಳಿಗೆ ಸಮರ್ಪಕವಾಗಿ ವಿತರಣೆ ಮಾಡುವಂತೆ ಸೂಚಿಸಿದರು. ಯಾವುದೇ ಕಾರಣಕ್ಕೂ ಖಾಸಗಿ ಔಷಧ ಅಂಗಡಿಗಳಲ್ಲಿ ಖರೀದಿಸಲು ಚೀಟಿ ಬರೆದುಕೊಟ್ಟಿದ್ದು ಕಂಡು ಬಂದಲ್ಲಿ ಶಿಸ್ತುಕ್ರಮ ಕೈಗೊಳ್ಳುವುದಾಗಿ ವೈದ್ಯರಿಗೆ ಎಚ್ಚರಿಕೆ ನೀಡಿದರು.

ಆಸ್ಪತ್ರೆಯ ಸ್ವಚ್ಛತೆಗೆ ಒತ್ತು ನೀಡಬೇಕು, ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡುವುದರ ಜೊತೆಗೆ ಸೌಜನ್ಯವಾಗಿ ವರ್ತಿಸಬೇಕು ಎಂದರು.

ನಂತರ ಸಿಂಧನೂರಿನ ತಹಶಿಲ್ದಾರ್ ಕಚೇರಿಗೆ ಭೇಟಿ ನೀಡಿ, ವಿವಿಧ ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಜನರಿಗೆ ಉತ್ತಮ ಆಡಳಿತ ನೀಡಬೇಕು. ಸಾರ್ವಜನಿಕರನ್ನು ವಿನಾ ಕಾರಣ ಅಲೆದಾಡುವುದನ್ನು ತಪ್ಪಿಸಬೇಕು ಎಂದು ಹೇಳಿದ ಜಿಲ್ಲಾಧಿಕಾರಿಗಳು ತಾಲೂಕು ಆಡಳಿತದ ಕಾರ್ಯಗಳ ಪ್ರಗತಿ ಪರಿಶೀಲಿಸಿ, ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿದರು.

ಸಂಜೆ ತುರ್ವಿಹಾಳ ಗ್ರಾಮದಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಕೆರೆಯ ಅಭಿವೃದ್ಧಿ ಕಾಮಗಾರಿಯನ್ನು ವೀಕ್ಷಣೆ ಮಾಡಿದರು.

ಇದೇ ಸಂದರ್ಭದಲ್ಲಿ ಲಿಂಗಸುಗೂರು ವಿಭಾಗದ ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲಶೆಟ್ಟಿ, ಸಿಂಧನೂರು ಪೌರಾಯುಕ್ತ ಪಾಂಡುರಂಗ ಇಟಗಿ, ಸಿಪಿಐ ವೀರರೆಡ್ಡಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಸಿದ್ದರಾಮಯ್ಯ ಪಕ್ಷಪಾತ ವ್ಯಕ್ತಿ



• ಮಲ್ಲಮ್ಮ ನುಡಿ ವಾರ್ತೆಗೋಕರ್ಣ

ಬಾಯಿ ತೆಗೆದರೆ ಅಹಿಂದ ಬಗ್ಗೆ ಮಾತನಾಡುವ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಆಗಿದ್ದಾಗ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ 155 ಸಂಸ್ಥೆಗಳಿಗೆ 71.83 ಕೋಟಿ ಅನುದಾನ ಬಿಡುಗಡೆ ಮಾಡಿ ಅದರಲ್ಲಿ ಬಹುತೇಕ ಅನುದಾನ ತಮ್ಮ ಕುರುಬ ಸಮುದಾಯಕ್ಕೆ ನೀಡುವ ಮೂಲಕ ಇತರೆ ಹಿಂದುಳಿದ ವರ್ಗದ ಜನರಿಗೆ ಅನ್ಯಾಯ ಮಾಡಿದ್ದಾರೆ ಎಂದು ರಾಷ್ಟ್ರೀಯ ಈಡಿಗ ಮಹಾಮಂಡಳಿ ಅಧ್ಯಕ್ಷ ಶ್ರೀ ಪ್ರಣವಾನಂದ ಸ್ವಾಮೀಜಿ ಗಂಭೀರ ಆರೋಪ ಮಾಡಿದ್ದಾರೆ.

ಗೋಕರ್ಣದಲ್ಲಿ ಗುರುವಾರ ಹಮ್ಮಿಕೊಂಡ ರಾಷ್ಟ್ರೀಯ ಈಡಿಗ ಮಹಾಮಂಡಳಿಯ ರಾಜ್ಯಮಟ್ಟದ ಚಿಂತನ ಸಭೆಯಲ್ಲಿ ಅವರು ಈ ಕುರಿತು ಮಾತನಾಡಿದರು.

ಸಿದ್ದರಾಮಯ್ಯ ಕೇವಲ ತಮ್ಮ ಸಮುದಾಯವನ್ನು ಮಾತ್ರ ಗಮನದಲ್ಲಿ ಇಟ್ಟುಕೊಂಡು ಸೌಲಭ್ಯ ನೀಡಿದ್ದಾರೆ. ಇತರೆ ಹಿಂದುಳಿದ ವರ್ಗಕ್ಕೆ ಯಾವುದೇ ಮಹತ್ವದ ಅನುದಾನ ನೀಡದೆ ವಂಚಿಸಿದ್ದಾರೆ. ಈಗ ಡಿ.ಕೆ. ಶಿವಕುಮಾರ ಮುಖ್ಯಮಂತ್ರಿ ಆಗಿದ್ದು, ಇವರ ಅಧಿಕಾರ ಅವಧಿಯಲ್ಲಿ ಹಿಂದುಳಿದ ವರ್ಗಕ್ಕೆ ನ್ಯಾಯ ಸಿಗಲಿದೆ ಎಂಬ ನಂಬಿಕೆ ಇದೆ ಎಂದು ಸ್ವಾಮೀಜಿಯವರು ವಿವರಿಸಿದ್ದರು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಈಡಿಗ ಮಹಾಮಂಡಳಿ ರಾಜ್ಯಾದ್ಯಕ್ಷ ತಿಪ್ಪೇಶ್, ಪ್ರಮುಖರಾದ ಡಾ. ಸದಾನಂದ ಪೆರಳೆ, ಯಶೋಧಮ್ಮ ದಾವಣಗೆರೆ, ಮಂಚೇಗೌಡ, ಸಂತೋಷ ತವನಂಬಿ, ಡಾ. ಲಕ್ಷ್ಮಿ ನರಸಯ್ಯ, ವೆಂಕಟೇಶ ಕಡಚೂರು, ವಿಕ್ರಂ ನಾಯ್ಕ, ವಸಂತ ನಾಯ್ಕ, ದೇವರಾಜ ನಾಯ್ಕ, ದಾಮೋದರ ಜಿ. ನಾಯ್ಕ, ಶ್ರೀಧರ ನಾಯ್ಕ ಮಂಜುಳಾ ನಾಯ್ಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸಕಾಲ ಸಮಾಲೋಚಕರ ಹುದ್ದೆಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ11: ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಜಿಲ್ಲೆಯ ಕಂದಾಯ ಹಾಗೂ ಇತರೆ ಇಲಾಖೆಗಳ ಸೇವೆಗಳನ್ನು ಸಕಾಲದಲ್ಲಿ ಮೇಲ್ವಿಚಾರಣೆ ಹಾಗೂ ಸಕಾಲ ತಂತ್ರಾಂಶದ ಸಮಸ್ಯೆಗಳನ್ನು ಬಗೆಹರಿಸಲು ನೈಪುಣ್ಯತೆ ಹೊಂದಿದವರನ್ನು ಸಕಾಲ ಜಿಲ್ಲಾ ಮಾಹಿತಿ ತಂತ್ರಜ್ಞಾನ ಸಮಾಲೋಚಕರು ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಬಿ.ಇ ಅಥವಾ ಬಿ.ಟೆಕ್/ಬಿಸಿಎ ವಿದ್ಯಾರ್ಹತೆ ಹೊಂದಿರಬೇಕು. ತಿಂಗಳಿಗೆ 27,100ರೂ. ಸಂಭಾವನೆಯನ್ನು ನೀಡಲಾಗುತ್ತಿದ್ದು, ಆಸಕ್ತರು ಜೂನ್ 19ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಜೂನ್ 22ರಂದು ನೇರ ಸಂದರ್ಶನ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ನೂತನ ಜಿಲ್ಲಾಧಿಕಾರಿಗಳ ಕಚೇರಿಯನ್ನು ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಕ್ಯಾಂಪಸ್ ಸಂದರ್ಶನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.11–ಬಳ್ಳಾರಿ ಜಿಲ್ಲೆಯ ತೋರಣಗಲ್ಲು ಜೆಎಸ್‌ಡಬ್ಲ್ಯೂ ಸ್ಟೀಲ್‌ಲಿ. ವತಿಯಿಂದ ಐ.ಟಿ.ಐ ಎಲೆಕ್ಟ್ರಿಷಿಯನ್, ಎಲೆಕ್ಟ್ರಾನಿಕ್ ಮೆಕ್ಯಾನಿಕ್, ಫಿಟ್ಟರ್, ಟರ್ನರ್, ಎಂಎಂವಿ, ಮೆಕ್ಯಾನಿಕ ಡಿಜೈಲ್, ಇನಸ್ಟ್ರುಮೆಂಟ್ ಮೆಕ್ಯಾನಿಕ್ ಮತ್ತು ವೆಲ್ಡರ್ ವೃತ್ತಿಯಲ್ಲಿ ಪಾಸಾದ ಹಾಗೂ ಪ್ರಸ್ತುತ ಕೊನೆಯ ವರ್ಷದಲ್ಲಿ ಅಭ್ಯಸಿಸುತ್ತಿರುವ ಶಿಶಿಕ್ಷು ತರಬೇತಿ ಪಡೆಯದೆ ಇರುವ 25 ವರ್ಷದೊಳಗಿನ ತರಬೇತಿದಾರರಿಗೆ ಇದೇ ಜೂನ್ 12 ರಂದು ಬೆಳಿಗ್ಗೆ 9 ಗಂಟೆಗೆ ಕಲಬುರಗಿ (ಪುರುಷ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಕ್ಯಾಂಪಸ್ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ (ಪುರುಷ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

# ಅಪ್ಪುಗೌಡರ ವಿರುದ್ಧದ ಎಫ್‌ಐಆರ್ ರದ್ದುಪಡಿಸಲು ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ದತ್ತಾತ್ರೇಯ ಪಾಟೀಲ್ ರೇವೂರ ವಿರುದ್ಧ ದಾಖಲಾಗಿರುವ ಎಫ್‌ಐಆರ್ ಹಿಂಪಡೆದು, ಸಾಮಾಜಿಕ ಜಾಲತಾಣಗಳಲ್ಲಿ ಅವರ ವಿರುದ್ಧ ತೇಜೋವಧೆ ಮಾಡಿದ 18 ಜನರ ವಿರುದ್ಧ ಪ್ರಕರಣ ದಾಖಲಿಸಬೇಕು ಎಂದು ಬಿಜೆಪಿ ಮುಖಂಡ ಪ್ರದೀಪ ಬಾಚನಳ್ಳಿಕರ್ ಅವರು ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ಆಳಂದ ಪ್ರಕರಣವನ್ನು ಸರ್ಕಾರವೇ ದಾಖಲಿಸಿ ನಂತರ ವಾಪಸ್ ಪಡೆದಿರುವುದು ಆಶ್ಚರ್ಯಕರ ಬೆಳವಣಿಗೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಜೂನ್ 1ರಂದು ನಡೆದ ಪ್ರತಿಭಟನೆಯಲ್ಲಿ ರೇವೂರ ಅವರು ಕೇವಲ ಹಿಂದಿನ ರಾಜಕೀಯ ಬೆಳವಣಿಗೆ ಉಲ್ಲೇಖಿಸಿ ಮಾತನಾಡಿದರು. ಆದರೆ ಅವರ ಭಾಷಣವನ್ನು ಉದ್ದೇಶ ಪೂರ್ವಕವಾಗಿ ತಪ್ಪಾಗಿ ಅರ್ಥೈಸಿ, ಸಮಾಜದಲ್ಲಿ ಅಶಾಂತಿ ಸೃಷ್ಟಿಸುವ ಪ್ರಯತ್ನದ ಭಾಗವಾಗಿ ಸುಳ್ಳು ಆರೋಪ ಮಾಡಿ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಅವರು ಕಿಡಿಕಾಡಿದರು.

ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ, ಅವರ ರಾಜಕೀಯ ಜೀವನಕ್ಕೆ ಕಪ್ಪು ಮಸಿ ಬಳಿಯುವ ಉದ್ದೇಶದಿಂದ ಎಫ್‌ಐಆರ್ ದಾಖಲಿಸಲಾಗಿದೆ. ಎಫ್‌ಐಆರ್ ಹಿಂದೆ ಕಾಣದ ಕೈಗಳಿವೆ. ಕೂಡಲೇ ಎಫ್‌ಐಆರ್ ಹಿಂಪಡೆದು, ನಿಂದಿಸುತ್ತಿರುವವರ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಅವರು ಆಗ್ರಹಿಸಿದರು.

# ವಿಭಾಗೀಯ ಮಟ್ಟದ ಬಾಲಬಾಂಧವ್ಯ ಕಾರ್ಯಕ್ರಮ: ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.11–2026–27ನೇ ಸಾಲಿನಲ್ಲಿ ಧಾರವಾಡ ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷರ ಉಪಸ್ಥಿತಿಯಲ್ಲಿ ಜೂನ್–2026ರ ಮಾಹೆಯ ಕೊನೆಯ ವಾರದಲ್ಲಿ ನಾಲ್ಕು ದಿನಗಳ ವಿಭಾಗೀಯ ಮಟ್ಟದ ಬಾಲಬಾಂಧವ್ಯ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಇದಕ್ಕಾಗಿ ಆಸಕ್ತಿಯುಳ್ಳ ಮಕ್ಕಳು/ಪೋಷಕರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ. ಸಮುದಾಯದ ಮಕ್ಕಳು ಒಂದೆಡೆ ಸೇರಿ ಸಾಹಿತ್ಯ, ಸಂಸ್ಕೃತಿ, ಕಲೆ, ಉಡುಗೆ–ತೊಡುಗೆ, ಆಹಾರ, ಸಾಂಪ್ರದಾಯಿಕ ಆಟಗಳು ಹಾಗೂ ಸರ್ವತೋಮುಖ ವ್ಯಕ್ತಿತ್ವ ವಿಕಸನ ಮುಂತಾದವುಗಳ ಕುರಿತು ಅರಿವು ಮೂಡಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ. ಕಲಬುರಗಿ ಜಿಲ್ಲೆಯಿಂದ 12 ರಿಂದ 18 ವರ್ಷ ವಯೋಮಾನದ ಒಟ್ಟು 35 ಮಕ್ಕಳನ್ನು ಆಯ್ಕೆ ಮಾಡಲಾಗುತ್ತದೆ. ಆಸಕ್ತಿಯುಳ್ಳ ಮಕ್ಕಳು/ಪೋಷಕರು ತಮ್ಮ ಅರ್ಜಿಗಳನ್ನು ಉಪನಿರ್ದೇಶಕರ ಕಾರ್ಯಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸರೋದೆ ಕಾಂಪ್ಲೆಕ್ಸ್, ಪ್ಲಾಟ್ ನಂ. 1 ಮತ್ತು 2, ವಕೀಲರ ಬಡಾವಣೆ, ನಾಗನಹಳ್ಳಿ ಮುಖ್ಯ ರಸ್ತೆ ಕಲಬುರಗಿ ವಿಳಾಸಕ್ಕೆ 2026ರ ಜೂನ್ 15 ರೊಳಗಾಗಿ ಅರ್ಜಿ ಸಲ್ಲಿಸಬೇಕು.

# ಸಫಾಯಿ ಕರ್ಮಚಾರಿಗಳ ಮಕ್ಕಳಿಗೆ ಲ್ಯಾಪಟಾಪ್ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.11: ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿನ ಲ್ಯಾಪಟಾಪ್ ವಿತರಣೆ ಯೋಜನೆಯಡಿ ಆಯ್ಕೆಯಾದ ಸಫಾಯಿ ಕರ್ಮಚಾರಿ (ಪೌರಕಾರ್ಮಿಕ) ಹಾಗೂ ಮ್ಯಾನ್ಯುಯಲ್ ಅವರ ನಾಲ್ವರು ಮಕ್ಕಳ ವಿದ್ಯಾಭ್ಯಾಸಕ್ಕೆ ಅನುಕೂಲವಾಗಲು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರು ಬುಧವಾರ ತಮ್ಮ ಕಚೇರಿಯಲ್ಲಿ ಲ್ಯಾಪಟಾಪ್ ವಿತರಿಸಿದರು. ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಸಫಾಯಿ ಕರ್ಮಚಾರಿಗಳ ರಾಜ್ಯ ಮೇಲ್ವಿಚಾರಣಾ ಸಮಿತಿಯ ಸದಸ್ಯರು, ನಿಗಮದ ಜಿಲ್ಲಾ ವ್ಯವಸ್ಥಾಪಕರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಆಚರಣೆ

**ಬಾಗಲಕೋಟೆ:** ಜಿಲ್ಲಾಡಳಿತ, ಜಿ.ಪಂ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ, ಶಿಕ್ಷಣ, ಸಮಾಜ ಕಲ್ಯಾಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಜಿಲ್ಲಾ ಮಕ್ಕಳಿ ರಕ್ಷಣಾ ಘಟಕದ ಸಯೋಗದಲ್ಲಿ ಜೂನ್ 12 ರಂದು ವಿಶ್ವ ಬಾಲಕಾರ್ಮಿಕ ಪದ್ದತಿ ವಿರೋಧಿ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 10 ಗಂಟೆಗೆ ನೂತನ ಜಿಲ್ಲಾ ಪಂಚಾಯತ ಸಭಾಭವನದಿಂದ ಹಮ್ಮಿಕೊಂಡ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಸಂಗಪ್ಪ ಅವರು ಚಾಲನೆ ನೀಡಲಿದ್ದಾರೆ. ನಂತರ ಜಿ.ಪಂ ನೂತನ ಸಭಾಭವನದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಾಸ್ಟರ್ ಆರ್‌ಕೆಜಿಎಂಎಂ ಮಹಾಸ್ವಾಮಿಜಿ ಕಾರ್ಯಕ್ರಮ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಜಿಲ್ಲಾಧಿಕಾರಿ ಸಂಗಪ್ಪ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಜಿ.ಪಂ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಬಸವರಾಜ ಗದ್ದಿ, ಕಾರ್ಯದರ್ಶಿ ಪ್ರಶಾಂತ ನಾರಾಯನಕರ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಹನಮಂತಗೌಡ ಪಾಟೀಲ, ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ ಸುಂಬಡ ಪಾಲ್ಗೊಳ್ಳಲಿದ್ದಾರೆ. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಮುಖ್ಯ ಕಾನೂನು ಅಭಿರಕ್ಷಕ ಪಿ.ಎಚ್.ಮಾಳೇದ ಉಪನ್ಯಾಸ ನೀಡಲಿದ್ದಾರೆ.

# ಜನಸಂಪರ್ಕ ಸಭೆ: ಅರ್ಜಿ ಸ್ವೀಕಾರ



**ಬಾಗಲಕೋಟೆ:** ಜಮಖಂಡಿ ತಹಶೀಲ್ದಾರ ಕಾರ್ಯಾಲಯದಲ್ಲಿ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಬಿ.ನಂದಗಾವಿ ಅವರ ನೇತೃತ್ವದಲ್ಲಿ ಬುಧವಾರ ನಡೆದ ಜನಸಂಪರ್ಕ ಸಭೆಯಲ್ಲಿ ಸಾರ್ವಜನಿಕರಿಂದ 13 ಅರ್ಜಿಗಳು ಸ್ವೀಕರಿಸಲಾಯಿತು.

ಜನಸಂಪರ್ಕ ಸಭೆಯಲ್ಲಿ ಜಮಖಂಡಿ ತಾಲೂಕಾ ಮಟ್ಟದ ವಿವಿಧ ಇಲಾಖೆಯ 40 ಜನ ಅಧಿಕಾರಿಗಳು ಸೇರಿದಂತೆ ಲೋಕಾಯುಕ್ತ ಠಾಣೆಯ ಪೊಲೀಸ್ ಉಪಾಧೀಕ್ಷಕ ಸುರೇಶರೆಡ್ಡಿ ಎಂ.ಎಸ್, ಪೊಲೀಸ್ ನಿರೀಕ್ಷಕರಾದ ಎಂ.ಬಿ.ಬಿರಾದಾರ, ಎನ್.ಆರ್.ಖಿಲಾರೆ ಹಾಜರಿದ್ದು, ಬಂದ ದೂರು ಅರ್ಜಿಗಳನ್ನು ಕೂಡಲೇ ಇತ್ಯರ್ಥಪಡಿಸಿ ಹಿಂಬರಹ ಇಲ್ಲವೇ ಮಾಹಿತಿ ನೀಡುವಂತೆ ಸಭೆಯಲ್ಲಿ ಸೂಚಿಸಲಾಯಿತು.

ಇಲಾಖೆಯ ಅಧಿಕಾರಿಗಳ ಕಾರ್ಯವೈಖರಿಗಳ ಬಗ್ಗೆ ವಿಚಾರಿಸಿ ಸಾರ್ವಜನಿಕರ ಕುಂದುಕೊರತೆಗಳನ್ನು ಆದ್ಯತೆಯ ಮೇಲೆ ನಿಯಮಾನುಸಾರ ಕ್ರಮ ಜರುಗಿಸಲು ಮತ್ತು ಸಾರ್ವಜನಿಕ ಸಲ್ಲಿಸಿದ ಅರ್ಜಿಗಳನ್ನು ಸ್ವೀಕೃತಿ ವಿಭಾಗದಲ್ಲಿ ಸ್ವೀಕರಿಸಿ ಸಂಬಂಧಿಸಿದವರಿಗೆ ಸ್ವೀಕೃತಿ ನೀಡಲು ಹಾಗೂ ಸದರಿ ವಿಷಯಗಳನ್ನು ವಿನಾಕಾರಣ ಬಾಕಿ ಇಟ್ಟುಕೊಳ್ಳದೇ ನಿಯಮಾನುಸಾರ ಕ್ರಮ ಜರುಗಿಸಲು ತಿಳಿಸಲಾಯಿತು.

ಒಂದು ವೇಳೆ ತಮ್ಮ ಅಧಿಕಾರ ವ್ಯಾಪ್ತಿಗೆ ಒಳಪಡದಿದ್ದಲ್ಲಿ ಸೂಕ್ತ ಮಾಹಿತಿಯೊಂದಿಗೆ ಕೂಡಲೇ ಹಿಂಬರಹ ನೀಡಲು ಸೂಚಿಸಲಾಯಿತು. ಶಾಲೆ, ಕಾಲೇಜು ಹಾಗೂ ವಸತಿ ನಿಲಯಗಳ ಆವರಣದಲ್ಲಿ ಮತ್ತು ಅಕ್ಕ-ಪಕ್ಕದಲ್ಲಿ ಅಪಾಯಕಾರಿ ರೀತಿಯಲ್ಲಿರುವ ವಿದ್ಯುತ್ ಕಂಭ ಪರಿವರ್ತಕ ಹಾಗೂ ಇತರೆ ಇಲೆಕ್ಟ್ರಿಕ್ ಸಾಧನಗಳನ್ನು ತುರ್ತಾಗಿ ಸ್ಥಳಾಂತರ ಮಾಡಲು ಹಾಜರಿದ್ದ ಹೆಸ್ಕಾಂ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು. ಸಾರ್ವಜನಿಕ ಶೌಚಾಲಯಗಳನ್ನು ಸರಿಯಾಗಿ ನಿರ್ವಹಣೆ ಮಾಡುವದರ ಜೊತೆಗೆ ಬಯಲು ಮುಕ್ತ ಶೌಚಾಲಯ ಆಗುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

# ಮುಖ್ಯಮಂತ್ರಿಗಳಿಂದ ಜೂನ್ 13ಕ್ಕೆ ಸಭೆ



**ಕೊಪ್ಪಳ:** ಮಾನ್ಯ ಮುಖ್ಯಮಂತ್ರಿಗಳು ರಾಜ್ಯದ ಎಲ್ಲ ಜಿಲ್ಲೆಯ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಜೂನ್ 13 ರಂದು ಪ್ರಗತಿ ಪರಿಶೀಲನಾ ಸಭೆ ನಡೆಸಲಿರುವ ಹಿನ್ನೆಲೆಯಲ್ಲಿ ಅಧಿಕಾರಿಗಳಿಂದ ಮಾಹಿತಿ ಪಡೆಯಲು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಜೂನ್ 11ರಂದು ಸಭೆ ನಡೆಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದ ಜಿಲ್ಲಾಧಿಕಾರಿಗಳು, ಮುಂಗಾರು ಆರಂಭ ಹಿನ್ನೆಲೆ ಜಿಲ್ಲೆಯಲ್ಲಿ ಬಿತ್ತನೆ ಪ್ರಮಾಣ, ರಸಗೊಬ್ಬರ ವಿತರಣೆ ಸೇರಿದಂತೆ ನಾನಾ ವಿಷಯಗಳ ಬಗ್ಗೆ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಮಾಹಿತಿ ಪಡೆದುಕೊಂಡರು.

ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯ ರೈತರಿಂದ ಬಿತ್ತನೆ ಕಾರ್ಯ ಚುರುಕುಗೊಂಡಿದ್ದು, ಕೃಷಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ರೈತರಿಗೆ ಸ್ಪಂದನೆ ನೀಡಬೇಕು ಎಂದು ತಿಳಿಸಿದ ಜಿಲ್ಲಾಧಿಕಾರಿಗಳು, ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ಸಹ ತಮ್ಮ ತಮ್ಮ ಇಲಾಖೆಯ ಪ್ರಗತಿಯ ಬಗ್ಗೆ ಮಾಹಿತಿ ನೀಡಬೇಕು. 2026-27ನೇ ಸಾಲಿನ ಮೊದಲ ತ್ರೈಮಾಸಿಕ ಅವಧಿ ಮುಕ್ತಾಯದ ಹಂತಕ್ಕೆ ಬಂದಿದ್ದು ಆಯಾ ಇಲಾಖೆಗಳ ಅಧಿಕಾರಿಗಳು ವಿವಿಧ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಹೆಚ್ಚಿನ ಗಮನ ಕೊಡಬೇಕು ಎಂದು ಸೂಚನೆ ನೀಡಿದರು.

ಮುಂಗಾರು ಹಂಗಾಮಿನಲ್ಲಿ ರೈತರ ಬೇಡಿಕೆ ಹಾಗೂ ಅಗತ್ಯಕ್ಕೆ ತಕ್ಕಂತೆ ಬಿತ್ತನೆ ಬೀಜ ಮತ್ತು ರಸಗೊಬ್ಬರವನ್ನು ದಾಸ್ತಾನೀಕರಿಸಿ, ನಿಯಮಾನುಸಾರ ವಿತರಿಸಿ. ಬಿತ್ತನೆ ಬೀಜ ಹಾಗೂ ರಸಗೊಬ್ಬರ ಮಾರಾಟಗಾರರಿಗೆ ನಿಯಮ ಪಾಲನೆ ಕಡ್ಡಾಯಗೊಳಿಸಿ. ಹೆಚ್ಚಿನ ದರ ಅಥವಾ ಕಳಪೆ ಬೀಜ, ರಸಗೊಬ್ಬರ ಮಾರಾಟ ಮಾಡದಂತೆ ಎಚ್ಚರ ವಹಿಸಿ. ಮಳೆಯಿಂದ ಆಗಬಹುದಾದ ಅವಘಡಗಳ ಬಗ್ಗೆ ಎಚ್ಚರ ವಹಿಸಿ. ಅಂಗನವಾಡಿ, ಶಾಲಾ ಕಾಲೇಜು ಕಟ್ಟಡಗಳನ್ನು ಪರಿಶೀಲಿಸಿ ಅಗತ್ಯವಿದ್ದಲ್ಲಿ ದುರಸ್ತಿಗೊಳಿಸಿ. ಅವಘಡ ಸಂದರ್ಭದಲ್ಲಿ ಅಗತ್ಯ ಪರಿಹಾರ ಕ್ರಮ ಕೈಗೊಳ್ಳಲು ಸನ್ನದ್ಧರಾಗಿರಿ ಎಂದು ಸಂಬಂಧಿಸಿದ ಇಲಾಖಾ ಅಧಿಕಾರಿಗಳಿಗೆ ಅವರು ಸೂಚಿಸಿದರು. ಸಭೆಯಲ್ಲಿ ಡಿಎಫ್‌ಓ ನಿರ್ಮಲಾ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ ಕೃಷ್ಣಮೂರ್ತಿ ಟಿ., ನಗಾರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಗುಂಡೂರ, ಜಂಟಿ ತೋಟಗಾರಿಕೆ ನಿರ್ದೇಶಕ ಕೃಷ್ಣ ಉಕ್ಕುಂದ, ಡಿಡಿಪಿಐ ಸೋಮಶೇಖರಗೌಡ ಪಾಟೀಲ್, ಡಿಡಿಪಿಯು ಜಗದೀಶ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಯೋಜನೆ ಅನುಷ್ಠಾನದಲ್ಲಿ ನಿರ್ಲಕ್ಷ್ಯ ಸಲ್ಲದು: ಡಿಸಿ ಸಂಗಪ್ಪ

- ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳು ಹಾಗೂ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ನಿರ್ಲಕ್ಷ್ಯಕ್ಕೆ ಅವಕಾಶ ನೀಡದೇ ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ಸೌಲಭ್ಯಗಳನ್ನು ತಲುಪಿಸಬೇಕೆಂದು ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಟ್ಟದ ಏಕೀಕೃತ ಪ್ರಗತಿ ಪರಿಶೀಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಗುಣಮಟ್ಟದ ಪೂರ್ವ ಪ್ರಾಥಮಿಕ ಶಿಕ್ಷಣ, ಪೌಷ್ಠಿಕ ಆಹಾರ ಹಾಗೂ ಆರೋಗ್ಯಸೇವೆಗಳು ದೊರೆಯುವಂತೆ ಕ್ರಮವಹಿಸಬೇಕು. ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳನ್ನು ಗುರುತಿಸಿ ಅವರಿಗೆ ವಿಶೇಷ ಆರೈಕೆ ಹಾಗೂ ಚಿಕಿತ್ಸೆ ಒದಗಿಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯೊಂದಿಗೆ ಸಮನ್ವಯ ಸಾಧಿಸಬೇಕು ಎಂದರು.

ಮಹಿಳೆಯರು ಮತ್ತು ಮಕ್ಕಳ ಅಭಿವೃದ್ದಿಗೆ ಸಂಬಂಧಿಸಿದ ಯೋಜನೆಗಳು ಸಮಾಜದ ಅತ್ಯಂತ ದುರ್ಬಲ ವರ್ಗಗಳ ಜೀವನ ಸುಧಾರಣೆಗೆ ಸಹಕಾರಿಯಾಗಿವೆ. ಯೋಜನೆಗಳ ಅನುಷ್ಠಾನದಲ್ಲಿ ನಿರ್ಲಕ್ಷ ತೋರಬಾರದು. ಬಾಲ್ಯವಿವಾಹ ತಡೆ, ಮಕ್ಕಳ ಮೇಲಿನ ದೌರ್ಜನ್ಯ ಹಾಗೂ ಶೋಷಣೆ ತಡೆಗಟ್ಟುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಗಳು ಮತ್ತು ಪೊಲೀಸ್ ಇಲಾಖೆ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಲು ತಿಳಿಸಿದರು.

ಮಕ್ಕಳ ಸಹಾಯವಾಣಿ ಸೇವೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಬಾಲ ನ್ಯಾಯ ಮಂಡಳಿಯ ಕಾರ್ಯಚಟುವಟಿಕೆಗಳ ಪ್ರಗತಿಯನ್ನು ಪರಿಶೀಲಿಸಿದರು. ಮಹಿಳಾ ಸಬಲೀಕರಣ ಕಾರ್ಯಕ್ರಮಗಳಡಿ ಕಾರ್ಯನಿರ್ವಹಿಸುತ್ತಿರುವ ಸ್ತ್ರೀಶಕ್ತಿ ಸಂಘಗಳು, ಒನ್ ಸ್ಟಾಪ್ ಸೆಂಟರ್, ಮಹಿಳಾ ಸಹಾಯವಾಣಿ, ಮಹಿಳೆಯರ ಸುರಕ್ಷತೆಗೆ ಕೈಗೊಂಡಿರುವ ಕ್ರಮಗಳ ಕುರಿತು ಅಧಿಕಾರಿಗಳು ಮಾಹಿತಿ ನೀಡಿದರು. ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳಿಗೆ ತ್ವರಿತ ಸ್ಪಂದನೆ ನೀಡುವಂತೆ ಹಾಗೂ ಸಂತ್ರಸ್ತರಿಗೆ ಅಗತ್ಯ ನೆರವು ಮತ್ತು ಮಾರ್ಗದರ್ಶನ ಒದಗಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲೆಯ ಕೆಲವೊಂದು ಗ್ರಾಮಗಳಲ್ಲಿ ಇನ್ನೂ ಶೌಚಾಲಯಗಳನ್ನು ನಿರ್ಮಿಸದೇ ಇರುವದರಿಂದ ಬಾಲಕಿಯರು ಮತ್ತು ಮಹಿಳೆಯರು ಸಮಸ್ಯೆಗಳನ್ನು ಎದುರಿಸುತ್ತಿದ್ದರೆ, ಇನ್ನು ಶೌಚಾಲಯ ನಿರ್ಮಿಸಿರುವ ಸ್ಥಳಗಳಲ್ಲಿ ಅದರ ಬಳಕೆಯ ಜ್ಞಾನ ಇಲ್ಲದೇ ತೊಂದರೆಗೊಳಗಾಗುತ್ತಿದ್ದಾರೆ. ಅಲ್ಲದೇ ಆರೋಗ್ಯ ಮತ್ತು ನೈರ್ಮಲ್ಯದ ದೃಷ್ಟಿಕೋನದಿಂದ ಶೌಚಾಲಯ ಬಳಕೆ ಅವಶ್ಯಕವಾಗಿರುವದರಿಂದ ಈ ಕುರಿತು ಜಿಲ್ಲಾ ಪಂಚಾಯತ್ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಸಂಬಂಧಿಸಿದ ಇಲಾಖೆಗಳು ಸಮನ್ವಯ ಸಾಧಿಸಿಕೊಂಡು ಹೆಚ್ಚಿನ ಜನ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದರು.

ಕೌಟಂಬಿಕ ದೌರ್ಜನ್ಯಗಳ ಕುರಿತು ಕೂಡ ಜಾಗೃತಿ ಮೂಡಿಸಬೇಕು. ಮಹಿಳಾ ಮತ್ತು ಮಕ್ಕಳ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಎನ್.ಜಿ.ಓಗಳು ಕೌಟುಂಬಿಕ ದೌರ್ಜನ್ಯ ಪ್ರಕರಣಗಳನ್ನು ಪತ್ತೆ ಹಚ್ಚಿ ಕುಟುಂಬ ಹಾಗೂ ಕುಟುಂಬ ಸದಸ್ಯರ ಸಮಸ್ಯೆಗಳನ್ನು ಆಲಿಸಿ ಸಮಾಲೋಚನೆ ನಡೆಸುವ ಮೂಲಕ ಕೌಟಂಬಿಕ ದೌರ್ಜನ್ಯಗಳನ್ನು ಕಡಿಮೆಗೊಳಿಸಬೇಕು. ಸಮಾಜಕ್ಕೆ ಸ್ವಾಸ್ಥ ಕುಟುಂಬವು ಅವಶ್ಯಕವಾಗಿರುತ್ತದೆ. ಆದ್ದರಿಂದ ಹೆಚ್ಚಿನ ಸಮಾಲೋಚನೆ ಮತ್ತು ಸಮಸ್ಯೆಗಳಿಗೆ ಸ್ಪಂದನೆ ನೀಡಿ ಕೌಟುಂಬಿಕ ದೌರ್ಜನ್ಯಗಳನ್ನು ಕಡಿಮೆ ಮಾಡಲು ಡಿಸಿ ತಿಳಿಸಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಜಿ.ಪಂ ಮುಖ್ಯ ಯೋಜನಾಧಿಕಾರಿ ಅಲ್ಲಮಪ್ರಭು, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ, ಆರೋಗ್ಯ ಇಲಾಖೆಯ ಡಾ.ಕುಸುಮಾ ಮಾಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರೂಪಣಾಧಿಕಾರಿ ಮಂಜುನಾಥ ಪರಸನ್ನವರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸೂಳಿಕೇರಿ ಸೇರಿದಂತೆ ಇತರೆ ಅಧಿಕಾರಿಗಳು ಎನ್.ಜಿ.ಓ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಮತದಾರರ ಹಕ್ಕುಗಳ ರಕ್ಷಣೆಗಾಗಿ ಹೋರಾಟ ತೀವ್ರಗೊಳಿಸಲು ಕರೆ

- ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ




ಕೇಂದ್ರ ಚುನಾವಣಾ ಆಯೋಗವು ಜಾರಿಗೆ ತರಲು ಮುಂದಾಗಿರುವ ಮತದಾರರ ಪಟ್ಟಿಯ ತೀವ್ರ ವಿಶೇಷ ಪರಿಷ್ಕರಣೆ (SIR) ಪ್ರಕ್ರಿಯೆಯಲ್ಲಿನ ಲೋಪದೋಷಗಳು ಮತ್ತು ಅದರ ಪರಿಣಾಮಗಳ ಕುರಿತು ಜನಜಾಗೃತಿ ಮೂಡಿಸುವ ಉದ್ದೇಶದಿಂದ ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿಯ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ರೈತ ಸಂಘ, ದಲಿತ ಸಂಘಟನೆಗಳು ಹಾಗೂ ವಿವಿಧ ಪ್ರಗತಿಪರ ಸಂಘಟನೆಗಳ ಮುಖಂಡರು, ಕಾರ್ಯಕರ್ತರು ಮತ್ತು ಚಳುವಳಿಗಾರರ ಪೂರ್ವಭಾವಿ ಸಭೆ ನಡೆಯಿತು.

ಸಭೆಯಲ್ಲಿ ಮಾತನಾಡಿದ ರಾಜ್ಯ ರೈತ ಸಂಘದ ಕಾರ್ಯದರ್ಶಿ ಜೆ.ವೀರಸಂಗಯ್ಯ ಅವರು, ಮತದಾನ ಹಕ್ಕು ದೇಶದ ಪ್ರತಿಯೊಬ್ಬ ನಾಗರಿಕನ ಮೂಲಭೂತ ಪ್ರಜಾಸತ್ತಾತ್ಮಕ ಹಕ್ಕಾಗಿದ್ದು, ಯಾವುದೇ ಕಾರಣಕ್ಕೂ ಆ ಹಕ್ಕಿಗೆ ಧಕ್ಕೆಯಾಗಬಾರದು ಎಂದು ಹೇಳಿದರು. ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಹೆಸರಿನಲ್ಲಿ ಲಕ್ಷಾಂತರ ಬಡವರು, ರೈತರು, ಕೂಲಿ ಕಾರ್ಮಿಕರು, ದಲಿತರು, ಆದಿವಾಸಿಗಳು ಹಾಗೂ ಅಂಚಿನ ಸಮುದಾಯಗಳ ಮತದಾನದ ಹಕ್ಕು ಕಸಿದುಕೊಳ್ಳುವ ಅಪಾಯವಿದೆ ಎಂದು ಆತಂಕ ವ್ಯಕ್ತಪಡಿಸಿದರು.

"ಎಸ್‌ಐಆರ್ ಪ್ರಕ್ರಿಯೆಯು ಅಸಂವಿಧಾನಿಕ, ಅವೈಜ್ಞಾನಿಕ, ದೋಷಪೂರಿತ ಮತ್ತು ದುರುದ್ದೇಶಪೂರಿತವಾಗಿದೆ. ಚುನಾವಣಾ ಆಯೋಗವು ಜನರ ಹಕ್ಕುಗಳನ್ನು ರಕ್ಷಿಸುವ ಬದಲು ಮತದಾರರನ್ನು ಸಂಶಯದ ದೃಷ್ಟಿಯಿಂದ ನೋಡುವ ಕ್ರಮ ಕೈಗೊಂಡಿದೆ. ದೇಶದ ಮೂಲನಿವಾಸಿಗಳು ಮತ್ತು ದುರ್ಬಲ ವರ್ಗಗಳ ಮತಗಳನ್ನು ಪಟ್ಟಿಯಿಂದ ತೆಗೆದುಹಾಕುವ ಯಾವುದೇ ಪ್ರಯತ್ನವನ್ನು ನಾವು ಸಹಿಸುವುದಿಲ್ಲ" ಎಂದು ಅವರು ಎಚ್ಚರಿಕೆ ನೀಡಿದರು.

ನಂತರ ಮಾತನಾಡಿದ ಬ್ಲಾಕ್ ಕಾಂಗ್ರೆಸ್ ತಾಲೂಕು ಅಧ್ಯಕ್ಷ ಕೋರಿ ಗೋಣಿಬಸಪ್ಪ ಅವರು, ದೇಶದಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳ ಮೇಲೆ ನಿರಂತರ ದಾಳಿ ನಡೆಯುತ್ತಿದ್ದು, ಜನರ ಬೆಂಬಲ ಕಳೆದುಕೊಳ್ಳುತ್ತಿರುವ ಬಿಜೆಪಿ ಸರ್ಕಾರ ಅಧಿಕಾರವನ್ನು ಉಳಿಸಿಕೊಳ್ಳಲು ವಿವಿಧ ರೀತಿಯ ರಾಜಕೀಯ ತಂತ್ರಗಳನ್ನು ಅನುಸರಿಸುತ್ತಿದೆ ಎಂದು ಆರೋಪಿಸಿದರು.

"ವಿರೋಧ ಪಕ್ಷಗಳ ಧ್ವನಿಯನ್ನು ಹತ್ತಿಕ್ಕುವುದು, ಜನರ ಹಕ್ಕುಗಳನ್ನು ಕುಂಠಿತಗೊಳಿಸುವುದು ಹಾಗೂ ಚುನಾವಣಾ ವ್ಯವಸ್ಥೆಯ ಮೇಲೆಯೇ ಪ್ರಭಾವ ಬೀರುವ ಪ್ರಯತ್ನಗಳು ನಡೆಯುತ್ತಿವೆ. ಎಸ್‌ಐಆರ್ ಪ್ರಕ್ರಿಯೆಯು ಆ ಷಡ್ಯಂತ್ರದ ಒಂದು ಭಾಗವಾಗಿದೆ. ಮತದಾರರ ಪಟ್ಟಿಯ ಪರಿಷ್ಕರಣೆ ಪಾರದರ್ಶಕವಾಗಿ ಮತ್ತು ನ್ಯಾಯಯುತವಾಗಿ ನಡೆಯಬೇಕು. ಯಾವುದೇ ಮತದಾರನ ಹೆಸರು ಅನಗತ್ಯವಾಗಿ ಕೈಬಿಡುವಂತಾಗಬಾರದು" ಎಂದು ಅವರು ಆಗ್ರಹಿಸಿದರು.

ಇದೇ ಸಂದರ್ಭದಲ್ಲಿ, ಕೇಂದ್ರ ಚುನಾವಣಾ ಆಯೋಗ ಜಾರಿಗೆ ತರಲು ಮುಂದಾಗಿರುವ ಎಸ್‌ಐಆರ್ ಪ್ರಕ್ರಿಯೆಯನ್ನು ವಿರೋಧಿಸಿ ಹಾಗೂ ಮತದಾರರ ಹಕ್ಕುಗಳ ಸಂರಕ್ಷಣೆಗೆ ಒತ್ತಾಯಿಸಿ, ದಿನಾಂಕ 17-06-2026 ರಂದು ಹಗರಿಬೊಮ್ಮನಹಳ್ಳಿಯ ಶ್ರೀ ಬಸವೇಶ್ವರ ಸರ್ಕಲ್‌ನಲ್ಲಿ ಎಲ್ಲಾ ಪ್ರಗತಿಪರ ರೈತ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ಸುಮಾರು 5,000 ರೈತರು, ಕಾರ್ಮಿಕರು, ದಲಿತರು, ಹಿಂದುಳಿದ ವರ್ಗಗಳ ಮುಖಂಡರು ಮತ್ತು ವಿವಿಧ ಸಂಘಟನೆಗಳ ಕಾರ್ಯಕರ್ತರನ್ನು ಒಳಗೊಂಡ ಬೃಹತ್ ಪ್ರತಿಭಟನೆ ನಡೆಸಲು ತೀರ್ಮಾನಿಸಲಾಯಿತು.

# ಚರಪಟ್ಟಾಧಿಕಾರ ಮಹೋತ್ಸವ: ಕೃತಜ್ಞತೆ ಸಮರ್ಪಣೆ

- ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ನಗರದ ಟೆಂಗಿನಮಠ ಮಠದ ನಿರಂಜನ ಚರಪಟ್ಟಾಧಿಕಾರ ಮಹೋತ್ಸವದ ಯಶಸ್ಸಿಗೆ ಶ್ರಮಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸುವ ಕಾರ್ಯಕ್ರಮ ಚರಂತಿಮಠದ ಶಿವಾನುಭವ ಮಂಟಪದಲ್ಲಿ ನಡೆಯಿತು.

ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿ ಮಾತನಾಡಿದ ಚರಂತಿಮಠದ ಪ್ರಭುಮಹಾಸ್ವಾಮಿಗಳು, ದೇಶದಲ್ಲಿ ಅನ್ನ ಮತ್ತು ಜ್ಞಾನ ದಾಸೋಹದ ಮೂಲಕ ಬಡತನ ನಿವಾರಣೆಯಲ್ಲಿ ಮಠಮಾನ್ಯಗಳು ಹಾಗೂ ಶರಣರ ಸೇವೆ ಅನನ್ಯವಾಗಿದ್ದು, ಮಠಗಳು ಬಡಜನರ ಬದುಕಿಗೆ ಮಾರ್ಗದರ್ಶನ ನೀಡುವ ಜಾಗೃತಿಯ ತಾಣಗಳಾಗಿವೆ. ಭಾರತೀಯ ಸಂಸ್ಕೃತಿ ಮತ್ತು ಧಾರ್ಮಿಕ ಮೌಲ್ಯಗಳನ್ನು ಉಳಿಸಿ ಬೆಳೆಸುವ ಕಾರ್ಯ ಮಾಡುತ್ತಿವೆ ಎಂದರು.

ಸಂಸದ ಪಿ.ಸಿ.ಗದ್ದಿಗೌಡರ ಮಾತನಾಡಿ, ಧಾರ್ಮಿಕ ಹಾಗೂ ಶೈಕ್ಷಣಿಕ ಕ್ಷೇತ್ರಕ್ಕೆ ಟೀಕಿನಮಠದ ಕೊಡುಗೆ ಅಪಾರವಾಗಿದ್ದು, ನೈತಿಕ ಜೀವನಕ್ಕೆ ಧಾರ್ಮಿಕತೆಯ ಅವಶ್ಯಕತೆ ಇದೆ ಎಂದು ತಿಳಿಸಿದರು.

ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಮಾತನಾಡಿ, ಚರಪಟ್ಟಾಧಿಕಾರ ಸಮಾರಂಭವು ನಗರದ ಸಾಂಸ್ಕೃತಿಕ ಹಬ್ಬವಾಗಿ ರೂಪುಗೊಂಡಿದ್ದು, ಇಡೀ ನಗರ ಆಧ್ಯಾತ್ಮಿಕತೆಯತ್ತ ಮುಖಮಾಡಿತ್ತು ಎಂದರು. ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಜಯಕುಮಾರ ಸರನಾಯಕ ಮಾತನಾಡಿ, ಸಾರ್ವಜನಿಕರ ಸಹಭಾಗಿತ್ವ ಮತ್ತು ಪಾರದರ್ಶಕ ನಿರ್ವಹಣೆಯೇ ಸಮಾರಂಭದ ಯಶಸ್ಸಿಗೆ ಕಾರಣವಾಗಿದೆ ಎಂದು ಹೇಳಿದರು.

ಮಾಜಿ ಶಾಸಕ ಹಾಗೂ ಬಿವಿವಿ ಸಂಘದ ಕಾರ್ಯಾಧ್ಯಕ್ಷ ಡಾ. ವೀರಣ್ಣ ಚರಂತಿಮಠ ಮಾತನಾಡಿ, ನವನಗರದಲ್ಲಿ ಟೆಂಗಿನಮಠ ಮತ್ತು ಟೀಕಿನಮಠದ ನೂತನ ಕಟ್ಟಡ ನಿರ್ಮಾಣಕ್ಕೆ ಅಗತ್ಯ ಸಹಕಾರ ನೀಡಲು ಸಿದ್ಧವಿದ್ದೇವೆ, ಶ್ರೀ ಮಠದ ಪರಂಪರೆಯು ಮುಂದುವರೆಯಲಿ ಎಂದರು.

ಕೆರೂರ ಚರಂತಿಮಠದ ಡಾ. ಶಿವಕುಮಾರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಭಕ್ತರ ತ್ಯಾಗ, ಸೇವೆ ಮತ್ತು ಧರ್ಮನಿಷ್ಠೆಯೇ ಸಮಾರಂಭದ ಯಶಸ್ಸಿನ ಮೂಲ ಕಾರಣವಾಗಿದೆ ಎಂದರು.

ಟೀಕಿನಮಠದ ಪೂಜ್ಯ ಮಲ್ಲಿಕಾರ್ಜುನ ಸ್ವಾಮಿಗಳು ಮಾತನಾಡಿ, ಒಂದು ತಿಂಗಳ ಕಾಲ ನಡೆದ ಚರಪಟ್ಟಾಧಿಕಾರ ಮಹೋತ್ಸವವು ಬಾಗಲಕೋಟೆ ನಗರಕ್ಕೆ ವಿಶೇಷ ಸಾಂಸ್ಕೃತಿಕ ಕಳೆ ತಂದಿದ್ದು, ಮಠಗಳ ಬೆಳವಣಿಗೆಯಲ್ಲಿ ಭಕ್ತರ ಪಾತ್ರವೂ ಸ್ವಾಮಿಗಳಷ್ಟೇ ಮಹತ್ವದ್ದಾಗಿದೆ ಎಂದು ಹೇಳಿದರು. ಅನ್ನ ಹಾಗೂ ಜ್ಞಾನ ದಾಸೋಹದ ಕೀರ್ತಿ ಬಾಗಲಕೋಟೆ ಜನತೆಗೆ ಸಲ್ಲುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಟೆಂಗಿನಮಠ-ಟೀಕಿನಮಠದ ನಿರಂಜನ ಚರಪಟ್ಟಾಧಿಕಾರ ಮಹೋತ್ಸವದ ಯಶಸ್ಸಿಗೆ ಶ್ರಮಿಸಿದ ಎಲ್ಲರಿಗೂ ಕೃತಜ್ಞತೆಯನ್ನು ಸಲ್ಲಿಸಲಾಯಿತು.

ವೇದಿಕೆ ಮೇಲೆ ಸಂಘದ ಗೌರವ ಕಾರ್ಯಧರ್ಶಿ ಮಹೇಶ ಅಥಣಿ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷರಾದ ಜಿ.ಎನ್.ಪಾಟೀಲ ಉಪಸ್ಥಿತರಿದ್ದರು.

# ತಾಯಿ ಹಾಲು ಬ್ಯಾಂಕ್ ಸೌಲಭ್ಯ ಪಡೆದುಕೊಳ್ಳಿ: ಡಾ. ಶಿವಾನಂದ

- ಮಲ್ಲಮ್ಮ ನುಡಿ ವಾರ್ತೆ ವಿಜಯಪುರ




ಅವಧಿಗೂ ಮುನ್ನ ಶಿಶು ಜನನದಿಂದ ಅಮೃತಕ್ಕೆ ಸಮಾನವಾದ ಎದೆಹಾಲು ಲಭ್ಯವಾಗದಿದ್ದಲ್ಲಿ ಜಿಲ್ಲಾಸ್ಪತ್ರೆ ಆವರಣದಲ್ಲಿರುವ ಹಾಲಿನ ಬ್ಯಾಂಕ್ ಸೌಲಭ್ಯ ಪಡೆದುಕೊಳ್ಳಬೇಕು ಎಂದು ಜಿಲ್ಲಾಸ್ಪತ್ರೆ ಶಸ್ತ್ರ ಚಿಕಿತ್ಸಕ ಡಾ. ಶಿವಾನಂದ ಮಾಸ್ತಿಹೊಳಿ ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾಸ್ಪತ್ರೆ, ಸಮಗ್ರ ಹಾಲುಣಿಸುವಿಕೆಯ ನಿರ್ವಹಣೆ ಕೇಂದ್ರ ಮತ್ತು ತಾಯಂದಿರ ಹಾಲಿನ ಬ್ಯಾಂಕ್ ಹಾಗೂ ಸುಶೇನಾ ಹೆಲ್ತ್ ಫೌಂಡೇಶನ್ ಹೈದ್ರಾಬಾದ ಇವರ ಸಹಯೋಗದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಆರೋಗ್ಯ ಸೌಧ ಸಭಾ ಭವನದಲ್ಲಿ ಧಾತ್ರಿ ಸಮಗ್ರ ಹಾಲುಣಿಸುವಿಕೆಯ ಮಹತ್ವದ ಬಗ್ಗೆ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು, ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳು ಹಾಗೂ ನಗರ ಆರೋಗ್ಯ ಕೇಂದ್ರದ ಆಶಾ ಕಾರ್ಯಕರ್ತೆಯರಿಗೆ ಬುಧವಾರ ಹಮ್ಮಿಕೊಂಡಿದ್ದ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಆಗ ತಾನೇ ಜನಿಸಿದ ಶಿಶುವಿನ ತಾಯಿಯ ಎದೆಯಲ್ಲಿ ಹಾಲು ಉತ್ಪತ್ತಿಯಾಗದೇ ಇರುವ, ಅಗತ್ಯ ಇರುವ ಶಿಶುವಿಗೆ, ತಾಯಿ ಮಗುವಿಗೆ ಎದೆಹಾಲು ಉಣಿಸಲು ಸಾಧ್ಯವಾಗದ ಸಂದರ್ಭದಲ್ಲಿ ವಿಜಯಪುರದ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಜಿಲ್ಲಾ ಆಸ್ಪತ್ರೆ ಆವರಣದಲ್ಲಿರುವ ತಾಯಿಯ ಹಾಲಿನ ಬ್ಯಾಂಕ ಸೇವೆ ಪಡೆದುಕೊಳ್ಳಬೇಕು ಎಂದರು.

ತಾಯಿಯ ಎದೆಹಾಲನ್ನು ಅಮೃತ ಎಂದೇ ಹೇಳಲಾಗುತ್ತದೆ. ತಾಯಿ-ಮಗುವಿನ ಬಾಂಧವ್ಯವನ್ನು ಕಾಂಗರೂ ಪರಿಕಲ್ಪನೆ ಎಂದೂ ಕರೆಯಲಾಗುತ್ತದೆ. ತಾಯಿ ಹಾಲನ್ನು ಉಣಿಸುವ ಸಮಯದ ಈ ಬಾಂಧವ್ಯ ಮಗುವಿನ ಜೀವನ ಪೂರ್ತಿ ಸಂಬಂಧವನ್ನು ಕಾಪಾಡುವಲ್ಲಿ ಪೂರಕವಾಗಿರುತ್ತದೆ. ಮಗುವು ಜನಿಸಿದ ತಕ್ಷಣ ಉತ್ಪತ್ತಿಯಾಗುವ ಕೊಲಸ್ಟಮ್ ಮಗುವಿಗೆ ಜೀವನ ಪೂರ್ತಿ ಆಂತರಿಕ ರೋಗನಿರೋಧಕ ಶಕ್ತಿಯನ್ನು ವೃದ್ಧಿಸುತ್ತದೆ ಎಂದರು.

ವಿಜಯಪುರ ಸರ್ಕಾರಿ ಆಸ್ಪತ್ರೆಯು ಉತ್ತರ ಕರ್ನಾಟಕದಲ್ಲಿ ಮೊದಲ ಬಾರಿಗೆ ಎದೆಹಾಲು ಬ್ಯಾಂಕ್ ಸ್ಥಾಪಿಸಿದೆ. ಇದು ವಾರ್ಷಿಕವಾಗಿ 2 ಸಾವಿರ ನವಜಾತ ಶಿಶುಗಳಿಗೆ ಸೇವೆ ಸಲ್ಲಿಸಲಿದೆ ಎಂದರು.

ಈ ತರಬೇತಿ ಕಾರ್ಯಾಗಾರದಲ್ಲಿ ಆರೋಗ್ಯ ವ್ಯವಸ್ಥೆಗಳ ಬಲವರ್ಧನೆಯ ನಿರ್ದೇಶಕ ಡಾ. ಮುಜಾಮದಾರ, ಚಕ್ರವರ್ತಿ, ಡಾ. ಕಾಶಿನಾಥ ಲಕ್ಕರಾಜ, ಡಾ. ಸುಧೀರ ಚವ್ಹಾಣ, ನವಜಾತ ಶಿಶುವೈದ್ಯಶಾಸ್ತ್ರ ವಿಭಾಗ ಡಾ. ಅನುಷಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಸುರೇಶ ಹೊಸಮನಿ, ನವಜಾತ ಚಿಕ್ಕ ಮಕ್ಕಳ ತಜ್ಞರು, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಂಕರ ಚಲವಾದಿ ಮತ್ತು ರೇಖಾ ದಶವಂತ, ಎನ್. ಆರ್. ಬಾಗವಾನ ತಾಲೂಕಾ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು, ನಗರ ಆರೋಗ್ಯ ಕೇಂದ್ರದ ಆಶಾ ಕಾರ್ಯಕರ್ತೆಯರು, ಧಾತ್ರಿ ತಾಯಿಯ ಹಾಲಿನ ಬ್ಯಾಂಕ್ ಮತ್ತು ಸಿಎಲ್ ಎಂಸಿ ತಂಡಗಳು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಹಿರಿಯ ಮುಖಂಡರನ್ನು ಮತ್ತು ಕಾರ್ಯಕರ್ತರನ್ನು ಕೈ ಬಿಡಬಾರದು



**ದೇವನಹಳ್ಳಿ:** ತಾಲೂಕಿನ ಜೆಡಿಎಸ್ ಪಕ್ಷದಲ್ಲಿ ಹಲವಾರು ವರ್ಷಗಳಿಂದ ಕಾರ್ಯನಿರತರಾಗಿರುವ ಹಿರಿಯ ಮುಖಂಡರು ಮತ್ತು ನಿಷ್ಠಾವಂತ ಕಾರ್ಯಕರ್ತರನ್ನು ಕಡೆಗಣಿಸಿ ಮಾಜಿ ಶಾಸಕರಿಗೆ ಸೀಮಿತವಾದ ಕೆಲವು ಹಿಂಬಾಲಕರನ್ನು ಮಾತ್ರ ತಾಲೂಕು ಸಮಿತಿಯ ಪದಾಧಿಕಾರಿಗಳ ಸ್ಥಾನಕ್ಕೆ ಆಯ್ಕೆ ಮಾಡಲಾಗಿದೆ. ಇದರಿಂದ ಜೆಡಿಎಸ್ ಪಕ್ಷ ಒಗ್ಗಾಟ್ಟಾಗಿ ಸಂಘಟನೆಯಾಗುವುದು ಹೇಗೆ ಎಂದು ಜೆಡಿಎಸ್ ಪಕ್ಷದ ಮುಖಂಡರಾದ ಕಾರಹಳ್ಳಿ ಶ್ರೀನಿವಾಸ್ ಪ್ರಶ್ನಿಸಿದ್ದಾರೆ.

ದೇವನಹಳ್ಳಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಜೆಡಿಎಸ್ ಪಕ್ಷದ ಪರಿಶಿಷ್ಟ ಜಾತಿ ಘಟಕದ ಹಿರಿಯ ಮುಖಂಡರುಗಳ ವತಿಯಿಂದ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಜೆಡಿಎಸ್ ಪಕ್ಷದಲ್ಲಿ ಕಳೆದ ಎರಡು ಮೂರು ತಿಂಗಳಿಗಳಿಂದ ಅಂತರಿಕ ಬಿರುಕಿನ ಸಭೆಗಳು ನಡೆಯುತ್ತಿವೆ. ಜೆಡಿಎಸ್ ಪಕ್ಷವು ತಾಲೂಕಿನಲ್ಲಿ ಗಟ್ಟಿಯಾಗಿ ನಿಂತಿದೆ ಅದಕ್ಕೆ ಕಾರಣಕರ್ತರಾದವರನ್ನು ಮರೆಯಬಾರದು, ತಾಲೂಕು ಅಧ್ಯಕ್ಷ ಮತ್ತು ಪದಾಧಿಕಾರಿಗಳ ಆಯ್ಕೆಯಲ್ಲಿ ನಡೆದ ಭಿನ್ನಾಭಿಪ್ರಾಯಗಳು ಮುಂದುವರಿದಿದೆ ಹಾಗೂ ತಾಲೂಕಿನಲ್ಲಿ ಮಾಜಿ ಶಾಸಕರು ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ ಅನುಮಾನವೇ ಇಲ್ಲ.ಆದರೆ ಪಕ್ಷ ಸಂಘಟನೆಯಲ್ಲಿ ಇತ್ತೀಚಿಗೆ ಎಡುವಿದ್ದು ಮುಂದಿನ ಚುನಾವಣೆಗಳಲ್ಲಿ ಪಕ್ಷ ಗೆಲುವಿಗೆ ಶ್ರಮಿಸುವ ಹಿರಿಯ ಮುಖಂಡರನ್ನು ಮತ್ತು ಕಾರ್ಯಕರ್ತರನ್ನು ಕೈ ಬಿಡಬಾರದು, ಪಕ್ಷಕ್ಕೆ ಭದ್ರಬುನಾದಿ ಹಾಕಲು ಅವರೇ ಮುಂದಾಗಿ ಎಲ್ಲವನ್ನು ಸರಿಪಡಿಸಬೇಕಾಗಿದೆ ಎಂದರು.

ಜೆಡಿಎಸ್ ಪಕ್ಷದ ಹಿರಿಯ ವರಿಷ್ಠರಾದ ಕುಮಾರಣ್ಣ, ನಿಖಿಲ್ ಕುಮಾರಸ್ವಾಮಿ ಮತ್ತು ಮಾಜಿ ಶಾಸಕರು ತಾಲೂಕಿನ ಎಲ್ಲಾ ಮುಖಂಡರನ್ನು ಒಟ್ಟುಗೂಡಿಸಿ, ಜೆಡಿಎಸ್ ಪಕ್ಷದಲ್ಲಿ ಸೃಷ್ಟಿ ಆಗಿರುವ ಎರಡು ವಿಭಾಗಗಳನ್ನು ಒಂದು ಮಾಡಿ ,ತಾಲೂಕು ಸಮಿತಿಗೆ ಮತ್ತೊಮ್ಮೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಿ, ತಾಲೂಕಿನಲ್ಲಿ ಜೆಡಿಎಸ್ ಪಕ್ಷವನ್ನು ಸುಭದ್ರವಾಗಿ ಗಟ್ಟಿಗೊಳಿಸಬೇಕು ಎಂದು ಒತ್ತಾಯಿಸಿದ್ದಾರೆ.

ಇದೇ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ಪರಿಶಿಷ್ಟ ಜಾತಿ ಘಟಕದ ಮಾಜಿ ತಾಲೂಕು ಅಧ್ಯಕ್ಷ ಎಂ.ಎಂ ಶ್ರೀನಿವಾಸ್, ಪುರಸಭೆಯ ಮಾಜಿ ಅಧ್ಯಕ್ಷ ನರಸಿಂಹಮೂರ್ತಿ,ಮುಖಂಡರುಗಳಾದ ಈರಪ್ಪಣ್ಣ ,ರೆಡ್ಡಿಹಳ್ಳಿ ಮುನಿರಾಜು, ನರಸಿಂಹಮೂರ್ತಿ, ಎಚ್. ಎಂ ಕೃಷ್ಣಪ್ಪ, ಮುರಳಿ , ವೇಣುಗೋಪಾಲ್, ಮುನಿನಾರಾಯಣಪ್ಪ, ವೆಂಕಟೇಶ್ ಸೇರಿದಂತೆ ಹಲವು ಮುಖಂಡರು ಮತ್ತು ಕಾರ್ಯಕರ್ತರು ಭಾಗಿಯಾಗಿದ್ದರು.

## ಉದ್ಯೋಗಕ್ಕೆ 60 ದಿನಗಳ ಬಿಡುವು ಸಮರ್ಥನೀಯವಲ್ಲ: ಈಶ್ವರ ಖಂಡ್ರೆ



**ಬೆಂಗಳೂರು:** ಗ್ರಾಮೀಣ ಜನರಿಗೆ ಉದ್ಯೋಗ ಖಾತ್ರಿ ಒದಗಿಸುವ ಮನ್ರೇಗಾ (ವಿಬಿ ಜಿ ರಾಮ್ ಜಿ) ವೇತನ ಅನುಪಾತವನ್ನು ಕನಿಷ್ಠ 80:20ಕ್ಕಾದರೂ ಹೆಚ್ಚಿಸುವಂತೆ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ತಮ್ಮನ್ನು ಭೇಟಿ ಮಾಡಿದ್ದ ಸುದ್ದಿಗಾರರೊಂದಿಗೆ ಅವರು, ಯುಪಿಎ ಸರ್ಕಾರ 2006ರಲ್ಲಿ ಜಾರಿ ಮಾಡಿದ ಮನ್ರೇಗಾ ಅಡಿಯಲ್ಲಿ ಒದಗಿಸಲಾಗುವ ಉದ್ಯೋಗಕ್ಕೆ ನೀಡುವ ಕೂಲಿಯ 90ರಷ್ಟು ಹಣವನ್ನು ಕೇಂದ್ರ ಸರ್ಕಾರ ನೀಡುತ್ತಿತ್ತು, ರಾಜ್ಯ ಸರ್ಕಾರಗಳು ಕೇವಲ 10ರಷ್ಟು ಭರಿಸುತ್ತಿದ್ದವು.

ಆದರೆ ಈಗ ಬಿಜೆಪಿ ನೇತೃತ್ವದ ಎನ್.ಡಿ.ಎ. ಸರ್ಕಾರ ಜುಲೈ 1ರಿಂದ ಜಾರಿ ಮಾಡುತ್ತಿರುವ ವಿಬಿ ಜಿ ರಾಮ್ ಜಿಯಲ್ಲಿ ಕೇಂದ್ರ ಸರ್ಕಾರ 60:40 ಅನುಪಾತದಡಿ ಹಣ ಒದಗಿಸುತ್ತಿದ್ದು ಇದು ರಾಜ್ಯ ಸರ್ಕಾರಗಳಿಗೆ ಹೆಚ್ಚಿನ ಹೊರೆಯಾಗುತ್ತದೆ. ಹೀಗಾಗಿ ಈ ಅನುಪಾತವನ್ನು ಹಿಂದೆ ಇದ್ದಂತೆ 90:10ಮುಂದುವರಿಸ ಬೇಕು ಇಲ್ಲವೆ ಕನಿಷ್ಠ 80:20ಕ್ಕಾದರೂ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

ಇದರ ಜೊತೆಗೆ ವರ್ಷದಲ್ಲಿ 60 ದಿನಗಳ ಕಾಲ ಉದ್ಯೋಗ ನೀಡುವುದಿಲ್ಲ ಎಂಬ ಕೇಂದ್ರ ಸರ್ಕಾರದ ನಿಲುವು ಸರಿಯೂ ಅಲ್ಲ, ಸಮರ್ಥನೀಯವೂ ಅಲ್ಲ. ಆಧುನಿಕ ಯುಗದಲ್ಲಿ ಕೃಷಿ ಕಾರ್ಯಕ್ಕೆ ಯಂತ್ರೋಪಕರಣಗಳು ಬಂದಿದ್ದು, ಬಹುತೇಕ ಗ್ರಾಮೀಣ ಭೂರಹಿತ ಕೂಲಿ ಕಾರ್ಮಿಕರಿಗೆ ಉದ್ಯೋಗ ಸಿಗುತ್ತಿಲ್ಲ, ಹೀಗಾಗಿ ಅವರಿಗೆ ಆಸರೆಯಾಗಿರುವ ಉದ್ಯೋಗ ಖಾತ್ರಿಗೆ ರಜೆ ನೀಡುವ ಪ್ರಸ್ತಾಪ ಕೈಬಿಡಬೇಕು ಎಂದು ಈಶ್ವರ ಖಂಡ್ರೆ ಒತ್ತಾಯಿಸಿದರು.

ಬರುವ 28 ಮತ್ತು 29ರಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಶಿವರಾಜ್ ಸಿಂಗ್ ಚವ್ಹಾಣ್ ಅಧ್ಯಕ್ಷತೆಯಲ್ಲಿ ಎಲ್ಲ ರಾಜ್ಯಗಳ ಗ್ರಾಮೀಣಾಭಿವೃದ್ಧಿ ಸಚಿವರ ಸಭೆ ನಡೆಯಲಿದ್ದು, ಈ ಸಭೆಯಲ್ಲಿ ತಾವು ವೇತನ ಅನುಪಾತ ಹೆಚ್ಚಿಸುವಂತೆ ಹಾಗೂ 60 ದಿನಗಳ ಬಿಡುವು ಪ್ರಸ್ತಾಪ ಕೈಬಿಡುವಂತೆ ಆಗ್ರಹಿಸುವುದಾಗಿ ತಿಳಿಸಿದರು. ಮನ್ರೇಗಾದ ನೂತನ ಸ್ವರೂಪವಾದ ವಿಬಿ ಜಿ ರಾಮ್ ಜಿ ಅಡಿಯಲ್ಲಿ ಕೇಂದ್ರ ಸರ್ಕಾರ ರಾಜ್ಯಗಳಿಗೆ ಇಂತಹ ಕೆಲಸ ಮಾತ್ರ ಮಾಡಬೇಕು ಎಂದು ನಿರ್ಬಂಧ ವಿಧಿಸುವುದು ಸರಿಯಲ್ಲ. ರಾಜ್ಯಗಳಿಗೆ ಉದ್ಯೋಗ ಆಯ್ಕೆ ಮಾಡಿಕೊಳ್ಳುವ ಸ್ವಾತಂತ್ರ್ಯ ಇರಬೇಕು ಎಂದು ಪ್ರತಿಪಾದಿಸಿದರು.

ಜೂನ್ 9ರಂದು ಕೇಂದ್ರ ಸಚಿವರೊಂದಿಗೆ ನಡೆದ ವರ್ಚುವಲ್ ಸಭೆಯಲ್ಲಿ ತಾವು ರಾಜ್ಯ ಸರ್ಕಾರ ಕನಿಷ್ಠ ವೇತನ ಹೆಚ್ಚಳ ಮಾಡುತ್ತಿದ್ದು, ಇದಕ್ಕೆ ಅನುಗುಣವಾಗಿ ವಿಬಿ ಜೀ ರಾಮ್ ಜೀ ವೇತನ ಪರಿಷ್ಕರಣೆ ಮಾಡುವಂತೆ ಆಗ್ರಹಿಸಿದ್ದು, ಕೇಂದ್ರ ಸಚಿವರು ಇದಕ್ಕಾಗಿಯೇ ಒಂದು ವೇತನ ಆಯೋಗ ರಚಿಸಲಾಗಿದ್ದು, ಶೀಘ್ರ ನಿರ್ಧಾರ ಕೈಗೊಳ್ಳುವ ಭರವಸೆ ನೀಡಿದ್ದಾರೆ ಎಂದರು.

# ಏಜೆಂಟ್ ನೇಮಕಕ್ಕೆ ರಾಜಕೀಯ ಪಕ್ಷಗಳಿಗೆ ಸೂಚನೆ

• **ಮಲ್ಲಮ್ಮ ನುಡಿ ವಾರ್ತೆ ವಿಜಯಪುರ**



ಮತದಾರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತಂತೆ ಆಯಾ ರಾಜಕೀಯ ಪಕ್ಷದವರು ತಮ್ಮ ಮತಗಟ್ಟೆಮಟ್ಟದ ಏಜೆಂಟರನ್ನು ಕೂಡಲೇ ನೇಮಕ ಮಾಡಿಕೊಳ್ಳಬೇಕು ಎಂದು ವಿಜಯಪುರ ನಗರ ಮತಕ್ಷೇತ್ರದ ಮತದಾರರ ನೋಂದಣಾಧಿಕಾರಿಗಳಾದ ಮಹಾನಗರ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ ಹೇಳಿದರು.

ಮಹಾನಗರ ಪಾಲಿಕೆ ಸಭಾಂಗಣದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಕಾರ್ಯ ಕೈಗೊಳ್ಳುವ ಕುರಿತಂತೆ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಇತ್ತಿಚಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನಗರ ಮತಕ್ಷೇತ್ರದಲ್ಲಿ 2026ರ ಮೇ 26 ರಂತೆ ಒಟ್ಟು 2,92,179 ಮತದಾರರಿದ್ದಾರೆ. ಒಟ್ಟು 285 ಮತಗಟ್ಟೆಗಳಿದ್ದು 285 ಜನ ಮತಗಟ್ಟೆ ಮಟ್ಟದ ಅಧಿಕಾರಿಗಳು ಹಾಗೂ 28 ಜನ ಮತಗಟ್ಟೆ ಮಟ್ಟದ ಮೇಲ್ವಿಚಾರಕರು ಕಾರ್ಯ ನಿರ್ವಹಿಸುತ್ತಿದ್ದಾರೆ.

ರಾಜಕೀಯ ಪಕ್ಷದವರು ತಮ್ಮ ಮತಗಟ್ಟೆ ಮಟ್ಟದ ಏಜೆಂಟ್ ರನ್ನು ಕೂಡಲೇ ನೇಮಕ ಮಾಡಿಕೊಳ್ಳಬೇಕು ಎಂದು ಹೇಳಿದರು. ನಗರ ಮತಕ್ಷೇತ್ರ ಸಂಬಂಧಿಸಿದಂತೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಮತದಾರರ ನೋಂದಣಾಧಿಕಾರಿಗಳು,ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಚುನಾವಣಾ ಆಯೋಗದ ಎಲ್ಲ ಹಂತಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ಒಳಗೊಂಡಿರುವ ಪಾರದರ್ಶಕ ಪ್ರಕ್ರಿಯೆಯಾಗಿದೆ ಎಂದು ರಾಜಕೀಯ ಪಕ್ಷಗಳಿಗೆ ತಿಳಿಸಿದರು.

ಭಾರತದ ಚುನಾವಣಾ ಆಯೋಗದ ನಿರ್ದೇಶನದಂತೆ 30–06–2026 ರಿಂದ 29–07–2026 ರವರೆಗೆ ಮತಗಟ್ಟೆ ಮಟ್ಟದ ಅಧಿಕಾರಿಗಳಿಂದ ಮನೆ–ಮನೆ ಭೇಟಿ ಪ್ರಕ್ರಿಯೆಗಳು ನಡೆಯಲಿವೆ. ಈ ಅವಧಿಯಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆಗೆ ಭೇಟಿ ನೀಡಿದಾಗ ಮತದಾರರ ಗಣತಿ ನಮೂನೆ ದ್ವಿ–ಪ್ರತಿಯಲ್ಲಿ ನೀಡಲಿದ್ದಾರೆ. ತಮ್ಮ ನೈಜ ಮಾಹಿತಿಯನ್ನು ಭರ್ತಿ ಮಾಡಿ ಒಂದು ಪ್ರತಿಯನ್ನು ಮತದಾರರು ಇರಿಸಿಕೊಂಡು ಸಹಿ ಮಾಡಿದ ಇನ್ನೊಂದು ಪ್ರತಿಯನ್ನು ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ನೀಡಬೇಕು ಎಂದರು.

ದಿನಾಂಕ: 05–08–2026 ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗುವುದು. ಒಂದು ವೇಳೆ ಕರಡು ಮತದಾರರ ಪಟ್ಟಿಯಲ್ಲಿ ನ್ಯೂನ್ಯತೆಗಳು ಕಂಡು ಬಂದಲ್ಲಿ ನೈಜ ಮತದಾರರಿಗೆ ತಮ್ಮ ಹಕ್ಕು ಮತ್ತು ಆಕ್ಷೇಪಣೆ ಅರ್ಜಿಗಳನ್ನು ಸೆಪ್ಟೆಂಬರ್ 4 ರೊಳಗಾಗಿ ಸಲ್ಲಿಸಲು ಅವಕಾಶವಿದೆ ಎಂದರು.

ದಿನಾಂಕ: 05–08–2026 ರಿಂದ 03–10–2026 ರವರೆಗೆ ನೋಟಿಸ್ ಹಂತ ಹಾಗೂ ಹಕ್ಕು ಮತ್ತು ಆಕ್ಷೇಪಣೆಗಳ ವಿಲೇವಾರಿ ಕಾರ್ಯ ಕೈಗೊಳ್ಳಲಾಗುವುದು. ಈ ಹಂತದಲ್ಲಿ ಆಕ್ಷೇಪಣೆ ಸಲ್ಲಿಸಿದ ಮತದಾರರು ಭಾರತ ಚುನಾವಣಾ ಆಯೋಗವು ನಿಗದಿಪಡಿಸಿದ 12 ದಾಖಲೆಗಳ ಪೈಕಿ ಸೂಕ್ತ ದಾಖಲೆಗಳನ್ನು ಸಲ್ಲಿಸಬಹುದು. ಮತದಾರರ ಹೆಸರನ್ನು ನಿಯಮಾನುಸಾರ ಪರಿಶೀಲಿಸಿ ಮತದಾರರ ಪಟ್ಟಿಯಲ್ಲಿ ಸೇರಿಸಲು ಕ್ರಮ ಜರುಗಿಸಲಾಗುವುದು. ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 7ರಂದು ಪ್ರಕಟಿಸಲಾಗುವುದು ಎಂದು ತಿಳಿಸಿದರು.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಪರಿಷ್ಕರಣೆ ಕಾರ್ಯದಲ್ಲಿ ಮತದಾರರು ಸುಗಮವಾಗಿ ಭಾಗವಹಿಸಲು ಸಾಧ್ಯವಾಗುವಂತೆ ಬಿಎಲ್ಒ ಫೆಸಿಲಿಟೇಶನ್ ಕ್ಯಾಂಪ್ ಹಾಗೂ ವೋಟರ್ ಫೆಲಿಸಿಟೇಶನ್ ಕ್ಯಾಂಪ್ ಗಳನ್ನು ಸ್ಥಾಪಿಸಲಾಗುವುದು ಎಂದವರು ತಿಳಿಸಿದರು. ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಗಣತಿ ನಮೂನೆಗಳನ್ನು ವಿತರಣೆ ಹಾಗೂ ಸಂಗ್ರಹಿಸುವ ಸಂದರ್ಭದಲ್ಲಿ ಎಲ್ಲ ಮತದಾರರು, ಸಾರ್ವಜನಿಕರು ಸಂಪೂರ್ಣ ಸಹಕಾರ ನೀಡುವಂತೆ ಹೇಳಿದರು.

## ವಾಲ್ಮೀಕಿ ಹಗರಣ ಕ್ಲಿಯರ್ ಆಗೋತನಕ ಬಿ ನಾಗೇಂದ್ರಗೆ ನಿರೀಕ್ಷಿತ ಬ್ರೇಕ್..!

• **ಜಂಬುನಾಥ, ಬಳ್ಳಾರಿ**

ಕರ್ನಾಟಕ ರಾಜಕೀಯದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಎರಡನೇ ಹಂತದ ಸಚಿವ ಸಂಪುಟ ವಿಸ್ತರಣೆ ಬಗ್ಗೆ ಭಾರೀ ಚರ್ಚೆ ನಡೆಯುತ್ತಿದೆ. ಕಾಂಗ್ರೆಸ್ ಹೈಕಮಾಂಡ್ ಯುವ ಶಾಸಕರಿಗೆ ಹೆಚ್ಚಿನ ಅವಕಾಶ ನೀಡುವ ಬಗ್ಗೆ ಚಿಂತನೆ ನಡೆಸುತ್ತಿದೆ ಎಂಬ ಮಾಹಿತಿ ರಾಜಕೀಯ ವಲಯದಲ್ಲಿ ಹರಿದಾಡುತ್ತಿದೆ.

ಈ ಹಿನ್ನೆಲೆಯಲ್ಲಿ ಬಳ್ಳಾರಿ ನಗರ ಶಾಸಕ ನಾರಾಭರತ್ ರೆಡ್ಡಿ ಹೆಸರು ಪ್ರಮುಖವಾಗಿ ಕೇಳಿಬರುತ್ತಿದೆ. ಬಳ್ಳಾರಿ ನಗರ ಕ್ಷೇತ್ರದಿಂದ ಮೊದಲ ಬಾರಿಗೆ ಗೆದ್ದಿರುವ ಭರತ್ ರೆಡ್ಡಿ ಯುವ ಮುಖವಾಗಿದ್ದು, ಉತ್ತರ ಕರ್ನಾಟಕ ಹಾಗೂ ರೆಡ್ಡಿ ಸಮುದಾಯ ಸಮೀಕರಣದ ದೃಷ್ಟಿಯಿಂದ ಅವರಿಗೆ ಸಚಿವ ಸ್ಥಾನ ಸಿಗುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ಪಕ್ಷದೊಳಗೂ ಅವರ ಹೆಸರನ್ನು ಪ್ರಾಥಮಿಕ ಪಟ್ಟಿಯಲ್ಲಿ ಪರಿಗಣಿಸಲಾಗಿದೆ ಎಂಬ



ರಾಜಕೀಯ ಮೂಲಗಳ ಮಾಹಿತಿ ಹೇಳುತ್ತಿವೆ.

ಇನ್ನೊಂದೆಡೆ ಮಾಜಿ ಸಚಿವ, ಬಳ್ಳಾರಿ ಗ್ರಾಮಾಂತರ ಶಾಸಕ ಬಿ ನಾಗೇಂದ್ರ ಅವರಿಗೆ ತಾತ್ಕಾಲಿಕ ಹಿನ್ನಡೆ ಉಂಟಾಗಿದೆ. ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣದಲ್ಲಿ ಸಿಬಿಐ ಚಾರ್ಜ್‌ಶೀಟ್ ಸಲ್ಲಿಸಿರುವ ಹಿನ್ನೆಲೆಯಲ್ಲಿ, ಪ್ರಕರಣ ಕ್ಲಿಯರ್ ಆಗುವವರೆಗೆ ಸಚಿವ ಸ್ಥಾನ ನೀಡಬಾರದು ಎಂಬ ಸಂದೇಶವನ್ನು ಕಾಂಗ್ರೆಸ್ ಹೈಕಮಾಂಡ್ ನೀಡಿದೆ ಎಂದು ಬಲ್ಲ ಮೂಲಗಳಿಂದ ಹೇಳುತ್ತಿವೆ. ಸಿಬಿಐ ತನಿಖೆ ಪ್ರಕಾರ ಸುಮಾರು ₹89 ಕೋಟಿ ಅನಧಿಕೃತವಾಗಿ ವರ್ಗಾವಣೆ ಮಾಡಲಾಗಿದೆ ಎಂದು ಆರೋಪಿಸಲಾಗಿದೆ. ಈ ಪ್ರಕರಣದಲ್ಲಿ ನಾಗೇಂದ್ರ ಸೇರಿದಂತೆ ಹಲವರ ವಿರುದ್ಧ ಚಾರ್ಜ್‌ಶೀಟ್ ದಾಖಲಾಗಿದೆ.

ಇದೀಗ ಮುಖ್ಯಮಂತ್ರಿ ಡಿ.ಕೆ .ಶಿವಕುಮಾರ್ ಸರ್ಕಾರದಲ್ಲಿ ಸಂಪುಟ ಸಮತೋಲನ ದೊಡ್ಡ ಸವಾಲಾಗಿದೆ. ಹಿರಿಯ ನಾಯಕರ ಅಸಮಾಧಾನ, ಖಾತೆ ಹಂಚಿಕೆ ವಿವಾದ, ಪ್ರಾದೇಶಿಕ ಹಾಗೂ ಜಾತಿ ಸಮೀಕರಣ– ಈ ಎಲ್ಲ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಮುಂದಿನ ವಿಸ್ತರಣೆ ನಡೆಯಲಿದೆ. ಇತ್ತೀಚೆಗೆ ಸಚಿವ ಸ್ಥಾನ ಹಾಗೂ ಖಾತೆ ಹಂಚಿಕೆ ಕುರಿತಾಗಿ ಕೆಲ ಹಿರಿಯ ನಾಯಕರು ಅಸಮಾಧಾನ ವ್ಯಕ್ತಪಡಿಸಿದ್ದೂ ಸರ್ಕಾರಕ್ಕೆ ತಲೆನೋವಾಗಿತ್ತು.

### ರಾಜಕೀಯ ವಲಯದಲ್ಲಿ ಕೇಳಿಬರುತ್ತಿರುವ ಅಂಶಗಳು

- **ಯುವ ಶಾಸಕರಿಗೆ ಈ ಬಾರಿ ಹೆಚ್ಚಿನ ಆದ್ಯತೆ**
- **ಉತ್ತರ ಕರ್ನಾಟಕ ಭಾಗಕ್ಕೆ ಹೆಚ್ಚುವರಿ ಪ್ರತಿನಿಧಿತ್ವ**
- **ಬಳ್ಳಾರಿ ಭಾಗದಿಂದ ಭರತ್ ರೆಡ್ಡಿಗೆ ಅವಕಾಶ ಸಾಧ್ಯತೆ**
- **ವಾಲ್ಮೀಕಿ ಹಗರಣ ಕ್ಲಿಯರ್ ಆಗುವವರೆಗೆ ಬಿ. ನಾಗೇಂದ್ರಗೆ ನಿರೀಕ್ಷಿತ ಬ್ರೇಕ್**
- **ಹೈಕಮಾಂಡ್ ಅಂತಿಮ ಅನುಮೋದನೆಯ ಬಳಿಕವೇ ಅಧಿಕೃತ ಘೋಷಣೆ**

**ಆದರೆ ಸರ್ಕಾರ ಅಥವಾ ಕಾಂಗ್ರೆಸ್ ಹೈಕಮಾಂಡ್ ಇನ್ನೂ ಅಧಿಕೃತವಾಗಿ ಸಂಪುಟ ವಿಸ್ತರಣೆ ಪಟ್ಟಿ ಪ್ರಕಟಿಸಿಲ್ಲ. ಹೀಗಾಗಿ ಭರತ್ ರೆಡ್ಡಿ ಹೆಸರು ಸೇರಿ ಹಲವು ಹೆಸರುಗಳು ರಾಜಕೀಯ ಚರ್ಚೆಯ ಮಟ್ಟದಲ್ಲೇ ಇವೆ.**

## ಕಳ್ಳಬಟ್ಟಿ ಸರಾಯಿ ಅಡ್ಡಾಗಳ ಮೇಲೆ ದಾಳಿ, ಮೂವರು ಬಂಧನ

• **ಮಲ್ಲಮ್ಮ ನುಡಿ ವಾರ್ತೆ ವಿಜಯಪುರ**



ಗೋಲಗುಮ್ಮಜ್ ಪೊಲೀಸ್ ಠಾಣೆಯ ಸರಹದ್ದಿನ ಹರಣಶಿಖಾರಿ ಕಾಲೋನಿಯಲ್ಲಿ ಅಕ್ರಮ ಕಳ್ಳಬಟ್ಟಿ ಸರಾಯಿ ನಕಲಿ ಸೇಂದಿ ಮಾರಾಟ ಮಾಡುತ್ತಿದ್ದಾರೆ ಎಂಬ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿ 11–06–2026 ರಂದು ಮುಂಜಾನೆ 05:00 ಗಂಟೆಗೆ ಸದರಿ ಅಡ್ಡೆಗಳ ಮೇಲೆ ವಿಜಯಪುರ ಉಪವಿಭಾಗದ ಡಿಎಸ್‌ಪಿ ರವರ ನೇತೃತ್ವದಲ್ಲಿ ದಾಳಿ ನಡೆಸಿ ಸುಮಾರು 10–15 ಕಳ್ಳಬಟ್ಟಿ ಸರಾಯಿ ತಯಾರಿಸುವ ಸ್ಥಳಗಳು ಕಂಡು ಬಂದಿದ್ದು, ಸದರಿ ಸ್ಥಳಗಳಲ್ಲಿ ಸಿಎಚ್ ಪೌಡರನಿಂದ ಮಿಶ್ರಿತವಾಗಿ ಮಾನವ ಜೀವಕ್ಕೆ ಅಪಾಯವನ್ನುಂಟು ಮಾಡುವ ಸೇಂಧಿಯನ್ನು ಮತ್ತು ಕಳ್ಳಬಟ್ಟಿ ಸರಾಯಿಯನ್ನು ತಯಾರಿಸುತ್ತಿದ್ದು, ಸದರಿ ಸ್ಥಳಗಳಲ್ಲಿ ಇದ್ದ ಸುಮಾರು 480–500 ಲೀಟರ್‌ನಷ್ಟು ಕಳ್ಳ ಬಟ್ಟಿ ಸರಾಯಿ ತಯಾರಿಸುವ ಕಚ್ಚಾ ಕೊಳೆಯನ್ನು ಮತ್ತು 50 ಲೀಟರ್‌ನಷ್ಟು ನಕಲಿ ಸೇಂಧಿಯನ್ನು ಸ್ಥಳದಲ್ಲಿಯೇ ಪಂಚರ ಸಮಕ್ಷಮ ನಾಶಪಡಿಸಿದ್ದು, ಸುಮಾರು 25–30 ಲೀಟರ್‌ನಷ್ಟು ಶುದ್ಧ ಕಳ್ಳಬಟ್ಟಿ ಸರಾಯಿಯನ್ನು ಮತ್ತು ನಕಲಿ ಸೇಂದಿ ತಯಾರಿಸಲು ಉಪಯೋಗಿಸುವ ರಾಸಾಯನಿಕ ವಸ್ತುವಾದಂತಹ 1 ಕೆಜಿ ಸಿಎಚ್ ಪೌಡರನ್ನು ಜಪ್ತಿ ಮಾಡಲಾಗಿದ್ದು, ಈ ದಾಳಿಯಲ್ಲಿ ವಿಜಯಪುರ ನಗರ ಪೊಲೀಸ್ ಠಾಣೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳನ್ನೊಳಗೊಂಡ 10 ತಂಡಗಳು ದಾಳಿ ಮಾಡಿ, ಕಾಲೋನಿಯಲ್ಲಿ ಅಡ್ಡಾಗಳಲ್ಲಿ ಸದರಿ ಮೂವರು ಆರೋಪಿತರಾದ ಪರಶುರಾಮ ತಂದೆ ಮುರಾರಿ ಕಾಳೆ, ವಯಾ:46 ವರ್ಷ, ಸಾ॥ ಎಚ್ಎಸ್. ಕಾಲೋನಿ, ಸುನೀಲ್ ತಂದೆ ಲಕ್ಷ್ಮಣ ಚವ್ಹಾಣ, ವಯಾ: 22 ವರ್ಷ, ಸಾ॥ ಎಚ್ಎಸ್ ಕಾಲೋನಿ ವಿಜಯಪುರ, ಸುರೇಶ ತಂದೆ ಬಲರಾಮ ಕಾಳೆ, ವಯಾ: 52 ವರ್ಷ, ಸಾ॥ ಎಚ್.ಎಸ್ ಕಾಲೋನಿ ವಿಜಯಪುರ ಮೇಲೆ ಗೋಲಗುಮ್ಮಜ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ ಪರಾರಿ ಇರುವ ಆರೋಪಿತನ ಪತ್ತೆಗೆ ಕ್ರಮ ಕೈಗೊಳ್ಳಲಾಗಿದೆ.

ಸದರಿ ದಾಳಿಯಲ್ಲಿ ಕಾರ್ಯನಿರ್ವಹಿಸಿದ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿಗಳ ಕರ್ತವ್ಯವನ್ನು ಮಾನ್ಯ ಜಿಲ್ಲಾ ಪೊಲೀಸ್ ಅಧೀಕ್ಷಕ ಲಕ್ಷ್ಮಣ ನಿಂಬರಗಿ ಶ್ಲಾಘಿಸಿದ್ದಾರೆ.

# ವಿಪ್ರಲಂಬ ಶೃಂಗಾರ ರಸಗಳ ಮನಮೋಹಕ ಚಿತ್ರಣ



**ಧರ್ಮ–ಮರ್ಮ**
**• ಡಾ.ಎಂ.ಮಹ್ಮದ್ ಬಾಷ ಗೂಳ್ಯಂ**
**ಪ್ರಧಾನ ಸಂಪಾದಕ, ಬೆಂಗಳೂರು**

**ಕಳೆದ ಸಂಚಿಕೆಯಿಂದ...**

ಶಿವಶರಣರ ವಚನಸಾಹಿತ್ಯದ ಬೆನ್ನಲ್ಲೇ ಹರಿಹರ, ಚಾಮರಸಾದಿಗಳ ಪ್ರೇಮಸ್ವರೂಪದ ಶಿವಭಕ್ತಿಯನ್ನು ತಮ್ಮ ಕಾವ್ಯಗಳಲ್ಲಿ ಅಭಿವ್ಯಕ್ತಿಗೊಳಿಸಿದ್ದರು. ನಂಬಿಯಣ್ಣನ ರಗಳೆ, ಪ್ರಭುಲಿಂಗ ಲೀಲೆಗಳಂಥ ರಮ್ಯ ಕಾವ್ಯಗಳನ್ನು ಸೃಷ್ಟಿಸಿದ್ದು, ಶೃಂಗಾರ, ವಿಪ್ರಲಂಬ ಶೃಂಗಾರ ರಸಗಳನ್ನು ಮನಮೋಹಕವಾಗಿ ಚಿತ್ರಿಸಿದ್ದರು. ಹರಿಹರ ಮಹಾಕವಿ ಅಯ್ದುಕೊಂಡ ಕಥಾ ವಸ್ತುಗಳು ತಮಿಳುನಾಡಿನ ಶಿವಭಕ್ತರವು. ಆದರೂ ಆಯಾ ಕಥೆಗಳಲ್ಲಿ ಸುಳಿವಪಾತ್ರಗಳಾತ್ಮ ವೀರಶೈವ ಶರಣರ ಸಂಪ್ರದಾಯಕ್ಕೆ ಸಾಕ್ಷಿ. ಬಳಿಕ ಹರಿದಾಸರಲ್ಲೂ, ಸೂಫಿಗಳಲ್ಲೂ ಇಂಥ ರಮ್ಯ ಕಥನಗಳು ಕಂಡುಬರುತ್ತವೆ. ಕನಕದಾಸರ ಮೋಹನ ತರಂಗಣಿಯನ್ನು ಇಲ್ಲಿ ಸ್ಮರಿಸಬಹುದು.

ಪ್ರಸಿದ್ಧ ಸೂಫಿ ಕವಿಗಳಾದ, ಸನಾಯಿ, ನಿಜಾಮಿ, ಅತಾರ ರೂಮಿ ಮುಂತಾದವರ ಅನುಭಾವ ಚೈತನ್ಯದಿಂದ ಮೂಡಿ ಬಂದ ಹಾಡುಗಳಿಂದ ಪ್ರಭಾವಿತರಾದ ಅಸಂಖ್ಯಾತ ಸೂಫಿಗಳು ಮಧ್ಯ ಏಷಿಯಾ ಮತ್ತು ಇರಾನ್ ದೇಶಗಳಿಂದ ಶತಮಾನಗಳವರೆಗೆ ಭಾರತಕ್ಕೆ ಭೇಟಿ ನಿಡಿದ್ದರು. ಒಂದು ಹೊಸ ಪ್ರಪಂಚವನ್ನೇ ಭಾರತಕ್ಕೆ ಹೊತ್ತು ತಂದರು. ಆದರೆ ಭಾರತದ ವೇದಾಂತ ಅವರ ಮೇಲೆ ದಟ್ಟ ಪರಿಣಾಮ ಬೀರಿತು.

ಕರ್ನಾಟಕದ ಶಿರಹಟ್ಟಿಯ ಜಗದ್ಗುರು ಫಕೀರೇಶ್ವರ, ಸಾವಳಗಿಯ ಶಿವಲಿಂಗೇಶ್ವರ, ಅಥಣಿಯ ಮೌನೇಶ್ವರ, ಯಮನೂರಿನ ಚಾಂಗದೇವಮಠ, ಕೊಡೇಕಲ್ಲ ಬಸವೇಶ್ವರ ಮುಂತಾದುವು ಮುಸಲ್ಮಾನ ಹಾಗೂ ಹಿಂದು ಸಮಾಜಕ್ಕೆ ಪ್ರೀಯವಾದರೆ, ಉತ್ತರ ಭಾರತದಲ್ಲಿ ಕಬೀರ, ಸೂರದಾಸ ಮತ್ತು ನಾನಕ ಸುಪ್ರಸಿದ್ಧರಾಗಿದ್ದಾರೆ. ಮಧ್ಯ ಏಷಿಯಾದಿಂದಲೂ ಬಂದ ಸೂಫಿಗಳು ಸೂರದಾಸ್, ಕಬೀರದಾಸರಂಥ ಸಂತ ಕವಿಗಳ ಪ್ರಭಾವಕ್ಕೊಳಗಾಗಿದ್ದನ್ನು ಕಾಣಬಹುದು. 16ನೇ ಶತಮಾನದ ಬಳಿಕ ಸೂಫಿಗಳ ಸಾಹಿತ್ಯ ಕಬೀರ ಸೂರದಾರಂಥ ಸಂತ ಕವಿಗಳ ಸೆಳೆತಕ್ಕೊಳಗಾಗಿದ್ದು, ಪ್ರಣಯವನ್ನೇ ಕೇಂದ್ರವನ್ನಾಗಿಟ್ಟುಕೊಂಡು ದೂಹೆ, ಮಸ್ನವಿ ಹಾಗೂ ಗಜಲ್‌ಗಳನ್ನು ರಚಿಸಿದರು. ಇಂಥ ಕವಿಗಳಲ್ಲಿ ಷಹಾಅಬುದುಲತೀಫ್, ಬಾಬಾ ಬುಲ್ಲೇಷಹಾ ಶೇಖ್‌ನೂರುದ್ದೀನ್ ನೌರಾನಿ, ಷಹಾ ಖಲಂದರ್, ಷಮ್‌ಷುಲ್ ಇಲಾಕ ಬಿಜಾಪುರಿ, ಖ್ವಾಜಾ ಬಂದೇವನಾಜ್ ಮುಂತಾದವರನ್ನು ಇಲ್ಲಿ ಹೆಸರಿಸಬಹುದು.

ಸುಪ್ರಸಿದ್ಧ ಸೂಫಿ, ವಿಶಿಷ್ಟ ಕವಿಯಾಗಿದ್ದ ಷಾಹಅಬುಲತೀಫರ ಕೃತಿ 'ಶಶಿಪುನ್ನು' ಹಲವು ಕಾರಣಗಳಿಂದ ಪ್ರಸ್ತುತ. ಸಿಂಧ್ ಪ್ರಾಂತ್ಯದ ಈತ



ಪವಿತ್ರ ಖುರಾನ್, ಹದೀಸ್ ಜೊತೆಗೆ ವೇದಾಂತವನ್ನು ಅಭ್ಯಾಸ ಮಾಡಿದ್ದ. ಬಲೂಚಿ, ಹಿಂದಿ, ಪಂಜಾಬಿ, ಭಾಷೆಗಳನ್ನು ಬಲ್ಲವನಾಗಿದ್ದನು. ಅರಬ್ಬಿ ಫಾರ್ಸಿ ಭಾಷೆಗಳ ಪರಿಚಯವು ಇದ್ದಿತು. ಈತ ಶಶಿಪುನ್ನು ಕೃತಿಯು ರಸಿಕತೆಯಿಂದಲೂ, ಆಧ್ಯಾತ್ಮ ಆಳದಿಂದಲೂ ಗಮನ ಸೆಳೆಯುತ್ತದೆ. ಕಾಶ್ಮೀರದ ಸೂಫಿಗಳು ವೈಷ್ಣವ ಮತದಿಂದಲೂ ಬೌದ್ಧ, ಶೈವ ಧರ್ಮಗಳಿಂದಗಲೂ ಪ್ರಭಾವಿತರಾಗಿದ್ದನ್ನು ಸ್ಮರಿಸಬಹುದು. ಈ ಸೂಫಿಗಳು ತಸವುಫ್ ಕಾಶ್ಮೀರದ ಮಣ್ಣಿನ ಗುಣವನ್ನು ಪಡೆದು ಬೆಳೆದಿದ್ದು, ಕಾಶ್ಮೀರದ ಸೂಫಿಗಳನ್ನು ಋಷಿಗಳೆಂದೂ ಕರೆಯುವುದು ರೂಢಿ. ಸೂಫಿ ಅಲ್ಲಾ ಆರಿಫ್, ಶೇಖ್ ನವಾಜುದ್ದೀನರು ರಚಿಸಿದ ಸಾಹಿತ್ಯದಲ್ಲಿ ಈ ಎಲ್ಲಾ ಅಂಶಗಳನ್ನು ಕಾಣಲು ಸಾಧ್ಯ. ಈ ಎಲ್ಲಾ ಕಾರಣಗಳಿಂದಾಗಿ ಶಿವಶರಣರ, ಸೂಫಿಗಳ ಸಾಹಿತ್ಯದ ಅಧ್ಯಯನದಿಂದ ಸತ್ಯ– ಸೌಂದರ್ಯ ಸಂಗಮವನ್ನು ಕಾಣಬಹುದು. ಅದೇ ರೀತಿ ಶ್ರೀ ಸಾಮಾನ್ಯನೂ ಶ್ರೇಷ್ಠ ಭಕ್ತನಾಗಿ, ಆಧ್ಯಾತ್ಮದ ಹಾದಿಯ ಮೂಲಕ ಮುಕ್ತಿಯ ಮಹೋನ್ನತಿಯನ್ನು ಪಡೆಯಬಹುದು ಎಂಬುದನ್ನು ಈ ಅಧ್ಯಯನದಿಂದ ವೇದ್ಯವಾಗುತ್ತದೆ.

ಮುಂದುವರೆಯುವುದು...

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)